15 August 2026 Saturday SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 251 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

**ಭಾವನಾಂತರಂಗ**

ಆತ್ಮೀಯರಿಗಿಂತ,
ಅಪಹಾಸ್ಯ ಮಾಡಿದವರು ನೆನಪಿನಲ್ಲಿ ಜಾಸ್ತಿ
ಉಳಿಯುತ್ತಾರೆ!

-ಸ್ನೇಹಾ ಆನಂದ್



ಜಿಡಿದಿ ಟೌನ್ ಶಿಪ್ ಹೋರಾಟಕ್ಕೆ ಜೆಎನ್–ಜಿ ಬರಲಿ: ದೇವನೂರು — ಪುಟ ಸಂ. 2



ಕಾವೇರಿ ವಿಚಾರದಲ್ಲಿ : ಕೇಂದ್ರದವರ ಧ್ವನಿ ಇಲ್ಲವೇ? — ಪುಟ ಸಂ. 3



ಚಾ.ನಗರ: ಬಿಜೆಪಿ ಯುವಮೋರ್ಚಾದಿಂದ ತಿರಂಗಾಯಾತ್ರೆ — ಪುಟ ಸಂ. 4

**ಶುಭಾಶಯಗಳು**

ವರ್ತಮಾನ ಪ್ರಾದೇಶಿಕ ದಿನಪತ್ರಿಕೆಯ ಸಮಸ್ತ ಓದುಗರಿಗೆ, ಜಾಹೀರಾತುದಾರರಿಗೆ 80ನೇ ಸ್ವಾತಂತ್ರ್ಯ ದಿನದ ಶುಭಾಶಯಗಳು

▶▶ ಸಂಪಾದಕ

**ಬಿಡುವು**

ಸ್ವಾತಂತ್ರ್ಯೋತ್ಸವ ನಿಮಿತ್ತ ಶನಿವಾರವಾರ ಕಚೇರಿಗೆ ರಜೆ ಇರುವುದರಿಂದ ಭಾನುವಾರದ ಸಂಚಿಕೆ ಪ್ರಕಟವಾಗುವುದಿಲ್ಲ.

# ಅಭಿವೃದ್ಧಿಗೆ 'ಟೀಮ್ ಕರ್ನಾಟಕ'

## ಕೃಷಿಗೆ ಇನ್ನೂ ಹೆಚ್ಚಿನ ಉತ್ತೇಜನ: ಸಿಎಂ ಡಿಕೆಶಿ ಘೋಷಣೆ

**ಬೆಂಗಳೂರು:** ನಮ್ಮೆಲ್ಲ ಸಚಿವರು, ಶಾಸಕರ ಜತೆಯಲ್ಲಿ ವಿರೋಧ ಪಕ್ಷದ ನಾಯಕರು, ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು 'ಟೀಮ್ ಕರ್ನಾಟಕ'ವಾಗಿ ರಾಜ್ಯದ ಜನರ ಅಭಿವೃದ್ಧಿಗೋಸ್ಕರ ಕೆಲಸ ಮಾಡುತ್ತೇವೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಘೋಷಿಸಿದರು.

ವಿಧಾನಸಭಯಲ್ಲಿ ಶುಕ್ರವಾರ ಮಾತನಾಡಿದ ಅವರು, ಇಡೀ ವಿಶ್ವ ಭಾರತದ ಮೂಲಕ ಕರ್ನಾಟಕ, ಬೆಂಗಳೂರನ್ನು ನೋಡುತ್ತಿದೆ. ನಮ್ಮಲ್ಲಿರುವಷ್ಟು ಯುವ ಸಂಪತ್ತು, ಪ್ರಕೃತಿ ಸಂಪತ್ತು ಬೇರೆಡೆ ಇಲ್ಲ. ಕೃಷಿಗೆ ಇನ್ನೂ ಹೆಚ್ಚಿನ ಉತ್ತೇಜನ ಕಾರ್ಯಕ್ರಮ ರೂಪಿಸುತ್ತೇವೆ ಎಂದು ತಿಳಿಸಿದರು.

ಜಗತ್ತಿನ ವಿವಿಧ ದೇಶದ ಜನರು ಬೆಂಗಳೂರಿನಲ್ಲಿ ವಾಸಿಸುತ್ತಿದ್ದಾರೆ. ಕಾವೇರಿ ತಾಯಿ ಎಲ್ಲರಿಗೂ ಆಶೀರ್ವಾದಿಸುತ್ತಿದ್ದಾಳೆ. ಎಲ್ಲರಿಗೂ ಉತ್ತಮ ಶಿಕ್ಷಣ, ಆರೋಗ್ಯ, ಪರಿಸರ ಒದಗಿಸುವುದು ಸರ್ಕಾರ ಉದ್ದೇಶವಾಗಿದೆ ಎಂದು ತಿಳಿಸಿದರು.

ಬೇರೆ ಕೆಲಸಗಳಿಗಿಂತ ಇಂದು ಕೃಷಿ ಮತ್ತು ಹೈನುಗಾರಿಕೆಯಲ್ಲಿ ಎಲ್ಲರೂ ತೊಡಗಿಕೊಳ್ಳುವ ಅವಕಾಶವಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ತಮ್ಮ ಭಾಗಗಳಲ್ಲಿಯೇ ಶಿಕ್ಷಣ ಪಡೆಯಲು ಯೋಜನೆಗಳನ್ನು ರೂಪಿಸಲಾಗವುದು. ಈ ಮೂಲಕ ನಗರದತ್ತ ವಲಸೆ ಬರುವ ಅವಶ್ಯಕತೆ ಇಲ್ಲ ಎಂದರು.

ಬೆಲೆಗಳೆಲ್ಲ ಗಗನಕ್ಕೆ ಏರಿತ್ತು. ಈ ವೇಳೆ ಜನರಿಗಾಗಿ ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ನಮ್ಮ ಸರ್ಕಾರ ಇರುವುದು ಜನರಿಗೋಸ್ಕರ ಎಂದು ಡಿ.ಕೆ.ಶಿವಕುಮಾರ್ ಒತ್ತಿ ಹೇಳಿದರು.

ಸಿದ್ದರಾಮಯ್ಯ ನೀಡಿದ ಅನ್ನ ಪುಟ 2ಕ್ಕೆ



### 224 ಶಾಸಕರೂ ಒಂದೇ

**ಬೆಂಗಳೂರು:** ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಯಲ್ಲಿ ಜನರು ವಿವಿಧ ರೀತಿಯಲ್ಲಿ ಏನೇ ತೀರ್ಮಾನ ಮಾಡಿದ್ದರೂ ನಾವು ಒಪ್ಪಬೇಕು. ಆದರೆ ಈಗ ನನಗೆ ಸಿಕ್ಕಿರುವ ಅವಕಾಶದಲ್ಲಿ ವಿಪಕ್ಷ ಶಾಸಕರು ಸೇರಿದಂತೆ ಎಲ್ಲಾ 224 ಶಾಸಕರೂ ನನ್ನ ದೃಷ್ಟಿಯಲ್ಲಿ ಒಂದೇ. ನಾನು ಈ ಸ್ಥಾನದಲ್ಲಿ ಕೂತು ಎಲ್ಲರನ್ನು ಒಟ್ಟಿಗೆ ಕರೆದೊಯ್ಯುವ ಕೆಲಸ ಮಾಡುತ್ತೇನೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ರಾತ್ರಿ ಸಮಯದಲ್ಲಿ ಪುಟ 2ಕ್ಕೆ



## ಮಹಿಳೆಗೆ ಸಿಗದ ಸಚಿವ ಸ್ಥಾನ: ಬಿಜೆಪಿ ಶಾಸಕರ ಪ್ರತಿಭಟನೆ

**ಬೆಂಗಳೂರು:** ಡಿ.ಕೆ.ಶಿವಕುಮಾರ್ ನೇತೃತ್ವದ ಸಚಿವ ಸಂಪುಟದಲ್ಲಿ ಮಹಿಳಾ ಶಾಸಕರಿಗೆ ಸಚಿವರಿಗೆ ಸ್ಥಾನ ನೀಡದಿರುವುದನ್ನು ಖಂಡಿಸಿ ಬಿಜೆಪಿ ಶಾಸಕರು ಶುಕ್ರವಾರ ವಿಧಾನಸೌಧದ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ಆಡಳಿತಾರೂಢ ಕಾಂಗ್ರೆಸ್ ಸರ್ಕಾರವನ್ನು ಮಹಿಳಾ ವಿರೋಧಿ ಎಂದು ಟೀಕಿಸಿದ ಬಿಜೆಪಿ ಶಾಸಕರು, ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ವಿಧಾನಸೌಧದ ಆವರಣದ ಪ್ರವೇಶದ್ವಾರದ ಬಳಿಯಿರುವ ನಾಡದೇವಿ ಭುವನೇಶ್ವರಿ ಪ್ರತಿಮೆ ಸಮೀಪ ಬಿಜೆಪಿ ಶಾಸಕರು ಜಮಾಯಿಸಿ, ಬಳಿಕ ವಿಧಾನ ಸೌಧದತ್ತ ಮೆರವಣಿಗೆ ನಡೆಸಿದರು.

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಪ್ರತಿಭಟನೆ ನೇತೃತ್ವ ವಹಿಸಿದ್ದರು. ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ ಸೇರಿದಂತೆ ಮಹಿಳಾ ಶಾಸಕರು ಭಾಗವಹಿಸಿದ್ದರು.

## ಜಿಲ್ಲಾ ಉಸುವಾರಿ ಬೇಡ, ಧ್ವಜಾರೋಹಣವೂ ಬೇಡ!

### ಮತ್ತೆ ವಿವಾದ ಸೃಷ್ಟಿಸಿದ ಸಚಿವ ಜಮೀರ್ ಅಹ್ಮದ್



**ಬೆಂಗಳೂರು:** ವಸತಿ ಸಚಿವ ಜಮೀರ್ ಅಹ್ಮದ್ ಮತ್ತೊಮ್ಮೆ ವಿವಾದದ ಕೇಂದ್ರ ಆಗಿದ್ದಾರೆ. ಸಮಯದ ಕೊರತೆ ಉಲ್ಲೇಖಿಸಿ ವಿಜಯನಗರ ಜಿಲ್ಲಾ ಉಸ್ತುವಾರಿ ವಹಿಸಿಕೊಳ್ಳಲು ನಿರಾಕರಿಸಿದ್ದಾರೆ.

ಅಲ್ಲದೆ, ಜಮೀರ್ ಅವರು ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ವಿಜಯನಗರದಲ್ಲಿ ತ್ರಿವರ್ಣ ಧ್ವಜಾರೋಹಣ ಮಾಡುವ ಕರ್ತವ್ಯದಿಂದಲೂ ವಿನಾಯಿತಿ ನೀಡುವಂತೆ ಮನವಿ ಮಾಡಿರುವುದು ವಿವಾದಕ್ಕೆ ಕಾರಣವಾಗಿದೆ. ಸಚಿವರಾದ ವ್ಯಕ್ತಿಗೆ ಧ್ವಜಾರೋಹಣ ಮಾಡುವುದಕ್ಕಿಂತ ಮತ್ತೇನು ಮಹತ್ವದ ಕೆಲಸವಿದೆ ಎಂದು ಸಾರ್ವಜನಿಕವಾಗಿ ಆಕ್ರೋಶ ವ್ಯಕ್ತವಾಗಿದೆ. ಜಮೀರ್ ನಡೆಯನ್ನು ಸಾಮಾಜಿಕ ಜಾಲತಾಣದಲ್ಲಿ ಖಂಡಿಸಲಾಗಿದೆ.

### ಸಚಿವ ಸ್ಥಾನದಿಂದ ಜಮೀರ್ ವಜಾಕ್ಕೆ ಬಿಜೆಪಿ ಒತ್ತಾಯ

**ಬೆಂಗಳೂರು:** ಸಚಿವ ಜಮೀರ್ ಅಹ್ಮದ್ ನಡೆಗೆ ವಿಪಕ್ಷ ಶಾಸಕರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಸಚಿವರಿಗೆ ಸ್ವಾತಂತ್ರ್ಯ ದಿನಾಚರಣೆ ಧ್ವಜಾರೋಹಣ

ಮಾಡುವುದಕ್ಕಿಂತ ಮಹತ್ವದ ಖಾಸಗಿ ಕೆಲಸ ವಿದ್ದರೆ ಸಚಿವ ಸ್ಥಾನದಿಂದ ವಜಾ ಮಾಡಬೇಕು ಎಂದು ಬಿಜೆಪಿ ಆಗ್ರಹಿಸಿದೆ. ಕಾಂಗ್ರೆಸ್ ಸರ್ಕಾರದ ನಿಜವಾದ ಮುಖ ಹಾಗೂ ನಮ್ಮ ಮಾತೃಭೂಮಿಯ ಬಗ್ಗೆ ಅದರ ಸಂಪೂರ್ಣ ಅಗೌರವದ ನಡವಳಿಕೆ ಜಮೀರ್ ಮೂಲಕ ಬಹಿರಂಗವಾಗಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಪುಟ 2ಕ್ಕೆ

## ಶ್ರೀನಿವಾಸ ಮಾನೆ ಕೆಎಚ್‌ಬಿ ಅಧ್ಯಕ್ಷ



ಬೆಂಗಳೂರು: ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರನ್ನಾಗಿ ಹಾನಗಲ್ ಕ್ಷೇತ್ರದ ಶಾಸಕ ಶ್ರೀನಿವಾಸ ಮಾನೆ ಅವರನ್ನು ನೇಮಕ ಮಾಡಲಾಗಿದೆ. ಈ ಸಂಬಂಧ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪತ್ರ ಬರೆದಿದ್ದಾರೆ.

ಸಚಿವರಾಗಿ ಅಧಿಕಾರ ವಹಿಸಿಕೊಂಡಿರುವ ಶಾಸಕ ಕೆ.ಎಂ. ಶಿವಲಿಂಗೇಗೌಡ ಮಂಡಳಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಸಚಿವ ಸ್ಥಾನದ ಆಕಾಂಕ್ಷಿಯಾಗಿದ್ದ ಮಾನೆ ಅವರಿಗೆ ಮಂಡಳಿಯ ಹೊಣೆ ನೀಡಲು ಸಿಎಂ ಮುಂದಾಗಿದ್ದಾರೆ.



ಗುರುವಾರ ಅಂಗೈಕ್ಯರಾದ ಹೊಸಮಠದ ಚಿದಾನಂದ ಸ್ವಾಮೀಜಿ ಅವರ ಅಂತಿಮ ಯಾತ್ರೆ ಶುಕ್ರವಾರ ಮೈಸೂರಿನ ಪ್ರಮುಖ ರಸ್ತೆಗಳಲ್ಲಿ ನಡೆಯಿತು.

## 2,110 ಕೋಟಿ ವಂಚನೆ: ಶಿವಾನಂದ್ ಬಂಧಿಸಿದ ಇಡಿ

**ಬೆಂಗಳೂರು:** ಬೆಳಗಾವಿ ಶಿವಂ ಅಸೋಸಿಯೇಟ್ಸ್ ವಂಚನೆ ಪ್ರಕರಣದಲ್ಲಿ ಶಿವಾನಂದ ನೀಲಣ್ಣನವರ್ ಅವರನ್ನು ಇಡಿ ಅಧಿಕಾರಿಗಳು ಬಂಧಿಸಿದ್ದಾರೆ.

ಮಂಗಳೂರು ವಲಯ ಇಡಿ ಅಧಿಕಾರಿಗಳು ನೀಲಣ್ಣನವರ್‌ನನ್ನು ಬಂಧಿಸಿದ್ದಾರೆ. ಮಂಗಳೂರು ಇಡಿ ವಿಶೇಷ ನ್ಯಾಯಾಲಯ ಆರೋಪಿಯನ್ನು 12 ದಿನಗಳ ಕಾಲ ಕಸ್ಟಡಿಗೆ ನೀಡಿ ಆದೇಶ ಹೊರಡಿಸಿದೆ.

ಇಡಿ ತನಿಖೆಯಲ್ಲಿ ಪ್ರಕರಣ ಅನೇಕ ವಿಚಾರ ಬಯಲಾಗಿದೆ. ಶಿವಾನಂದ ಕಂಪನಿಯ ಹಣದ ವ್ಯವಹಾರದ ಮುಖ್ಯ ವ್ಯಕ್ತಿಯಾಗಿದ್ದು, ರಾಜ್ಯ ಮಾತ್ರವಲ್ಲದೇ ಮಹಾರಾಷ್ಟ್ರ, ಗೋವಾ, ಛತ್ತೀಸ್‌ಗಢದಾದ್ಯಂತ ಹೂಡಿಕೆ ಸಂಗ್ರಹ ಮಾಡಿದ್ದಾನೆ. ಪೋಂಜಿ ಶೈಲಿ ಸ್ಕೀಮ್ ಮೂಲಕ ಅಕ್ರಮವಾಗಿ 2,110



ಕೋಟಿ ರೂ. ಸಂಗ್ರಹಿಸಲಾಗಿದೆ. ಆದರೆ ಒಂದು ಭಾಗದಷ್ಟು ಮಾತ್ರ ಹಣ ಮರುಪಾವತಿ ಮಾಡಲಾಗಿದೆ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಸಂಸ್ಥೆಯು 2019ರಿಂದ ಷೇರು ಮಾರುಕಟ್ಟೆಯಲ್ಲಿ ತೀವ್ರ ನಷ್ಟವನ್ನು ಅನುಭವಿಸಿದೆ. ಈ ನ್ಯೂನತೆ ಮರೆಮಾಚಲು ಮತ್ತು ಮಾರುಕಟ್ಟೆ ಆಕರ್ಷಣೆ ಉಳಿಸಿಕೊಳ್ಳಲು, ಹೂಡಿಕೆದಾರರಿಂದ ಸಂಗ್ರಹಿಸಲಾದ ಹೊಸ ಮೂಲ ಠೇವಣಿ ಹಣವನ್ನು ಪುಟ 2ಕ್ಕೆ

## ಎರಡೇ ದಿನಕ್ಕೆ ತಂಬಾಕು, ಗುಟ್ಕಾ ನಿಷೇಧ ವಾಪಸ್!

**ಬೆಂಗಳೂರು:** ತಂಬಾಕು ಅಥವಾ ನಿಕೋಟಿನ್ ಒಳಗೊಂಡಿರುವ ಗುಟ್ಕಾ ಹಾಗೂ ಪಾನ್ ಮಸಾಲಾ ಉತ್ಪನ್ನಗಳ ಮೇಲೆ ಹೇರಿದ್ದ ಒಂದು ವರ್ಷದ ನಿಷೇಧವನ್ನು ಹಿಂಪಡೆಯಲು ಸರ್ಕಾರ ನಿರ್ಧರಿಸಿದೆ. ನಿಷೇಧ ಜಾರಿಗೆ ಬಂದ ಕೇವಲ ಎರಡು ದಿನಗಳಲ್ಲೇ ಸರ್ಕಾರ ಈ ನಿರ್ಧಾರ ಕೈಗೊಂಡಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಅಧಿಕಾರಿಗಳಿಗೆ ನಿಷೇಧ ಆದೇಶವನ್ನು ಹಿಂಪಡೆಯುವಂತೆ ಸೂಚಿಸಿದ್ದಾರೆ. ರಾಜ್ಯಾದ್ಯಂತ ತಂಬಾಕು ಅಥವಾ ನಿಕೋಟಿನ್ ಒಳಗೊಂಡ ಗುಟ್ಕಾ ಮತ್ತು ಪಾನ್ ಮಸಾಲಾ ಉತ್ಪನ್ನಗಳ ತಯಾರಿಕೆ, ಸಂಗ್ರಹಣೆ, ವಿತರಣೆ, ಸಾಗಣೆ ಮತ್ತು ಮಾರಾಟಕ್ಕೆ ಆಹಾರ ಸುರಕ್ಷತಾ ಆಯುಕ್ತರು ಒಂದು ವರ್ಷದ ನಿಷೇಧ ವಿಧಿಸಿದ್ದರು.




ತಮ್ಮ ಗಮನಕ್ಕೆ ತಾರದೆ ಈ ಆದೇಶ ಹೊರಡಿಸಿರುವುದಕ್ಕೆ ಡಿ.ಕೆ.ಶಿವಕುಮಾರ್ ಅಸಮಾಧಾನಗೊಂಡಿದ್ದರು. ಈ ನಿಷೇಧದಿಂದ ಹಲವು ರೈತರಿಗೆ ನಷ್ಟ ಉಂಟಾಗಬಹುದು ಎಂಬ ಕಾರಣ ನೀಡಿ, ಆದೇಶವನ್ನು ತಕ್ಷಣ ಪುಟ 2ಕ್ಕೆ

## ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಸಲೀಂ ಅಹ್ಮದ್ ಆಯ್ಕೆ

**ಬೆಂಗಳೂರು:** ರಾಜ್ಯ ವಿಧಾನಮಂಡಲ ಮುಂಗಾರು ಅಧಿವೇಶನದ ಎರಡನೇ ದಿನವಾದ ಶುಕ್ರವಾರ ವಿಧಾನ ಪರಿಷತ್ ಸಭಾ ಪತಿ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಸಲೀಂ ಅಹ್ಮದ್ ಆಯ್ಕೆಯಾದರು.



ಧ್ವನಿಮತದ ಮೂಲಕ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ಸಲೀಂ ಅಹ್ಮದ್ ಪರವಾಗಿ 38 ಮತಗಳು ಚಲಾವಣೆ ನಡೆಯಿತು. ಬಿಜೆಪಿಯ ಪಿ.ಎಚ್.ಪೂಜಾರ್ ಪರವಾಗಿ 30 ಮತಗಳು ಚಲಾವಣೆಯಾದವು.

ಬಸವರಾಜ ಹೊರಟ್ಟಿ ರಾಜೀನಾಮೆಯಿಂದ ತೆರವಾಗಿದ್ದ ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಕಾಂಗ್ರೆಸ್ ನಿಂದ ಸಲೀಂ ಅಹ್ಮದ್ ಹಾಗೂ ಮೈತ್ರಿಕೂಟದಿಂದ ಬಿಜೆಪಿಯ ಪಿ.ಎಚ್. ಪೂಜಾರ್ ಕಣದಲ್ಲಿದ್ದರು.

ವಿಧಾನ ಪರಿಷತ್ ನಲ್ಲಿ ಒಟ್ಟು 75 ಸ್ಥಾನಗಳ ಪೈಕಿ ಕಾಂಗ್ರೆಸ್ 38, ಬಿಜೆಪಿ 25, ಜೆಡಿಎಸ್ 6, ಪಕ್ಷೇತರ–1 ಸ್ಥಾನ ಗಳಿವೆ. ಐದು ಪುಟ 2ಕ್ಕೆ

## 2ನೇ ಹಂತದ ಜನಗಣತಿ ಘೋಷಣೆ

### ಜಾತಿ ಸೇರಿದಂತೆ 40 ಮಾಹಿತಿ ನೀಡಲು ಕೇಂದ್ರದ ಅಧಿಸೂಚನೆ

**ನವದೆಹಲಿ:** ದೇಶದ ಜನರ ಸಮಗ್ರ ಮಾಹಿತಿ ಸಂಗ್ರಹಿಸುವ ಎರಡನೇ ಹಂತದ ಜನಗಣತಿಗೆ ಕೇಂದ್ರ ಸರ್ಕಾರ ಶುಕ್ರವಾರ ಅಧಿಸೂಚನೆ ಪ್ರಕಟಿಸಿದೆ.

ಸ್ವತಂತ್ರ ಭಾರತದ ಇತಿಹಾಸದಲ್ಲೇ ಮೊದಲ ಬಾರಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸೇರಿದಂತೆ ಜಾತಿ ಮಾಹಿತಿಯನ್ನು ಪಡೆಯಲಾಗುತ್ತದೆ.

ಜಾತಿ ವಿವರ ದಾಖಲಿಸಲು ಪ್ರತ್ಯೇಕ ಮುಕ್ತ ಕಾಲಂ ಇರಲಿದೆ. ವ್ಯಕ್ತಿಯು ತನ್ನ ಜಾತಿ ಅಥವಾ ಉಪಜಾತಿಯನ್ನು ಹೇಗೆ ಹೇಳುತ್ತಾರೋ ಅದೇ ರೀತಿ ಗಣತಿದಾರರು ದಾಖಲಿಸಲಿದ್ದಾರೆ. ಜನಸಂಖ್ಯೆ ಲೆಕ್ಕಾಚಾರದ ಹಂತಕ್ಕಾಗಿ ಜುಲೈ 1ರಿಂದ 20ರವರೆಗೆ 16 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆದ ಪೂರ್ವ ಪರೀಕ್ಷೆ ಬಳಿಕವೂ ಇದೇ ಮಾದರಿ ಮುಂದುವರಿಸಲಾಗಿದೆ.

2027ರಲ್ಲಿ ಸಂಗ್ರಹಿಸಲಾಗುವ ಮಾಹಿತಿಯ ವ್ಯಾಪ್ತಿಯನ್ನೂ ಕೇಂದ್ರ ಸರ್ಕಾರ ವಿಸ್ತರಿಸಿದೆ.

ಜನಸಂಖ್ಯಾ ಹಾಗೂ ಸಾಮಾಜಿಕ–ಆರ್ಥಿಕ ಮಾಹಿತಿಯ ಜೊತೆಗೆ ಗುರುತಿನ ದಾಖಲೆಗಳು ಮತ್ತು ವಿವಿಧ ಸೇವೆಗಳಿಗೆ ಸಂಬಂಧಿಸಿದಂತೆ 40 ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ. ಆಧಾರ್ ಸಂಖ್ಯೆ, ಮೊಬೈಲ್ ಸಂಖ್ಯೆ, ವೋಟರ್ ಐಡಿ ಸಂಖ್ಯೆ, ಪಾಸ್‌ಪೋರ್ಟ್ ಮತ್ತು



ಡ್ರೈವಿಂಗ್ ಲೈಸೆನ್ಸ್ ವಿವರಗಳನ್ನು ಕೂಡ ಪಡೆಯಲಾಗುತ್ತದೆ. ಮುಖ್ಯ ಜನಗಣತಿ ಕಾರ್ಯವನ್ನು 2027ರ ಫೆಬ್ರವರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ.

40 ಪ್ರಶ್ನೆಗಳ ವೇಳಾಪಟ್ಟಿಯಲ್ಲಿ ವ್ಯಕ್ತಿಯ ಹೆಸರು, ವಯಸ್ಸು, ಲಿಂಗ, ವೈವಾಹಿಕ ಸ್ಥಿತಿ, ಪತಿ ಅಥವಾ ಪತ್ನಿಯ ಹೆಸರು, ರಾಷ್ಟ್ರೀಯತೆ, ಧರ್ಮ, ಜಾತಿ ಅಥವಾ ಪಂಗಡ ಮತ್ತು ತಂದೆ–ತಾಯಿಯ ವಿವರಗಳನ್ನು ಪಡೆಯಲಾಗುತ್ತದೆ. ಶಿಕ್ಷಣಕ್ಕೆ ಸಂಬಂಧಿಸಿದಂತೆ ಸಾಕ್ಷರತೆ, ಡಿಜಿಟಲ್ ಸಾಕ್ಷರತೆ, ಶಿಕ್ಷಣ ಸಂಸ್ಥೆಗಳಲ್ಲಿ ಹಾಜರಾತಿ ಮತ್ತು ಪಡೆದಿರುವ ಗರಿಷ್ಠ ಶಿಕ್ಷಣದ ಮಟ್ಟದ ಕುರಿತು ಮಾಹಿತಿ ಸಂಗ್ರಹಿಸಲಾಗುತ್ತದೆ. ವ್ಯಕ್ತಿಯ ಮಾತೃಭಾಷೆ ಹಾಗೂ ಇತರ ಭಾಷೆಗಳ ಕುರಿತು ಮಾಹಿತಿ ದಾಖಲಿಸಲಾಗುತ್ತದೆ.

## ಸಚಿವ ಜಮೀರ್ ಧ್ವಜಾರೋಹಣ ಮಾಡದಷ್ಟು ದೊಡ್ಡವರೇ?

### ಇದು ದೇಶಕ್ಕೆ ಮಾಡಿದ ಅವಮಾನ, ವಿಧಾನಸಭೆಯಲ್ಲಿ ಬಿಜೆಪಿ ಪ್ರತಿಭಟನೆ! ಸಚಿವ ಸ್ಥಾನದಿಂದ ವಜಾಕ್ಕೆ ಒತ್ತಾಯ



**ಬೆಂಗಳೂರು:** ಸ್ವಾತಂತ್ರ್ಯ ದಿನದಂದು ವಿಜಯನಗರದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸುವ ಕರ್ತವ್ಯದಿಂದ ವಿನಾಯಿತಿ ಕೋರಿದ ನಂತರ ಸಚಿವ ಬಿ.ಝಡ್. ಜಮೀರ್ ಅಹ್ಮದ್ ಖಾನ್ ಅವರ ಬದಲಿಗೆ ರಾಜ್ಯ ಸರ್ಕಾರ ಸಚಿವ ಕೆ.ಎಸ್. ಬಸವಂತಪ್ಪ ಅವರಿಗೆ ಆ ಜವಾಬ್ದಾರಿಯನ್ನು ವಹಿಸಿದೆ.

ಬೆಂಗಳೂರಿನ ಚಾಮರಾಜಪೇಟೆ ಕ್ಷೇತ್ರದ ಶಾಸಕರಾಗಿರುವ ಖಾನ್, ಸಮಯದ ಅಭಾವವನ್ನು ಕಾರಣವಾಗಿ ನೀಡಿ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವರ ಜವಾಬ್ದಾರಿಯನ್ನು ವಹಿಸಿಕೊಳ್ಳಲು ಕೂಡ ನಿರಾಕರಿಸಿದ್ದಾರೆ. ಧ್ವಜಾರೋಹಣ ಪುಟ 2ಕ್ಕೆ

## ಜಿ.ಎಸ್.ಪಾಟೀಲ್ ನೂತನ ಸ್ಪೀಕರ್



**ಬೆಂಗಳೂರು:** ವಿಧಾನಸಭೆ ಸಭಾಧ್ಯಕ್ಷರಾಗಿ ಜಿ.ಎಸ್.ಪಾಟೀಲ್ ಶುಕ್ರವಾರ ಅವಿರೋಧವಾಗಿ ಆಯ್ಕೆ ಆದರು.

ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರು ನೂತನ ಸಚಿವರನ್ನು ಸದನಕ್ಕೆ ಪರಿಚಯಿಸಿದ ನಂತರ ಹಂಗಾಮಿ ಸಭಾಧ್ಯಕ್ಷ ಟಿ.ಬಿ.ಜಯಚಂದ್ರ ಅವರು ನೂತನ ಸಭಾಧ್ಯಕ್ಷರ ಆಯ್ಕೆ ಪ್ರಸ್ತಾವ ಮಂಡಿಸುವಂತೆ ಮುಖ್ಯಮಂತ್ರಿಗೆ ಸೂಚಿಸಿದರು.

ಗುರುಪಾದಗೌಡ ಸಂಗನಗೌಡ ಪಾಟೀಲ ಅವರನ್ನು ವಿಧಾನಸಭೆಯ ನೂತನ ಸಭಾಧ್ಯಕ್ಷರನ್ನಾಗಿ ಆಯ್ಕೆ ಮಾಡುವ ಪ್ರಸ್ತಾವವನ್ನು ಸಿಎಂ ಮಂಡಿಸಿದರು. ಉಪ ಮುಖ್ಯಮಂತ್ರಿ ಜಿ.ಪರಮೇಶ್ವರ್ ಅನುಮೋದಿಸಿದರು. ಈ ಪ್ರಸ್ತಾಪಕ್ಕೆ ಸದನ ಧ್ವನಿಮತದಿಂದ ಒಪ್ಪಿಗೆ ನೀಡಿತು. ಹಂಗಾಮಿ ಸಭಾಧ್ಯಕ್ಷ

# ಎಸ್‌ಐಗೆ ಕಪಾಳಮೋಕ್ಷ: ಪುತ್ರಿ ಪರ ಕ್ಷಮೆ ಕೇಳಿದ ಶಾಸಕ ಸುರೇಶ್ ಗೌಡ

**ಬೆಂಗಳೂರು:** ಪೊಲೀಸ್ ಸಬ್ ಇನ್‌ಸ್ಪೆಕ್ಟರ್‌ಗೆ (ಪಿಎಸ್‌ಐ) ತಮ್ಮ ಪುತ್ರಿ ಐಶ್ವರ್ಯಾ ಕಪಾಳಮೋಕ್ಷ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಶಾಸಕ ಬಿ.ಸುರೇಶ್ ಗೌಡ ಕ್ಷಮೆಯಾಚಿಸಿದ್ದಾರೆ.

ವಿಧಾನಸೌಧದ ಆವರಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಸುರೇಶ್ ಗೌಡ ಅವರು, ಮಗಳು ಆ ಕ್ಷಣದಲ್ಲಿ ತಾಳ್ಮೆ ಕಳೆದುಕೊಂಡಿದ್ದಾಳೆ. ಸಾರ್ವಜನಿಕ ಜೀವನದಲ್ಲಿರುವವರು ಇಂತಹ ವರ್ತನೆ ತೋರಬಾರದು ಎಂದರು.

ನನ್ನ ಮಗಳದ್ದು ತಪ್ಪಿದ್ದರೆ, ನಾನು ಸಾರ್ವಜನಿಕವಾಗಿ ಕ್ಷಮೆ ಕೇಳಲು ಸಿದ್ಧನಿದ್ದೇನೆ. ಈ ರೀತಿಯ ವರ್ತನೆ ಯಾವುದೇ ಕಾರಣಕ್ಕೂ ಸರಿಯಲ್ಲ. ನನ್ನ ಮಗಳ ವರ್ತನೆಗಾಗಿ ನಾನೇ ಸಾರ್ವಜನಿಕವಾಗಿ ಕ್ಷಮೆಯಾಚಿಸುತ್ತೇನೆಂದು ಹೇಳಿದರು.

ಭೀಮನ ಅಮಾವಾಸ್ಯೆ ದಿನ ತಮ್ಮ ಮಗಳು ಇಬ್ಬರು ಚಿಕ್ಕ



ಮಕ್ಕಳೊಂದಿಗೆ ಶ್ರೀರಂಗಪಟ್ಟಣ ತಾಲೂಕಿನ ಆರತಿ ಉಕ್ಕಡ ದೇವಸ್ಥಾನಕ್ಕೆ ತೆರಳಿದ್ದರು. ದೇವಸ್ಥಾನದಲ್ಲಿ ಭಾರಿ ಸಂಖ್ಯೆಯಲ್ಲಿ ಭಕ್ತರು ಸೇರಿದ್ದ ಸಂದರ್ಭದಲ್ಲಿ ಪಿಎಸ್‌ಐ ಅವರನ್ನು ಒಳಗೆ ಬಿಡಲಿಲ್ಲ. ಆದರೆ, ವಿಐಪಿ ಸಾಲಿನಲ್ಲಿ ಪುಟ 2ಕ್ಕೆ

### ಐಶ್ವರ್ಯಾ ವಿರುದ್ಧ ಎಫ್‌ಐಆರ್

ಆ.12ರಂದು ಭೀಮನ ಅಮಾವಾಸ್ಯೆ ಹಿನ್ನೆಲೆಯಲ್ಲಿ ಶ್ರೀರಂಗಪಟ್ಟಣ ತಾಲೂಕಿನ ಆರತಿ ಉಕ್ಕಡ ದೇವಸ್ಥಾನದಲ್ಲಿ ಸಾವಿರಾರು ಭಕ್ತರು ಸೇರಿದ್ದರು. ಈ ವೇಳೆ ಶಾಸಕ ಸುರೇಶ್ ಗೌಡ ಅವರ ಪುತ್ರಿ ಐಶ್ವರ್ಯಾ ದೇವಸ್ಥಾನದ ಗರ್ಭಗುಡಿ ಸಮೀಪ ತೆರಳಿ ಒಳಗೆ ಪ್ರವೇಶಿಸಲು ಮುಂದಾಗಿದ್ದರು ಎನ್ನಲಾಗಿದೆ. ಕರ್ತವ್ಯದಲ್ಲಿದ್ದ ಪಿಎಸ್‌ಐ ಸವಿತಾ ಅವರು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಇರುವುದರಿಂದ ತಕ್ಷಣ ಒಳಗೆ ಪ್ರವೇಶಿಸಲು ಸಾಧ್ಯವಿಲ್ಲ. ಎಲ್ಲರನ್ನು ಒಳಗೆ ಬಿಟ್ಟರೆ ಸರತಿ ಸಾಲಿನಲ್ಲಿ ನಿಂತಿರುವ ಭಕ್ತರಿಂದ ಗೊಂದಲ ಉಂಟಾಗಬಹುದು. ಪುಟ 2ಕ್ಕೆ

ಮೊದಲ ಪುಟದಿಂದ

## ಸಚಿವ ಸ್ಥಾನದಿಂದ ಜಮೀರ್ ವಜಾಕ್ಕೆ ಬಿಜೆಪಿ ಒತ್ತಾಯ

ಟೀಕಿಸಿದ್ದಾರೆ. ಜಮೀರ್ ನಡವಳಿಕೆ ನಮ್ಮ ಸಂವಿಧಾನಕ್ಕೆ ಸಂಪೂರ್ಣ ಅವಮಾನ ಮತ್ತು ಕೋಟ್ಯಂತರ ಭಾರತೀಯರಿಗೆ ನೇರ ಅಪಮಾನ. ಸ್ವಾತಂತ್ರ್ಯ ದಿನದಂದು ರಾಷ್ಟ್ರಧ್ವಜ ಹಾರಿಸುವ ಪವಿತ್ರ ಕರ್ತವ್ಯಕ್ಕಿಂತ ಪಕ್ಷದ ರಾಜಕಾರಣಕ್ಕೆ ಹೆಚ್ಚಿನ ಆದ್ಯತೆ ನೀಡುವುದನ್ನು ಸಚಿವರೊಬ್ಬರು ಹೇಗೆ ಸಮರ್ಥಿಸಿಕೊಳ್ಳಬಹುದು ಎಂದು ಅಶೋಕ್ ಪ್ರಶ್ನಿಸಿದ್ದಾರೆ.

## ಸಚಿವ ಜಮೀರ್ ಧ್ವಜಾರೋಹಣ ಮಾಡದಷ್ಟು ದೊಡ್ಡವರೇ?

ಕರ್ತವ್ಯದಿಂದ ವಿನಾಯಿತಿ ಕೋರಿದ ಸಚಿವರ ಕ್ರಮವನ್ನು ಬಿಜೆಪಿ ತೀವ್ರವಾಗಿ ವಿರೋಧಿಸಿದ್ದು, ಅವರನ್ನು ಸಂಪುಟದಿಂದ ಕೈಬಿಡುವಂತೆ ಆಗ್ರಹಿಸಿದೆ. ಈ ವಿಷಯವು ವಿಧಾನಸಭೆಯಲ್ಲಿ ಬಿಸಿಬಿಸಿ ಚರ್ಚೆಗೆ ಕಾರಣವಾಯಿತು.

ಸರ್ಕಾರ ಈ ವಿಷಯವನ್ನು ನಿರ್ವಹಿಸಿದ ರೀತಿಯನ್ನು “ಅಪಮಾನಕರ” ಎಂದು ಬಣ್ಣಿಸಿದ ಬಿಜೆಪಿ ಸದಸ್ಯರು ನಂತರ ಸದನದಿಂದ ಹೊರನಡೆದರು. ಈ ಎರಡೂ ಜವಾಬ್ದಾರಿಗಳಿಂದ ವಿನಾಯಿತಿ ಕೋರಿ ಜಮೀರ್ ಅಹ್ಮದ್ ಖಾನ್ ಗುರುವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದರು.

ಮುಂದಿನ ದಿನಗಳಲ್ಲಿ ಉಃಂ ಸೇರಿದಂತೆ ಹಲವು ಸ್ಥಳೀಯ ಸಂಸ್ಥೆಗಳ ಚುನಾವಣೆಗಳು, ವಿಧಾನಸಭೆ ಉಪ ಚುನಾವಣೆ ಮತ್ತು ರಾಜ್ಯದಲ್ಲಿ ಪಕ್ಷ ಸಂಘಟನಾ ಚಟುವಟಿಕೆಗಳು ನಡೆಯಲಿವೆ. ಈ ಜವಾಬ್ದಾರಿಗಳನ್ನು ಗಮನದಲ್ಲಿಟ್ಟುಕೊಂಡು ಜಿಲ್ಲಾ ಉಸ್ತುವಾರಿ ಸಚಿವರ ಕರ್ತವ್ಯಗಳನ್ನು ನಿರ್ವಹಿಸಲು ನನಗೆ ಸಾಕಷ್ಟು ಸಮಯವಿರುವುದಿಲ್ಲ. ಹೀಗಾಗಿ ರಾಜ್ಯದ ಯಾವುದೇ ಜಿಲ್ಲೆಗೆ ನನ್ನನ್ನು ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ನೇಮಿಸದಂತೆ ನಿಮ್ಮಲ್ಲಿ ಕೋರುತ್ತೇನೆ. ಅಲ್ಲದೇ 15.08.2026 ರಂದು ಸ್ವಾತಂತ್ರ್ಯ ದಿನದಂದು ವಿಜಯನಗರದಲ್ಲಿ ಧ್ವಜಾರೋಹಣ ಮಾಡುವ ಜವಾಬ್ದಾರಿಯನ್ನು ನನಗೆ ವಹಿಸಲಾಗಿದೆ. ಅಲ್ಲಿಗೆ ಹಾಜರಾಗಲು ಸಾಧ್ಯವಾಗದ ಕಾರಣ, ಈ ಜವಾಬ್ದಾರಿಯಿಂದ ವಿನಾಯಿತಿಗೊಳಿಸುವಂತೆ ಕೋರುತ್ತೇನೆ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ವಿಜಯನಗರ ಜಿಲ್ಲೆಯಲ್ಲಿ ಬರ ಪರಿಸ್ಥಿತಿಯನ್ನು ಪರಿಶೀಲಿಸಿ ವರದಿ ಸಲ್ಲಿಸುವ ಜವಾಬ್ದಾರಿಯನ್ನು ಈ ಮೊದಲೇ ವಹಿಸಲಾಗಿತ್ತು. ಈಗಾಗಲೇ ಆ ವರದಿಯನ್ನು ಸಲ್ಲಿಸಿರುವುದಾಗಿ ಖಾನ್ ತಿಳಿಸಿದ್ದಾರೆ. ಅವರ ಪತ್ರದ ನಂತರ, ಸರ್ಕಾರವು ಪಟ್ಟಿಯನ್ನು ಪರಿಷ್ಕರಿಸಿ, ವಿಜಯನಗರದಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣದ ಜವಾಬ್ದಾರಿಯನ್ನು ಬಸವಂತಪ್ಪ ಅವರಿಗೆ ವಹಿಸಿತು. ಖಾನ್ ಮತ್ತು ಬಸವಂತಪ್ಪ ಇಬ್ಬರೂ ಆಗಸ್ಟ್ 3 ರಂದು ಸಚಿವರಾಗಿ ಸಂಪುಟವನ್ನು ಸೇರಿದ್ದರು.

## ಐಶ್ವರ್ಯಾ ವಿರುದ್ಧ ಎಫ್ಐಆರ್

ಹೀಗಾಗಿ ಸ್ವಲ್ಪ ಸಮಯ ಕಾಯುವಂತೆ ಸೂಚಿಸಿದ್ದರು ಎನ್ನಲಾಗಿದೆ. ಇದೇ ವೇಳೆ ಮಫ್ತಿಯಲ್ಲಿದ್ದ ಸರ್ಕಲ್ ಇನ್‌ಸ್ಪೆಕ್ಟರ್ ಲಕ್ಷ್ಮಿ ಅವರು ಗರ್ಭಗುಡಿ ಕಡೆಗೆ ತೆರಳಿದಾಗ, ಅವರನ್ನು ಐಶ್ವರ್ಯಾ ಪ್ರಶ್ನಿಸಿದ್ದಾರೆ ಎನ್ನಲಾಗಿದೆ. ಅದಕ್ಕೆ ಅವರು ಕರ್ತವ್ಯದಲ್ಲಿರುವ ಸರ್ಕಲ್ ಇನ್‌ಸ್ಪೆಕ್ಟರ್ ಎಂದು ಪಿಎಸ್ಐ ಸವಿತಾ ವಿವರಿಸಿದ್ದರು. ಈ ಸಂಬಂಧ ಐಶ್ವರ್ಯಾ ಮತ್ತು ಪಿಎಸ್ಐ ಸವಿತಾ ನಡುವೆ ವಾಗ್ವಾದ ನಡೆದಿದೆ. ಐಶ್ವರ್ಯಾ ಅವರು ಪಿಎಸ್ಐಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ, ಕಪಾಳಮೋಕ್ಷ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಈ ಸಂಬಂಧ ಪಿಎಸ್ಐ ಸವಿತಾ ಅವರು ನೀಡಿದ ದೂರಿನ ಆಧಾರದ ಮೇಲೆ ಶ್ರೀರಂಗಪಟ್ಟಣ ತಾಲೂಕಿನ ಕ್ಯಾತನಹಳ್ಳಿ ಪೊಲೀಸ್ ಠಾಣೆಯಲ್ಲಿ ಐಶ್ವರ್ಯಾ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ.

## ಎರಡೇ ದಿನಕ್ಕೆ ತಂಬಾಕು, ಗುಟ್ಕಾ ನಿಷೇಧ ವಾಪಸ್!

ಹಿಂಪಡೆಯುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ ಎನ್ನಲಾಗಿದೆ.

ಇದಕ್ಕೂ ಮುನ್ನ ಗುರುವಾರ ಬಿಜೆಪಿ ಮತ್ತು ಕಾಂಗ್ರೆಸ್ ಶಾಸಕರ ನಿಯೋಗವೊಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ನಿಷೇಧ ಆದೇಶವನ್ನು ಹಿಂಪಡೆಯುವಂತೆ ಮನವಿ ಮಾಡಿತ್ತು. ಬಿಜೆಪಿ ಶಾಸಕ ಆರಗ ಜ್ಞಾನೇಂದ್ರ ಮತ್ತು ಕಾಂಗ್ರೆಸ್ ಶಾಸಕ ಡಿ.ಜಿ. ಶಾಂತನಗೌಡ ನಿಯೋಗದ ನೇತೃತ್ವ ವಹಿಸಿದ್ದರು.

ಸರ್ಕಾರದ ಆದೇಶದಿಂದ ರೈತರಿಗೆ ಆತಂಕ ಉಂಟಾಗಿದ್ದು, ಮಾರುಕಟ್ಟೆ ಮೇಲೂ ಪರಿಣಾಮ ಬೀರಬಹುದು. ಈ ನಿರ್ಧಾರದಿಂದ ಉಂಟಾಗಬಹುದಾದ ನಷ್ಟದಿಂದ ಅಡಿಕೆ ಬೆಳೆಗಾರರನ್ನು ರಕ್ಷಿಸುವಂತೆ ಸಿಎಂಗೆ ಒತ್ತಾಯಿಸಿದ್ದರು.

## ಅಭಿವೃದ್ಧಿಗೆ ‘ಟೀಮ್ ಕರ್ನಾಟಕ’

ಭಾಗ್ಯ ಯೋಜನೆ ಇತಿಹಾಸ ಪುಟ ಸೇರುತ್ತದೆ. ಐಟಿಬಿಟಿ ಕೊಡೆಗೆ ನೀಡಿದ ಎಸ್.ಎಂ.ಕೃಷ್ಣ, ನೈಸ್ ರೋಡ್‌ಗೆ ಅನುಮತಿ ನೀಡಿದ ಎಚ್.ಡಿ.ದೇವೆಗೌಡ ಸೇರಿದಂತೆ ಈ ಹಿಂದೆ ಆಡಳಿತ ನಡೆಸಿದ ಮುಖ್ಯಮಂತ್ರಿಗಳ ಹೆಸರನ್ನು ಡಿಕೆಶಿ ಉಲ್ಲೇಖಿಸಿದ್ದರು.

## ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಸಲೀಂ ಅಹ್ಮದ್ ಆಯ್ಕೆ

ಸ್ಥಾನಗಳು ಖಾಲಿಯಿವೆ. ಸಭಾಪತಿ ಸ್ಥಾನಕ್ಕೆ ಏಳು ಪ್ರಸ್ತಾವಗಳು ಬಂದಿದ್ದವು. ಈ ಪೈಕಿ ಐದು ಪ್ರಸ್ತಾ ವಗಳು ಸಲೀಂ ಅಹ್ಮದ್ ಪರ ಬಂದಿದ್ದವು. ಈ ಹಿನ್ನೆಲೆಯಲ್ಲಿ ಹಂಗಾಮಿ ಸಭಾಪತಿ ಪುಟ್ಟಣ್ಣ ಪ್ರಸ್ತಾವವನ್ನು ಮತಕ್ಕೆ ಹಾಕಿದರು. ಧ್ವನಿಮತದ ಮೂಲಕ ನಡೆದ ಚುನಾವಣೆಯಲ್ಲಿ ಸಲೀಂ ಅಹ್ಮದ್ ಬಹುಮತ ಪಡೆದು ಸಭಾಪತಿಯಾಗಿ ಆಯ್ಕೆಯಾದರು. ವಿಧಾನ ಪರಿಷತ್ತಿನ ಮುಖ್ಯ ಸಚೇತಕರಾಗಿರುವ ಸಲೀಂ ಅಹ್ಮದ್ ಅವರು ನಾಲ್ಕು ದಶಕಗಳಿಗೂ ಅಧಿಕ ಅವಧಿಯಿಂದ ಸಾರ್ವಜನಿಕ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಸಕ್ರಿಯವಾಗಿ ಸೇವೆ ಸಲ್ಲಿಸುತ್ತಿದ್ದಾರೆ.

## ಪುತ್ರಿ ಪರ ಕ್ಷಮೆ

ನಿಂತಿದ್ದ ಕೆಲವರನ್ನು ಒಳಗೆ ಕಳುಹಿಸಲಾಗುತ್ತಿತ್ತು ಎಂಬ ಕಾರಣಕ್ಕೆ ಮಾತಿನ ಚಕಮಕಿ ನಡೆದಿರಬಹುದು. ಈ ಸಂಬಂಧ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಈಗಾಗಲೇ ಮಾತನಾಡಿರುವುದಾಗಿ ತಿಳಿಸಿದ್ದಾರೆ.

## ಶಿವಾನಂದ್ ಬಂಧಿಸಿದ ಇಡಿ

ಹಿಂದಿನ ಹೂಡಿಕೆದಾರರಿಗೆ ನೀಡಬೇಕಾದ ಬಡ್ಡಿ ನೀಡಲು ಬಳಸಲಾಗಿದೆ. ಅಕ್ರಮ ಬಂಡವಾಳವನ್ನು ವೈಯಕ್ತಿಕ ಐಷಾರಾಮಿ ವಾಹನಗಳ ಖರೀದಿಗೆ, ದೊಡ್ಡ ಬಂಗಲೆಗಳನ್ನು ನಿರ್ಮಿಸಲು ಪಾಲುದಾರರ ಹೆಸರಿನಲ್ಲಿ ಆಸ್ತಿಗಳನ್ನು ಖರೀದಿಸಲು, ಚಲನಚಿತ್ರ ನಿರ್ಮಾಣಕ್ಕೆ ಬಳಸಲಾಗಿದೆ. ಇಂತಹ ದುರುಪಯೋಗದ ಹಣವನ್ನು ಅಪರಾಧದ ಆದಾಯ ಎಂದು ಗುರುತಿಸಲಾಗಿದೆ. ಈ ಬಗ್ಗೆ ಇಡಿ ತನಿಖೆ ನಡೆಸುತ್ತಿದೆ.

## 224 ಶಾಸಕರೂ ಒಂದೇ

ಹೆಣ್ಣು ಮಕ್ಕಳು ಓಡಾಡಲು ರಕ್ಷಣೆ ಕೊಡಬೇಕು. ಈ ನಿಟ್ಟಿನಲ್ಲಿ ಹೆಚ್ಚಿನ ಕಾನೂನು ಕ್ರಮ ರೂಪಿಸಲಾಗುವುದು. ಡ್ರಗ್ಸ್ ಮುಕ್ತ ರಾಜ್ಯ ಮಾಡುವ ನಿಟ್ಟಿನಲ್ಲಿ ಬಹು ದೊಡ್ಡ ಅಭಿಯಾನ ನಡೆಸಲಾಗುತ್ತಿದೆ. ಜನರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ ಎಂದು ಯೋಜನೆಗಳನ್ನು ಉಲ್ಲೇಖಿಸಿದರು.

## ನೂತನ ಸ್ಪೀಕರ್

ಟಿ.ಬಿ.ಜಯಚಂದ್ರ ನೂತನ ಸಭಾಧ್ಯಕ್ಷರಾಗಿ ಜಿ.ಎಸ್.ಪಾಟೀಲ್ ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ ಎಂದು ಘೋಷಿಸಿದರು. ಬಳಿಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ನೂತನ ಸ್ಪೀಕರ್ ಅವರನ್ನು ಕೈಹಿಡಿದು ವಿಧಾನ ಸಭಾಧ್ಯಕ್ಷರ ಪೀಠಕ್ಕೆ ಕರೆತಂದು ಕುಳ್ಳಿರಿಸಿದರು. ಬಿಜೆಪಿ ಬಹಿಷ್ಕಾರ: ಸಾಂವಿಧಾನಿಕ ಹುದ್ದೆಯಾದ ಸಭಾಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಹೈಕಮಾಂಡ್ ಹೆಸರು ಅಂತಿಮಗೊಳಿಸಿ ಪಟ್ಟಿ ಕಳುಹಿಸಿರುವುದನ್ನು ವಿರೋಧಿಸಿ ಬಿಜೆಪಿಯು ಸಭಾಧ್ಯಕ್ಷರ ಆಯ್ಕೆ ಪ್ರಕ್ರಿಯೆಯನ್ನು ಬಹಿಷ್ಕರಿಸಿತ್ತು. ಹೀಗಾಗಿ ನೂತನ ಸಭಾಧ್ಯಕ್ಷರ ಆಯ್ಕೆ ಸಂದರ್ಭದಲ್ಲಿ ಬಿಜೆಪಿ ಸದಸ್ಯರು ಸದನಕ್ಕೆ ಗೈರು ಹಾಜರಾಗಿದ್ದರು. ಜಿ. ಎಸ್.ಪಾಟೀಲ್ ಆಯ್ಕೆ ಘೋಷಣೆ ನಂತರ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸನದಕ್ಕೆ ಬಂದರು.

## ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ



ಮೈಸೂರು: ಶಾಸಕ ಕೆ.ಹರೀಶ್ ಗೌಡ ವಲಯ ಕಚೇರಿ-4 ರ ವ್ಯಾಪ್ತಿಯ ವಾರ್ಡ್ ನಂ.21ರಲ್ಲಿ ಒಟ್ಟು 1 ಕೋಟಿ 55 ಲಕ್ಷ ರೂ ವೆಚ್ಚದ 2 ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿದರು.

ನಗರಪಾಲಿಕೆ ಅನುದಾನದಡಿ 80.00 ಲಕ್ಷ ರೂ ವೆಚ್ಚದಲ್ಲಿ ಬಿಸಿಲು ಮಾರಮ್ಮ ದೇವಸ್ಥಾನದ ಹಿಂಭಾಗದ ರಸ್ತೆ, ಗಿರಿಗೌಡ ಮಾರ್ಗ ಮತ್ತು ಜವರೇಗೌಡರ ಮನೆ ಮುಂಭಾಗದ ರಸ್ತೆ ಅಭಿವೃದ್ಧಿ, ವಿಜಯಶ್ರೀಪುರದಲ್ಲಿ ನಗರಪಾಲಿಕೆ ಅನುದಾನದಡಿ 75 ಲಕ್ಷ ರೂ. ವೆಚ್ಚದಲ್ಲಿ ದೊಡ್ಡಮಳೆ ನೀರು ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕರು ಗುದ್ದಲಿ ಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿ, ಮಳೆಗಾಲದಲ್ಲಿ ನೀರು ನಿಲ್ಲುವ ಸಮಸ್ಯೆಗೆ ಶಾಶ್ವತ ಪರಿಹಾರ ನೀಡುವುದೇ ಈ ಕಾಮಗಾರಿಯ ಉದ್ದೇಶವಾಗಿದ್ದು, ಚಾಮರಾಜ ಕ್ಷೇತ್ರದ ಪ್ರತಿ ವಾರ್ಡ್‌ನಲ್ಲೂ ಮೂಲಭೂತ ಸೌಕರ್ಯ ಒದಗಿಸಲು ಬದ್ಧನಾಗಿದ್ದೇನೆಂದರು. ಕಾರ್ಯಕ್ರಮದಲ್ಲಿ ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನ ಕೊಪ್ಪಲು, ವಾರ್ಡ್ ಅಧ್ಯಕ್ಷ ವಿಶ್ವ, ಮಾಜಿ ಮಹಾಪೌರ ಪುಷ್ಪಲತಾ ಚಿಕ್ಕಣ್ಣ, ನಗರ ಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ಮುಖಂಡರಾದ ಭಾಸ್ಕರ್ ಗೌಡ, ಶ್ರೀನಿವಾಸ್, ರವಿ ಪೂಜು,ಮಹೇಶ್, ಸುದೀರ್ ವಲಯ ಅಭಿವೃದ್ಧಿ ಅಧಿಕಾರಿ ಸತ್ಯಮೂರ್ತಿ ಸೇರಿ ಇತರರು ಭಾಗವಹಿಸಿದ್ದರು.

# ನಾಗೇಂದ್ರ ರಾಜೀನಾಮೆ ನೀಡಲಿ

## ಇಲ್ಲದಿದ್ದರೆ ಹೋರಾಟಗಳು ಅನಿವಾರ್ಯ। ಗೌತಮ್ ಗೌಡ ಎಚ್ಚರಿಕೆ

ರಾಮನಗರ: ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿನ ಹಗರಣದ ಆರೋಪ ಹೊತ್ತಿರುವ ನಾಗೇಂದ್ರ ಅವರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಂಡಿರುವುದನ್ನು ಬಿಜೆಪಿ ತೀವ್ರವಾಗಿ ವಿರೊಧಿಸಿದೆ. 187 ಕೋಟಿ ರೂ ಹಗರಣದ ರೂವಾರಿ ನಾಗೇಂದ್ರ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಇಲ್ಲದಿದ್ದರೆ ಹೋರಾಟಗಳು ಅನಿವಾರ್ಯವಾಗಲಿದೆ ಎಂದು ಬಿಜೆಪಿ ರಾಮನಗರ ಮಂಡಲ ಅಧ್ಯಕ್ಷ ಗೌತಮ್ ಗೌಡ ರಾಜ್ಯಸರ್ಕಾರವನ್ನು ಎಚ್ಚರಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ನಾಗೇಂದ್ರ ಅವರು ರಾಜೀನಾಮೆ ನೀಡದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕುವುದು ಸೇರಿದಂತೆ ನಿರಂತರ ಪ್ರತಿಭಟನೆಗಳು ನಡೆಸಲಾಗುವುದು, ಸದನದ ಒಳಗೂ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಹೋರಾಟ ನಡೆಸಲಿವೆ ಎಂದರು.

ಸಿದ್ದರಾಮಯ್ಯ ಮುಖ್ಯಮಂತ್ರಿಗಳಾಗಿದ್ದ ವೇಳೆ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ನಾಗೇಂದ್ರ ಅವರು ಭಾಗಿಯಾಗಿರುವುದು ಸಾಬೀತಾಗಿದೆ. ಅದನ್ನು ಸ್ವತಃ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಸದನದಲ್ಲಿ ಒಪ್ಪಿಕೊಂಡಿದ್ದಾರೆ. ಆ ಹಗರಣದ ಹಣದಲ್ಲಿ ಕಾಂಗ್ರೆಸ್ ವರಿಷ್ಠರಿಗೆ ಕಪ್ಪ ಕಾಣಿಕೆ ಸಲ್ಲಿಸಿರುವುದರ ಋಣ ತೀರಿಸಲು ಜೈಲಿಗೆ ಹೋಗಿ ಬಂದವರಿಗೆ ಮತ್ತೆ ಸಚಿವ ಸ್ಥಾನ ನೀಡಲಾಗಿದೆಯೇ ಎಂದು ಪ್ರಶ್ನಿಸಿದರು.

ಭ್ರಷ್ಟಾಚಾರ ಎಸಗಿರುವುದು ಸಾಬೀತಾಗಿರುವ ವ್ಯಕ್ತಿಗೆ ಸಚಿವ ಸ್ಥಾನ ನೀಡುವ ಮೂಲಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರು ನಾಡಿನ ಜನರಿಗೆ ಯಾವ ಸಂದೇಶ ನೀಡಲು ಹೊರಟಿದ್ದಾರೆ. ಮುಖ್ಯಮಂತ್ರಿಗಳು ಬೇರೆ ಪಕ್ಷಗಳ ಭ್ರಷ್ಟಾಚಾರದ ಬಗ್ಗೆ ಮಾತನಾಡುವುದಕ್ಕೂ ಮೊದಲು ತಮ್ಮ ಸಚಿವ ಸಂಪುಟ ಪಾರದರ್ಶಕವಾಗಿದಿಯೇ ಎಂಬುದರತ್ತ ಗಮನ ಹರಿಸಲಿ ಎಂದು ಸಲಹೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ಆರ್.ವಿ.ಸುರೇಶ್, ಜಿ.ವಿ.ಪದ್ಮನಾಭ, ಎಸ್.ಆರ್.ನಾಗರಾಜ್, ರುದ್ರದೇವರು, ಪ್ರವೀಣ್ ಗೌಡ, ನಾಗೇಶ್ ಮುಂತಾದವರು ಇದ್ದರು.




### ಹಣ ನುಂಗಿದವರೇ ಈಗ ಸಚಿವರು: ಆನಂದಸ್ವಾಮಿ

ಬಿಜೆಪಿ ಜಿಲ್ಲಾಧ್ಯಕ್ಷ ಆನಂದಸ್ವಾಮಿ ಮಾತನಾಡಿ, ವಾಲ್ಮೀಕಿ ನಿಗಮದ ಹಣವನ್ನು ಕೊಳ್ಳೆ ಹೊಡೆದು ತೆಲಂಗಾಣದಲ್ಲಿ ಬ್ಯಾಂಕ್ ಖಾತೆಗಳನ್ನು ತೆರೆದು ಹಣ ಡ್ರಾ ಮಾಡಿ ಚುನಾವಣೆಗೆ ಬಳಸಿದ್ದರು. ಇದೆಲ್ಲ ಜಾರಿ ನಿರ್ದೇಶನಾಲಯದ ದಾಖಲೆಯಲ್ಲಿ ಉಲ್ಲೇಖವಾಗಿದೆ. ಈ ಹಣದಲ್ಲಿ ಅಮಾಯಕ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಮಾಡಿಕೊಂಡರು. ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕೆ ಮೀಸಲಿಟ್ಟ ಹಣ ನುಂಗಿದವರನ್ನೇ ಸಚಿವರನ್ನಾಗಿ ಮಾಡಿ ಸರ್ಕಾರ ಪರಿಶಿಷ್ಟ ಪಂಗಡಕ್ಕೆ ದ್ರೋಹ ಮಾಡಿದೆ ಎಂದು ಟೀಕಿಸಿದರು.

### ಕ್ಲೀನ್ ಚಿಟ್ ಸಿಕ್ಕಿಲ್ಲ

ನಾಗೇಂದ್ರ ಅವರಿಗೆ ಇಲ್ಲಿವರೆಗೂ ಕ್ಲೀನ್ ಚಿಟ್ ಸಿಕ್ಕಿಲ್ಲ. ಅವರ ವಿರುದ್ಧ ಈಗಲೂ ತನಿಖೆ ನಡೆಯುತ್ತಿದೆ. ಆದರೂ ಮತ್ತೆ ಅವರನ್ನು ಸಚಿವರನ್ನಾಗಿ ನೇಮಿಸಲಾಗಿದೆ. ಭ್ರಷ್ಟ ಸಚಿವರನ್ನು ಸಂಪುಟದಿಂದ ಕೈ ಬಿಟ್ಟು, ಅವರದೇ ಸಮುದಾಯದ ಬೇರೊಬ್ಬರಿಗೆ ಸಚಿವರನ್ನಾಗಿ ಮಾಡುವಂತೆ ಸದನ ಆರಂಭವಾಗುವ ಮೊದಲೇ ಬಿಜೆಪಿ ಆಗ್ರಹಿಸಿದೆ. ಹಾಗಾಗಿ ನಾಗೇಂದ್ರರವರ ರಾಜೀನಾಮೆ ಪಡೆದು ಪರಿಶಿಷ್ಟ ಪಂಗಡಕ್ಕೆ ನ್ಯಾಯ ನೀಡಬೇಕು ಎಂದು ಗೌತಮ್ ಗೌಡ ಒತ್ತಾಯಿಸಿದರು.

### ಭ್ರಷ್ಟಾಚಾರದ ಸ್ಟಾರ್ ಹೆಗಲಿನಮೇಲೆ: ಪ್ರಸಾದ್ ಗೌಡ

ಮಾಗಡಿ ಮಂಡಲ ಅಧ್ಯಕ್ಷ ಪ್ರಸಾದ್ ಗೌಡ ಮಾತನಾಡಿ, ಕಾಂಗ್ರೆಸ್ ಪಕ್ಷದಲ್ಲಿ ಒಂದೊಂದು ಭ್ರಷ್ಟಾಚಾರ ಹೆಗಲಿನ ಮೇಲಿನ ಒಂದೊಂದು ಸ್ಟಾರ್ ಇದ್ದಂತೆ. ವಾಲ್ಮೀಕಿ ನಿಗಮದ ಹಗರಣದಲ್ಲಿ ನಾಗೇಂದ್ರ ಅವರೊಂದಿಗೆ ಡಿ.ಕೆ.ಶಿವಕುಮಾರ್ ಅವರೂ ಪಾಲುದಾರರು. ಮತ್ತಷ್ಟು ಹಗರಣಗಳ ಮೂಲಕ ಲೂಟಿ ಮಾಡಲು ನಾಗೇಂದ್ರ ಅವರಿಗೆ ಸಚಿವ ಸ್ಥಾನವನ್ನು ಉಡುಗೊರೆ ರೂಪದಲ್ಲಿ ನೀಡಿದ್ದಾರೆ ಎಂದು ಟೀಕಿಸಿದರು. ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಲಂಚ ಕೇಳಿದರೆ ತಮಗೆ ಫೋನ್ ಮಾಡುವಂತೆ ಮುಖ್ಯಮಂತ್ರಿಗಳು ಹೇಳುತ್ತಾರೆ. ಆದರೀಗ ಭ್ರಷ್ಟಾಚಾರಿಯನ್ನೇ ಮುಖ್ಯಮಂತ್ರಿಗಳು ಜೊತೆಯಲ್ಲಿ ಇಟ್ಟುಕೊಂಡಿದ್ದಾರೆ. ಹೀಗಿರುವಾಗ ನಾವು ಯಾರಿಗೆ ಫೋನ್ ಮಾಡಿ ದೂರು ಹೇಳಬೇಕು. ಡಿ.ಕೆ.ಶಿವಕುಮಾರ್ ರವರ ಸಚಿವ ಸಂಪುಟದಲ್ಲಿ ಇರುವವರೆಲ್ಲರೂ ಭ್ರಷ್ಟಾಚಾರಿಗಳೇ ಎಂದು ದೂರಿದರು.

## ಆ.16ಕ್ಕೆ ಆಸ್ಪತ್ರೆ ಉದ್ಘಾಟನೆ

ಮೈಸೂರು: ವಿವಿ ಪುರಂ ಪೊಲೀಸ್ ಠಾಣೆ ಎದುರಿನ ಟೆಂಪಲ್ ರಸ್ತೆಯಲ್ಲಿ ತಾವು ಆರಂಭಿಸಿರುವ ನೇತ್ರಧಾರಿಣಿ ಅಡ್ವಾನ್ಸಡ್ ಕಣ್ಣಿನ ಆಸ್ಪತ್ರೆ ಉದ್ಘಾಟನೆ ಆ. 16 ರಂದು ಬೆಳಗ್ಗೆ 10.30ಕ್ಕೆ ನಡೆಯಲಿದೆ ಎಂದು ಡಾ.ಸಿ.ಆರ್. ರೂಪಶ್ರೀ ತಿಳಿಸಿದರು.

ಶಾಸಕ ಕೆ. ಹರೀಶ್‌ಗೌಡ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಕೆಪಿಸಿಸಿ ವಕ್ತಾರ ಎಂ. ಲಕ್ಷ?ಮಣ್, ಜಿ.ಟಿ. ದೇವೇಗೌಡ ಇನ್ನಿತರರು ಅತಿಥಿಗಳಾಗಿರುವರು. ತಾವು ಉನ್ನತ ವೈದ್ಯಕೀಯ ಶಿಕ್ಷಣ ಪೂರೈಸಿದ್ದು, 15 ವರ್ಷಗಳ ಅನುಭವವಿದೆ. ಸುಮಾರು 5000 ಮಂದಿಗೆ ಶಸ್ತಚಿಕಿತ್ಸೆ ಪೂರೈಸಿದ್ದು, ಅದರ ಅನುಭವ ಮೈಸೂರಿಗೆ ಬಳಸಿಕೊಳ್ಳಬೇಕೆಂದು ಈ ಆಸ್ಪತ್ರೆ ಆರಂಭಿಸುತ್ತಿರುವುದಾಗಿ ತಿಳಿಸಿದರು. ಇಲ್ಲಿ ಸಮಗ್ರ ಕಣ್ಣಿನ ತಪಾಸಣೆ, ಕಣ್ಣಿನ ಪೊರೆ ಮತ್ತು ಶಸ್ತ್ರಚಿಕಿತ್ಸೆ, ಫ್ಯಾಕೋ ಶಸ್ತ್ರಚಿಕಿತ್ಸೆ, ಪ್ರೀಮಿಯಂ ಐಓಎಲ್ ಸೇವೆಗೆ ತೀರಾ ಅತ್ಯಾಧುನಿಕವಾದ ಯಂತ್ರಗಳ ನೆರವಿನಿಂದ ತಜ್ಞರು ನಿರ್ವಹಿಸಲಿದ್ದಾರೆ. ಯಶಸ್ವಿನಿ ಮೊದಲಾದ ಸೌಲಭ್ಯವಿದೆ. ಹೀಗಾಗಿ ಸಾರ್ವಜನಿಕರು ಪ್ರಯೋಜನ ಪಡೆದುಕೊಳ್ಳಬೇಕೆಂದು ಕೋರಿದರು. ಡಾ. ಕಿರಣ್‌ಕುಮಾರ್, ಚಂದ್ರೇಗೌಡ ಇದ್ದರು.



## ನಾಗೇಂದ್ರ ವಿರುದ್ಧ ಬಿಜೆಪಿ ನಡೆ ಖಂಡಿಸಿ ಪ್ರತಿಭಟನೆ




ಮೈಸೂರು: ಸಚಿವ ಬಿ.ನಾಗೇಂದ್ರರನ್ನು ಸಂಪುಟಕ್ಕೆ ಸೇರ್ಪಡೆ ಮಾಡಿರುವುದನ್ನು ವಿರೋಧಿಸುತ್ತಿರುವ ಬಿಜೆಪಿ ನಡೆ ಖಂಡಿಸಿ ಮಾಜಿ ನಗರಪಾಲಿಕೆ ಸದಸ್ಯ ಲೋಕೇಶ್ ಪಿಯಾ ನೇತೃತ್ವದಲ್ಲಿ ಜಿಲ್ಲಾ ಪಂಚಾಯತ್ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಮಾತನಾಡಿದ ನಗರಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ, ಸಚಿವ ಬಿ.ನಾಗೇಂದ್ರ ಅವರ ಪುನರ್‌ಸೇರ್ಪಡೆ ವಿರೋಧಿಸುತ್ತಿರುವ ಬಿಜೆಪಿ ನಾಯಕರು ಮೊದಲು ತಮ್ಮ ಆಡಳಿತಾವಧಿಯ ಭ್ರಷ್ಟಾಚಾರದ ಇತಿಹಾಸವನ್ನು ಒಮ್ಮೆ ಹಿಂತಿರುಗಿ ನೋಡಿಕೊಳ್ಳಲಿ. ವಾಲ್ಮೀಕಿ ಅಭಿವೃದ್ಧಿ ನಿಗಮದ ಪ್ರಕರಣದಲ್ಲಿ ತನಿಖೆ, ನ್ಯಾಯಾಂಗ ಪರಿಶೀಲನೆ ಚಾಲ್ತಿಯಲ್ಲಿದೆ. ತನಿಖೆ ಅಥವಾ ಆರೋಪಪಟ್ಟಿ ಸಲ್ಲಿಕೆಯಾದ ತಕ್ಷಣವೇ ಒಬ್ಬರನ್ನು ರಾಜಕೀಯವಾಗಿ ಅಪರಾಧಿ ಎಂದು ಬಿಂಬಿಸಲು ಹೊರಟಿರುವ ಬಿಜೆಪಿಗೆ ಅಂತಹ ಯಾವುದೇ ನೈತಿಕ ಅಧಿಕಾರವಿಲ್ಲ ಎಂದು ಕಿಡಿ ಕಾರಿದರು.

ಬಿಜೆಪಿ ನಾಯಕರು ಭ್ರಷ್ಟಾಚಾರದ ವಿರುದ್ಧ ಮಾತನಾಡುವ ಮೊದಲು ತಮ್ಮದೇ ಸರ್ಕಾರದ ಅವಧಿಯಲ್ಲಿ ನಡೆದ ಪ್ರಮುಖ ಹಗರಣಗಳಿಗೆ ಸಾರ್ವಜನಿಕವಾಗಿ ಉತ್ತರ ನೀಡಬೇಕು. ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರದ ಅವಧಿಯಲ್ಲಿ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ನಡೆಸಿದ ಶೇ.40 ಕಮಿಷನ್ ಆರೋಪದ ವಿಚಾರಣೆಗಳು ಇನ್ನೂ ಪ್ರತ್ಯೇಕವಾಗಿ ನಡೆಯುತ್ತಿವೆ. ಒಂದು ಸಣ್ಣ ಪ್ರಕರಣದ ಫಲಿತಾಂಶ ಇಟ್ಟುಕೊಂಡು ಇಡೀ ಆರೋಪವನ್ನು ಸುಳ್ಳು ಎನ್ನಲಾಗುವುದಿಲ್ಲ. ಪಿಎಸ್ಐ ನೇಮಕಾತಿ ಅಕ್ರಮ, ಬಿಟ್‌ಕಾಯಿನ್ ಪ್ರಕರಣ ಹಾಗೂ ಕೋವಿಡ್ ಸಾಂಕ್ರಾಮಿಕದ ಅವಧಿಯಲ್ಲಿ ನಡೆದ ಖರೀದಿ ಅಕ್ರಮಗಳ ಕುರಿತು ಬಿಜೆಪಿ ನಾಯಕರು ಆತ್ಮವಿಮರ್ಶೆ ಮಾಡಿಕೊಳ್ಳಬೇಕು ಎಂದು ಆಗ್ರಹಿಸಿದರು. ವಾಲ್ಮೀಕಿ ನಿಗಮದ ಪ್ರಕರಣದಲ್ಲಿ ಕಾನೂನುಬದ್ಧ ತನಿಖೆಯಾಗಲಿ, ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ. ಆದರೆ, ಅದರ ಜೊತೆ ಜತೆಗೆ ಬಿಜೆಪಿ ಅವಧಿಯಲ್ಲಿ ನಡೆದ ಶೇ.40 ಕಮಿಷನ್, ಪಿಎಸ್ಐ ಮತ್ತು ಕೋವಿಡ್ ಅಕ್ರಮಗಳನ್ನೂ ಸಹ ನಿಷ್ಪಕ್ಷಪಾತವಾಗಿ ತನಿಖೆಗೆ ಒಳಪಡಿಸಬೇಕು. ಭ್ರಷ್ಟಾಚಾರದ ವಿರುದ್ಧದ ಹೋರಾಟ ಪಕ್ಷಾತೀತವಾಗಿರಬೇಕೇ ಹೊರತು, ರಾಜಕೀಯ ಆಯುಧವಾಗಬಾರದು. ಅಂತಿಮ ತೀರ್ಪು ಬರುವವರೆಗೆ ಕಾನೂನು ತನ್ನ ಕೆಲಸ ಮಾಡುತ್ತದೆ. ನಮ್ಮ ಆಡಳಿತದಲ್ಲಿ ಬಂದ ಆರೋಪಗಳ ಬಗ್ಗೆ ನಾವು ಏನು ಮಾಡಿದ್ದೇವೆ ಎಂದು ಬಿಜೆಪಿ ನಾಯಕರು ತಮ್ಮನ್ನೇ ಪ್ರಶ್ನಿಸಿಕೊಳ್ಳಲಿ. ಪ್ರಜಾಪ್ರಭುತ್ವದಲ್ಲಿ ತಪ್ಪಿತಸ್ಥರಿಗೆ ಶಿಕ್ಷೆ ಮತ್ತು ನಿರಪರಾಧಿಗಳಿಗೆ ರಕ್ಷಣೆ ಸಿಗುವುದೇ ಕಾನೂನಿನ ನಿಜವಾದ ಆಡಳಿತ ಎಂದರು. ಪ್ರತಿಭಟನೆಯಲ್ಲಿ ಚಂದ್ರಶೇಖರ್, ವಿಜಯ್, ರವಿ, ರಂಗಸ್ವಾಮಿ, ನಾರಾಯಣ ಭಾಗವಹಿಸಿದ್ದರು.

# ಬಿಡದಿ ಟೌನ್ ಶಿಪ್ ಹೋರಾಟಕ್ಕೆ ಜೆಎನ್-ಜಿ ಬರಲಿ: ದೇವನೂರು

ಮೈಸೂರು: ಬಿಡದಿ ಟೌನ್‌ಶಿಪ್ ಹೋರಾಟವನ್ನು ಜೆಎನ್-ಜಿ ಕೈಗೆತ್ತಿಕೊಳ್ಳಬೇಕು. ನಾವು ಅವರನ್ನು ಹಿಂಬಾಲಿಸುತ್ತೇವೆ ಎಂದು ಹಿರಿಯ ಸಾಹಿತಿ ದೇವನೂರ ಮಹಾದೇವ ಹೇಳಿದರು.

ಜಲದರ್ಶಿನಿ ಅತಿಥಿಗೃಹದಲ್ಲಿ ಶುಕ್ರವಾರ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಬಿಡದಿ ಟೌನ್‌ಶಿಪ್ ಕೈ ಬಿಡದಿದ್ದರೆ ಸರ್ಕಾರಕ್ಕೆ ಯಾವ ಎಚ್ಚರಿಕೆ ಕೊಡುತ್ತೀರಿ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ಹೊಸ ಜನಾಂಗ ಜೆನ್-ಜಿ ಈಗ ಆ?ಯಕ್ಟೀವ್ ಆಗಿದ್ದಾರೆ. ಅವರು ಹೋರಾಟಕ್ಕೆ ಬರಬೇಕು. ಟೌನ್‌ಶಿಪ್‌ಗೆ ಜನರ ವಿರೋಧ ಇದೆ. ಸರ್ಕಾರ ಶೇ. 80 ಜನರು ಭೂಮಿ ಕೊಡುತ್ತಾರೆ ಎನ್ನುತ್ತಾರೆ. ಹೋರಾಟ ನಿರತ ರೈತರು ಶೇ. 80 ಜನರು ಭೂಮಿ ಕೊಡುವುದಿಲ್ಲ ಎನ್ನುತ್ತಿದ್ದಾರೆ. ಅರ್ಧ ಬೆಲೆಗೆ ಎಲ್ಲ ಭೂಮಿಯನ್ನು ಕೊಡಲು ಸಿದ್ಧರಿದ್ದೇವೆ? ತೆಗೆದುಕೊಂಡು ಏನ್ ಮಾಡುತ್ತೀರಿ ಎಂದು ಪ್ರಶ್ನಿಸಿದರು.

ಪ್ರಭುತ್ವಕ್ಕೆ ಭೂಮಿ ಉಳಿಸಿಕೊಳ್ಳುವ ಆಕಾಂಕ್ಷೆ ಇಲ್ಲದಿದ್ದರೆ ಹೆಂಗೆ? ಎಲ್ಲ ರೈತರು ಭೂಮಿ ಕೊಟ್ಟರೆ ವ್ಯವಸಾಯ ಮಾಡುವವರು ಯಾರು? ಸರ್ಕಾರ ಎಲ್ಲರಿಗೂ ಕೆಲಸ ಕೊಡುತ್ತದ? ಜೀವನಕ್ಕೆ ಆಧಾರ ಕೊಡುತ್ತೀರ? ಗುಳೇ ಹೋಗುವುದನ್ನು ತಪ್ಪಿಸುತ್ತೀರ? ಹಳ್ಳಿಗಳಿಂದ ನಗರಕ್ಕೆ ಬಂದ ರೈತರು ಸ್ಲಂ ಸೇರುತ್ತಿದ್ದಾರೆ.



ಈ ಬಗ್ಗೆ ಯೋಚನೆ ಮಾಡಬೇಡವೇ ಎಂದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಯೋಚನೆ ಮಾಡಬೇಕು. ಮಕ್ಕಳು ಬಿಲ್ಡಿಂಗ್, ರಸ್ತೆ ಅಥವಾ ದುಡ್ಡು ಅಲ್ಲ. ಸರ್ಕಾರ ಜನಗಳನ್ನು ತನ್ನ ಮಕ್ಕಳು ಎಂದುಕೊಳ್ಳಬೇಕು. ಯಾವುದು ಅತಿಯಾದರೆ ಅದಕ್ಕೂ ಒಂದು ಕಾಲ ಬರುತ್ತದೆ ಎಂದು ಎಚ್ಚರಿಸಿದರು. ಬಿಡದಿ ಟೌನ್‌ಶಿಪ್ ಅನುಷ್ಠಾನಗೊಂಡರೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ವಿರೋಧ ಪಕ್ಷದ ನಾಯಕ ಆರ್.ಅಶೋಕ ಮೂವರು ಸಮಾನ ಅಪರಾಧಿಗಳಾಗುತ್ತಾರೆ. ಈ ಹೋರಾಟದ ನಾಯಕರ ಕಣ್ಣೀರು ಸುಳ್ಳು ಮತ್ತು ಕ್ರೂರ. ಇದು ಭಾರತ ಮತ್ತು ಕರ್ನಾಟಕದ ದುರಂತ ಎಂದು ಕಳವಳ ವ್ಯಕ್ತಪಡಿಸಿದರು. ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಮಾತನಾಡಿ, ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿಗಳ ನಾಲ್ವರ ಸಮಿತಿಯ ತಂಡ ಸಿದ್ಧಪಡಿಸಿದ ವರದಿಯನ್ನು ಸಲ್ಲಿಸಲಾಗಿದೆ. ವರದಿಯಲ್ಲಿ ಬಿಡದಿ ಟೌನ್‌ಶಿಪ್‌ಗೆ ಕಾನೂನು ಮಾನ್ಯತೆ ಇಲ್ಲ. ಸಮಾಜದ ಮೇಲೆ ಬೀರುವ ಪರಿಣಾಮವನ್ನು ಪರಿಗಣಿಸಿಲ್ಲ. ಪರಿಸರಕ್ಕೆ ವ್ಯತಿರಿಕ್ತವಾಗಿದ್ದು ಅನುಷ್ಠಾನಕ್ಕೆ ಯೋಗ್ಯವಾಗಿಲ್ಲ. ಕೈ ಬಿಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

25ರಂದು ಪಾದಯಾತ್ರೆ: ಭೈರಮಂಗಲದಿಂದ ಬೆಂಗಳೂರಿನ ಸ್ವಾತಂತ್ರ?ಯ ಹೋರಾಟಗಾರರ ಉದ್ಯಾನದವರೆಗೆ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ನಾಡಿನಾದ್ಯಂತ ರೈತರು, ದಲಿತರು ಭಾಗವಹಿಸುತ್ತಾರೆ. ಕಾಂಗ್ರೆಸ್-ಜೆಡಿಎಸ್ ರಾಜಕೀಯ ಸಂಘರ್ಷದಲ್ಲಿ ರೈತರ ಹಿತ ಕಡೆಗಣಿಸಲಾಗಿದೆ ಎಂದರು.

ಕರ್ನಾಟಕ ಪ್ರಾಂತ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಟಿ.ಯಶವಂತ, ಸಮಾಜ ಪರಿವರ್ತನ ಸಮುದಾಯದ ಸಂಸ್ಥಾಪಕ ಎಸ್.ಆರ್. ಹಿರೇಮಠ ಮಾತನಾಡಿದರು. ಜನಾಂದೋಲನ ಮಹಾಮೈತ್ರಿ ಕೆ.ವಿ.ಭಟ್, ರೈತ ಸಂಘದ ಮುಖಂಡರಾದ ಹೊಸೂರು ಕುಮಾರ್, ಹೊಸಕೋಟೆ ಬಸವರಾಜು, ದಸಂಸ ಸಂಚಾಲಕ ಶಂಭುಲಿಂಗಸ್ವಾಮಿ, ಜನಸಂಗ್ರಾಮ ಪರಿಷತ್ ಗೌರವ ಕಾರ್ಯದರ್ಶಿ ನಗರ್ಲೆ ವಿಜಯ್ ಕುಮಾರ್, ವಕೀಲ ಎನ್.ಪುನೀತ್ ಇದ್ದರು.

# ಮಕ್ಕಳ ಜೀವನದಲ್ಲಿ ತಾಯಂದಿರ ಪಾತ್ರ ಮಹತ್ವದ್ದು




ರಾಮನಗರ: ಮಕ್ಕಳ ಜೀವನದಲ್ಲಿ ತಾಯಿಯ ಪಾತ್ರ ಅತ್ಯಂತ ಮಹತ್ವದ್ದು. ತಾಯಿಯ ವಾತ್ಸಲ್ಯ ಮಕ್ಕಳ ಹೃದಯವನ್ನು ಪೋಷಿಸುತ್ತದೆ, ಆಹಾರವು ದೇಹವನ್ನು ಪೋಷಿಸುತ್ತದೆ, ಶಿಕ್ಷಣ ಮನಸ್ಸನ್ನು ಪ್ರಬುದ್ಧಗೊಳಿಸುತ್ತದೆ ಎಂದು ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಜಗದ್ಗುರು ಶ್ರೀ ಶ್ರೀ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ನಗರದ ಹೊರವಲಯದಲ್ಲಿರುವ ಬಿ.ಜಿ.ಎಸ್ ವರ್ಲ್ಡ್ ಸ್ಕೂಲ್‌ನಲ್ಲಿ ನಡೆದಮಾತೃಭೋಜನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿ ಮಾತನಾಡಿದರು. ವಿದ್ಯಾರ್ಥಿಗಳ ಜೀವನಕ್ಕೆ ಶಿಕ್ಷಣ ಮಹತ್ವದ್ದಾಗಿದೆ, ಇದರ ಜೊತೆಗೆ ತಾಯಂದಿರ ಪಾತ್ರ ಅಮೂಲ್ಯವಾದದ್ದು. ತಾಯಂದಿರು ಯುವ ಮನಸ್ಸುಗಳನ್ನು ರೂಪಿಸಲು ಪೌಷ್ಠಿಕಾಂಶ ಆಹಾರ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹಿಸಬೇಕು. ಭವಿಷ್ಯದಲ್ಲಿ ಅವರು ಉತ್ತಮ ಪ್ರಜೆಗಳಾಗಿ ರೂಪಿಸುವ ಮಹತ್ತರ ಪಾತ್ರ ತಾಯಂದಿರು ವಹಿಸುತ್ತಾರೆ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಚಲನಚಿತ್ರ ನಟಿ ಶ್ರೀಮತಿ ಡಾ. ಸಪ್ತಮಿ ಗೌಡ ಮಾತನಾಡಿ, ನನ್ನ ಈ ಯಶಸ್ಸಿನ ಹಿಂದೆ ನನ್ನ ತಾಯಿಯ ಪಾತ್ರ ಬಹಳ ಇದೆ. ಇಂದಿನ ಈ ಕಾರ್ಯಕ್ರಮವು ಮಕ್ಕಳಿಗೆ ಸಹಕಾರಿಯಾಗಲಿದೆ ಎಂದರು.

ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ರಾಮನಗರ ಶಾಖೆಯ ಮುಖ್ಯಸ್ಥ ಶ್ರೀ ಅನ್ನದಾನೇಶ್ವರನಾಥ ಸ್ವಾಮೀಜಿ, ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠ ಚಿಕ್ಕಬಳ್ಳಾಪುರ ವಿಭಾಗದ ಮುಖ್ಯ ಆಡಳಿತಾಧಿಕಾರಿ ಡಾ.ಎನ್ ಶಿವರಾಮ್ ರೆಡ್ಡಿ, ಬಿ.ಜಿ.ಎಸ್.ವರ್ಲ್ಡ್ ಶಾಲೆಯ ಪ್ರಾಂಶುಪಾಲರಾದ ಸುಮ ಕೊಂಡೂರು. ಬಿಜಿಎಸ್ ಪಿಯು ಕಾಲೇಜಿನ ಪ್ರಾಂಶುಪಾಲ ಸುರೇಶ್ ಎಂ. ಸಿ. ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಇದೇ ವೇಳೆ ಮಕ್ಕಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮ ನೆರೆದಿದ್ದವರ ಮನಸೂರೆಗೊಂಡಿತು

# ಬಿಜೆಪಿಯ ಮನಸ್ಥಿತಿ ಖಂಡಿಸಿದ ಪುಷ್ಪ



ಮೈಸೂರು: ಉತ್ತರಾಖಂಡದ ಹಲ್ದ್ವಾನಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭಾಷಣ ಮಾಡಿದ ರಾಮಲೀಲಾ ಮೈದಾನದಲ್ಲಿ ಹೋಮ ನಡೆಸಿ 'ಶುದ್ಧೀಕರಣ' ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಅಪಮಾನಗೊಳಿಸಲಾಗಿದ್ದು, ಬಿಜೆಪಿ ಇಂತಹ ನಡೆಯನ್ನು ಖಂಡಿಸುತ್ತಿರುವುದಾಗಿ ರಾಜ್ಯ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪ ಅಮರನಾಥ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ದಲಿತ ನಾಯಕರಾದ ಖರ್ಗೆ ಹೋದ ಜಾಗವನ್ನು ಶುದ್ಧೀಕರಿಸುವ ಮೂಲಕ ಇಂದಿಗೂ ನಮ್ಮಲ್ಲಿರುವ ಜಾತಿ ವ್ಯವಸ್ಥೆಯನ್ನು ತೋರುತ್ತಿದ್ದಾರೆ. ಕೇಂದ್ರದ ವಿರೋಧ ಪಕ್ಷದ ನಾಯಕರಿಗೆ ಇಂತಹ ಸ್ಥಿತಿಯಾದರೆ ಇನ್ನೂ ಹಿಂದುಳಿದ ಜನಸಾಮಾನ್ಯರ ಗತಿಯೇನು? ಬಿಜೆಪಿಯ ಮನಸ್ಥಿತಿ ಬದಲಿಸಿಕೊಳ್ಳಬೇಕು. ಇಂತಹ ನಡೆ ಮಾಡಿದವರ ವಿರುದ್ಧ ಕೇಂದ್ರ ಬಿಜೆಪಿ ಕ್ರಮ ಕೈಗೊಳ್ಳಬೇಕು. ನಾಳೆ ಇಂತಹ ನಡೆ ಖಂಡಿಸಿ ಬಿಜೆಪಿಗರೇ ಭಾರತ ಬಿಟ್ಟು ತೊಲಗಿ ಎಂಬ ಹೋರಾಟದಲ್ಲಿ ನಾನು ಸಹ ಭಾಗವಹಿಸಿ ಉತ್ತರಖಂಡ ರಾಜ್ಯ ನಡೆಯನ್ನು ಖಂಡಿಸುತ್ತಿರುವುದಾಗಿ ಹೇಳಿದರು. ಇದೇ ವೇಳೆ ಸಚಿವ ಯತೀಂದ್ರ ಸಿದ್ದರಾಮಯ್ಯನವರ ಬಗ್ಗೆ ಹಗುರವಾಗಿ ಮಾತನಾಡುವುದು ವಿಶ್ವನಾಥ್ ರಂತಹ ಹಿರಿಯ ನಾಯಕರಿಗೆ ಶೋಭೆಯಲ್ಲ. ನಾನು ಸಹ ನಿಮ್ಮ ಪರವಾಗಿ ಮತ ಕೇಳಿದ್ದೇನೆ. ನೀವೂ ಈ ಭಾಗದ ಹಿರಿಯ ನಾಯಕರಿದ್ದಿರಿ ನಿಮ್ಮ ನಡವಳಿಕೆ ಬದಲಿಸಿಕೊಳ್ಳಿ ಎಂದು ಕೇಳಿಕೊಳ್ಳುತ್ತೇನೆಂದರು. ಇನ್ನೂ ಪಕ್ಷ ನನಗೆ ನೀಡಿದ ಕೆಲಸವನ್ನು ಮಾಡು ತ್ತಿದ್ದೇನೆ. ನಿಗಮ, ಮಂಡಳಿಯಲ್ಲಿ ಸ್ಥಾನ ಕೊಟ್ಟರೇ ಅದನ್ನು ಸಮರ್ಥವಾಗಿ ನಿಭಾಯಿಸುತ್ತೇನೆ. ತನ್ವೀರ್ ಸೇಠ್, ಮಹದೇವಪ್ಪರಿಗೆ ಸ್ಥಾನ ಸಿಗಬೇಕಿತ್ತು. ಆದರೆ, ಹೈಕಮಾಂಡ್ ನಿರ್ಧಾರ ಅಂತಿಮವಾಗಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ಸೂಕ್ತ ಸ್ಥಾನ ಸಿಗಲಿದೆ. ಕಾಂಗ್ರೆಸ್ ನಲ್ಲಿ ಎಲ್ಲರನ್ನೂ ಪರಿಗಣಿಸಲಿದೆ ಎಂದು ಹೇಳಿದರು. ಮಾಜಿ ಮೇಯರ್ ಮೋದಾಮಣಿ, ಪುಷ್ಪಲತಾ ಟಿ.ಬಿ.ಚಿಕ್ಕಣ್ಣ, ಕಾಂಗ್ರೆಸ್ ಮುಖಂಡ ಈಶ್ವರ ಚಕ್ಕಡಿ ಇನ್ನಿತರರು ಇದ್ದ

## ಪಾಲಿಕೆಯಿಂದ ಬೃಹತ್ ಸ್ವಚ್ಛತಾ ಅಭಿಯಾನ




ಮೈಸೂರು: ಮಹಾನಗರ ಪಾಲಿಕೆಯ ವತಿಯಿಂದ ಹಮ್ಮಿಕೊಳ್ಳಲಾಗಿರುವ "ಸ್ವಾತಂತ್ರ್ಯೋತ್ಸವ ಸ್ವಚ್ಛತಾ ಅಭಿಯಾನ?2026: 80 ತ್ಯಾಜ್ಯಮುಕ್ತ ತಾಣಗಳು" ಕಾರ್ಯಕ್ರಮದ ಅಂಗವಾಗಿ ನಗರದ ವಿವಿಧ ವಲಯಗಳಲ್ಲಿನ 8 ತ್ಯಾಜ್ಯ ಸುರಿಯುವ ಸ್ಥಳಗಳನ್ನು ಸ್ವಚ್ಛಗೊಳಿಸಿ ಸುಂದರ ತಾಣಗಳನ್ನಾಗಿ ಪರಿವರ್ತಿಸಲಾಯಿತು.

ವಲಯ?1ರ ಸಾಂದೀಪನಿ ಪ್ರದೇಶ, ವಲಯ?2ರ ಜೆ.ಪಿ.ನಗರದ 18ನೇ ಅಡ್ಡರಸ್ತೆ, ವಲಯ?6ರ ಸಯ್ಯಾಜಿ ಮಸೀದಿ ಸಮೀಪ ಹಾಗೂ ನಜರ್ ಬಾದ್ ಮುಖ್ಯರಸ್ತೆ, ವಲಯ?7ರ ನಾಚನಹಳ್ಳಿಯ ಗಣಪತಿ ದೇವಸ್ಥಾನದ ಸಮೀಪ, ವಲಯ?9ರ ಸುಮನಾ ಶಾಲೆಯ ಎದುರು ಹಾಗೂ ಕಲ್ಯಾಣಗಿರಿಯ ಆರ್ ಜಿಎ ಶಾಲೆಯ ಸಮೀಪ ಮತ್ತು ವಲಯ?8ರ ರಾಜೀವ್ ನಗರ 2ನೇ ಹಂತದ ಈಡನ್ ಗಾರ್ಡನ್ ಪ್ರದೇಶದಲ್ಲಿರುವ ತ್ಯಾಜ್ಯ ಸುರಿಯುವ ಸ್ಥಳಗಳನ್ನು ಪರಿವರ್ತಿಸಲಾಯಿತು.

ಈ ಸ್ವಚ್ಛತಾ ಅಭಿಯಾನದಲ್ಲಿ ಒಟ್ಟು 568 ಜನರು ಭಾಗವಹಿಸಿದ್ದು, 39 ಮಾನವ ಗಂಟೆಗಳ ಕಾರ್ಯಾಚರಣೆಯಲ್ಲಿ 173.66 ಮೆಟ್ರಿಕ್ ಟನ್ ತ್ಯಾಜ್ಯವನ್ನು ತೆರವುಗೊಳಿಸಲಾಯಿತು. ಸ್ವಚ್ಛಗೊಳಿಸಿದ ಸ್ಥಳಗಳಲ್ಲಿ ಬಣ್ಣ ಬಳಿಯುವುದು, ಸೌಂದರ್ಯೀಕರಣ, ಗಿಡಗಳನ್ನು ನೆಡುವುದು ಹಾಗೂ ಸಾರ್ವಜನಿಕರಲ್ಲಿ ಸ್ವಚ್ಛತೆಯ ಕುರಿತು ಜಾಗೃತಿ ಮೂಡಿಸುವ ಕಾರ್ಯಗಳನ್ನು ಕೈಗೊಳ್ಳಲಾಯಿತು.

ಈಡನ್ ಗಾರ್ಡನ್ ಪ್ರದೇಶದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಮಹಾನಗರ ಪಾಲಿಕೆ ಆಯುಕ್ತೆ ಎಂ.ಕೆ.ಸವಿತಾ, ಪರಿವರ್ತಿಸಲಾದ ಸ್ಥಳಗಳಲ್ಲಿ ಪುನಃ ತ್ಯಾಜ್ಯ ಸುರಿಯದಂತೆ ನಿರಂತರ ನಿಗಾ ವಹಿಸಬೇಕು. ಸ್ಥಳೀಯ ನಿವಾಸಿಗಳು ಹಾಗೂ ಸಂಘ-ಸಂಸ್ಥೆಗಳು ಈ ತಾಣಗಳ ಸ್ವಚ್ಛತೆ ಮತ್ತು ಸೌಂದರ್ಯವನ್ನು ಸುಸ್ಥಿರವಾಗಿ ಕಾಪಾಡಲು ಪಾಲಿಕೆಯೊಂದಿಗೆ ಕೈಜೋಡಿಸಬೇಕು ಎಂದು ತಿಳಿಸಿದರು. ಸ್ವಚ್ಛತಾ ರಾಯಭಾರಿ ಸೂರಜ್ ಮಾತನಾಡಿದರು.



# ಕಾವೇರಿ: ಕೇಂದ್ರದವರ ಧ್ವನಿ ಇಲ್ಲವೇ?

## ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಹೇಳಿಕೆ | ಎಚ್‌ಡಿಕೆ ವಿರುದ್ಧ ಆಕ್ರೋಶ



ಮೈಸೂರು: ಕಾವೇರಿ ವಿಚಾರದಲ್ಲಿ ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ, ಪ್ರಹ್ಲಾದ್ ಜೋಶಿ ಧ್ವನಿ ಎತ್ತುತ್ತಿಲ್ಲವೇಕೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಹೇಳಿದರು.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ತಮಿಳುನಾಡಿಗೆ ನೀರು ಹರಿಸಬೇಕೆಂಬ ವಿಚಾರದಲ್ಲಿ ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಹಾಗೂ ಪ್ರಹ್ಲಾದ ಜೋಶಿ ಅವರ ಪಾತ್ರವಿದೆ. ರಾಜ್ಯ ಸರ್ಕಾರಕ್ಕೆ ತೊಂದರೆ ಕೊಡಬೇಕೆಂಬ ಉದ್ದೇಶದಿಂದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ (ಸಿಡಬ್ಲ್ಯುಎಂಎ) ಮೇಲೆ ಪ್ರಭಾವ ಬೀರುತ್ತಿದ್ದಾರೆ. ಪ್ರಾಧಿಕಾರ ಕೇಂದ್ರ ಸರ್ಕಾರದ ಹಿಡಿತದಲ್ಲಿದ್ದು, ಅದರ ಅಣತಿಯಂತೆ ರಾಜ್ಯಕ್ಕೆ ಆದೇಶಿಸುತ್ತಿದ್ದಾರೆ ಎಂದರು.

### ಮೂರ್ಖತನ ಅಲ್ಲವೆ

ಕಾವೇರಿ ಕಣಿವೆಯ ರೈತರು ಬೆಳೆ ಹಾಕಬಾರದೆಂದು ತಿಳಿಸಿ ಕುಡಿಯುವ ಉದ್ದೇಶಕ್ಕೆಂದು ಸಂಗ್ರಹಿಸಿಕೊಂಡಿರುವ ನೀರನ್ನು ತಮಿಳುನಾಡಿನವರ ಬೆಳೆಗಾಗಿ ಹರಿಸುವಂತೆ ಕೇಳುತ್ತಿರುವುದು ಮೂರ್ಖತನದ ಪರಮಾವಧಿ ಯಲ್ಲವೇ?. ನಮ್ಮ ಕೆಆರ್‌ಎಸ್, ಕಬಿನಿ, ಹಾರಂಗಿ ಹಾಗೂ ಹೇಮಾವತಿ ಜಲಾಶಯಗಳಲ್ಲಿನ ವಾಸ್ತವ ಸ್ಥಿತಿಯನ್ನು ಸಮರ್ಥವಾಗಿ ಮನವರಿಕೆ ಮಾಡಿಕೊ ಡುವಲ್ಲಿ ತಜ್ಞರ ಸಮಿತಿಯು ಸಮರ್ಪಕವಾಗಿ ಕಾರ್ಯನಿರ್ವಹಿಸಿಲ್ಲ. ಜಲಾಶಯಗಳಲ್ಲಿರುವ 'ಡೆಡ್‌ಸ್ಟೋರೇಜ್' ನೀರನ್ನೂ ಪರಿಗಣಿಸಲಾಗುತ್ತಿದೆ. ಡೆಡ್ ಸ್ಟೋರೇಜ್ ಬಿಟ್ಟರೆ ನಮ್ಮಲ್ಲಿ ಈಗ ಇರುವುದು 66 ಟಿಎಂಸಿ ಅಡಿ ನೀರು ಮಾತ್ರ. ಇದನ್ನು ಪರಿಗಣಿಸಿಲ್ಲ. ಮೈಸೂರು, ಕೊಡಗು, ಹಾಸನ, ಚಾಮರಾಜನಗರ ಜಿಲ್ಲೆಗಳಲ್ಲಿ ಎಪ್ರಿಲ್ ನಿಂದ ಈವರೆಗೆ ಬಿದ್ದ ಮಳೆಯನ್ನು ಆಧರಿಸಿ ಎಲ್ಲ ಕಡೆಯೂ ಮಳೆಯಾಗಿದೆ ಎಂದು ಪರಿಗಣಿಸಲಾಗಿದೆ. ಇದರಿಂದಾಗಿ ರಾಜ್ಯಕ್ಕೆ ಸಮಸ್ಯೆಯಾಗುತ್ತಿದೆ. ಯಾವುದೋ ಒಂದು ಕಡೆ ಬಿದ್ದ ಮಳೆಯಿಂದ ಜಲಾಶಯಗಳು ತುಂಬುವುದಿಲ್ಲ ಎಂಬ ವಾಸ್ತವ ಸ್ಥಿತಿ ಅರ್ಥ ಮಾಡಿಕೊಡಬೇಕಿದೆ.

ತಮಿಳುನಾಡಿನವರು, ನಾವು ಉಳಿಸಿಕೊಂಡಿರುವ ನಮ್ಮ ಪಾಲಿನಲ್ಲಿ ಪಾಲು ಕೇಳುತ್ತಿದ್ದಾರೆ. ಇದು ಸರಿಯಲ್ಲ. ಏಪ್ರಿಲ್‌ನಿಂದ ಇಲ್ಲಿಯವರೆಗೆ ಅದ ಮಳೆಯಲ್ಲಿ ಎಷ್ಟು ಪ್ರಮಾಣದಲ್ಲಿ ನೀರು ಹಂಚಿಕೆ ಆಗಬೇಕು ಎಂಬುದನ್ನು ನಮ್ಮ ತಜ್ಞರ ತಂಡದವರು ಮನವರಿಕೆ ಮಾಡಿಕೊಡಬೇಕು. 45 ಟಿಎಂಸಿ ಅಡಿ ನೀರು ಕುಡಿಯುವ ಉದ್ದೇಶ ಕ್ಕೆಂದೇ ಬೇಕು. ಈ ಅಂಶಗಳನ್ನೆಲ್ಲಾ ಸುಪ್ರೀಂ ಕೋರ್ಟ್‌ನಲ್ಲಿ ಪರಿಣಾಮಕಾರಿಯಾಗಿ ಮಂಡಿಸ ಬೇಕು' ಎಂದು ಸರ್ಕಾರವನ್ನು ಒತ್ತಾಯಿಸಿದರು. ವಿಧಾನಪರಿಷತ್ ಮಾಜಿ ಸದಸ್ಯ ಎ.ಎಚ್.ವಿಶ್ವನಾಥ್ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಬಾಯಿಚಪಲಕ್ಕೆ ಮಾತನಾಡುತ್ತಿದ್ದಾರೆ. ಘನತೆಗೆ ತಕ್ಕುದಾಗಿ ಮಾತನಾಡದಿರುವುದು ದುರಂತದ ಸಂಗತಿ. ಡಾ.ಯತೀಂದ್ರ ಮಂತ್ರಿಯಾಗಿದ್ದನ್ನು ಸಹಿಸದೇ ಆರೋಪ ಮಾಡುತ್ತಿದ್ದಾರೆ. ಯತೀಂದ್ರ ಯಾವುದರಲ್ಲಿ ಕಡಿಮೆ ಇದ್ದಾರೆ ಎಂಬುದನ್ನು ಹೇಳಲಿ' ಎಂದು ಸವಾಲು ಹಾಕಿದರು.

'ಮೈಸೂರಿನ ತನ್ವೀರ್ ಸೇಠ್, ಡಾ.ಎಚ್.ಸಿ. ಮಹದೇವಪ್ಪ, ಕೆ. ವೆಂಕಟೇಶ್ ಅವರನ್ನು ಮಂತ್ರಿಯನ್ನಾಗಿ ಮಾಡಬೇಕು ಎಂಬುದು ನಮ್ಮ ಒತ್ತಾಯವಾಗಿತ್ತು. ಆದರೆ, ಹೈಕಮಾಂಡ್ ಮಾಡಲಿಲ್ಲ. ನಮ್ಮ ಪಕ್ಷದ ಉಸಾಬರಿ ನಿಮಗೇಕೆ ಬೇಕು? ಎಂದು ವಿಶ್ವನಾಥ್ ರನ್ನು ಕೇಳಿದರು. ಪಕ್ಷದ ನಗರ ಜಿಲ್ಲಾ ಸಮಿತಿಯ ಅಧ್ಯಕ್ಷ ಆರ್. ಮೂರ್ತಿ, ಗ್ರಾಮಾಂತರ ಜಿಲ್ಲಾ ಸಮಿತಿಯ ಅಧ್ಯಕ್ಷ ಬಿ.ಜೆ. ವಿಜಯ್ ಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಎಂ.ಶಿವಣ್ಣ, ಹೇಮಂತ್ ಪಾಲ್ಗೊಂಡಿದ್ದರು.

### ವಾರ್ಷಿಕ 177.25ಟಿಎಂಸಿ ನೀರು ಬಿಡಬೇಕು.

**ಸುಪ್ರೀಂಕೋರ್ಟ್ ನಿರ್ದೇಶನದ ಅನುಸಾರ ನಮ್ಮಲ್ಲಿ ವಾರ್ಷಿಕ 177.25ಟಿಎಂಸಿ ನೀರು ಬಿಡಬೇಕು. ಜೂ.9.19, ಜು.31.24, ಆ.45.95, ಸೆ.36.71, ಅ.20.22, ನ.15, ಡಿ.7.30 ಟಿಎಂಸಿಯಷ್ಟು ನೀರು ಬಿಡಬೇಕಿದೆ. ಈಗಾಗಲೇ 36ಟಿಎಂಸಿ ನೀರು ಬಿಟ್ಟಿದ್ದೇವೆ. ಈಗಿರುವ ಜಲಾಶಯಗಳ ನೀರಿನಲ್ಲಿ 30ಟಿಎಂಸಿ ಬೆಂಗಳೂರು, 6ಟಿಎಂಸಿ ಮೈಸೂರು, 15 ಟಿಎಂಸಿ ಇತರೆ ಜಿಲ್ಲೆಗಳ ಕುಡಿಯುವ ನೀರಿಗೆ ಬಳಕೆಯಾಗಲಿದೆ. ಹೀಗಾಗಿ ನಮಗೆ 45 ಟಿಎಂಸಿ ನೀರು ಅವಶ್ಯಕವಾಗಿದೆ. ಇನ್ನೂ 7 ಟಿಎಂಸಿ ಪ್ರಾಣಿ ಪಕ್ಷಗಳಿಗೆ, 10 ಟಿಎಂಸಿ ಆವಿ ಆಗುತ್ತದೆ. ಕೆಆರ್‌ಎಸ್, ಹಾರಂಗಿ, ಕಬಿನಿ, ಹೇಮಾವತಿ ಜಲಾಶಯಗಳಲ್ಲಿ ಡೆಡ್ ಸ್ಟೋರೇಜ್ 114ಟಿಎಂಸಿ ನೀರು ಬಳಕೆಗಿಲ್ಲದ್ದಾಗಿದೆ. ಅಲ್ಲದೆ, ಈಗ ಜಲಾಶಯಗಳ ನೀರು ಆಗಸ್ಟ್ ನಲ್ಲಿ ನಮ್ಮ ಉಪಯೋಗಕ್ಕೆ ಉಳಿಸಿಕೊಂಡಿರುವ ನೀರಾಗಿದೆ. ಇಂತಹ ಸಾಮಾನ್ಯ ಕನಿಷ್ಠ ವಿಚಾರಗಳನ್ನು ಮನವರಿಕೆ ಮಾಡಿಕೊಡುವ ಕೆಲಸವನ್ನು ಕಾನೂನು ತಜ್ಞರು ಮಾಡಬೇಕು. ಇದೆಲ್ಲದರ ಆಧಾರದ ಮೇಲೆ ಈಗಿರುವ ನೀರು ನಮಗೆ ಕುಡಿಯುವುದಕ್ಕೆ ಸಾಲುವುದಿಲ್ಲ ಎಂದು ಹೇಳಿದರು.**

> **ನೀವು ರಾಜಕಾರಣದಲ್ಲಿ ಹಿರಿಯರಾಗಿ ಯತೀಂದ್ರರ ಬಗ್ಗೆ ತೆಗಳುವುದು ಸರಿಯಲ್ಲ. ನಿಮ್ಮ ಬಾಯಿ ಚಪಲ ಬಿಡದಿದ್ದರೆ ಉಗ್ರವಾಗಿ ಖಂಡಿಸಲಾಗುವುದು. ನಿಮಗೆ ನಿಜವಾಗಿಯೂ ತಾಕತ್ ಇದ್ದರೆ ಕೆ.ಆರ್.ನಗರ ಸೇರಿ ಯಾವುದೇ ಕ್ಷೇತ್ರದಲ್ಲಿ ನಿಮ್ಮ ಮಗನನ್ನು ನಿಲ್ಲಿಸಿ ಗೆಲ್ಲಿಸಿ ತೋರಿಸಿ. ಜೆಡಿಎಸ್, ಬಿಜೆಪಿ ಎಲ್ಲರೂ ನಿಮ್ಮನ್ನು ಹೊರಗಿಟ್ಟಿದ್ದಾರೆ. ಮಾಜಿ ಸಂಸದ ಪ್ರತಾಪಸಿಂಹಗೆ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಲು ಯಾಕೆ ಅವಕಾಶ ನೀಡುತ್ತಿಲ್ಲ, ಮೊದಲು ಹೇಳಲಿ. ನಮ್ಮ ಪಕ್ಷದ ಚಿಂತೆ ಅವರಿಗೆ ಬೇಡ. ಡಿಕೆಶಿ ಸರ್ಕಾರಕ್ಕೆ ಸಿದ್ದರಾಮಯ್ಯ ಶ್ರೀರಕ್ಷೆಯಿದೆ.**
>
> **ಎಂ.ಶಿವಣ್ಣ** ಕಾಂಗ್ರೆಸ್ ನಗರ ಪ್ರಧಾನ ಕಾರ್ಯದರ್ಶಿ

## ಆ.16ಕ್ಕೆ ಈಶ ಗ್ರಾಮೋತ್ಸವ



ಮೈಸೂರು: ಈಶ ಔಟ್‌ರೀಚ್ ವತಿಯಿಂದ ಆ. 16 ರಂದು ನಗರದ ಜಯಲಕ್ಷ್ಮಿಪುರಂ ಮಹಾಜನ ಕಾಲೇಜು ಕ್ರೀಡಾಂಗಣದಲ್ಲಿ ಅತಿದೊಡ್ಡ ಗ್ರಾಮೀಣ ಕ್ರೀಡೋತ್ಸವ ಎನಿಸಿದ ಈಶ ಗ್ರಾಮೋತ್ಸವ ಆಯೋಜಿಸಲಾಗಿದೆ ಎಂದು ಸ್ವಯಂಸೇವಕರಾದ ಸ್ವಾಮಿ ತಮಿಸ್ರಾ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಂದು ಬೆಳಗ್ಗೆ 9.30ಕ್ಕೆ ಖೇಲೋ ಇಂಡಿಯಾ ಕಾರ್ಯ ನಿರ್ವಾಹಹಕ ನಿರ್ದೇಶಕರಾದ ಅಮರ್ ಜ್ಯೋತಿ, ಮೋಹಿತ್ ವಾಸ್ವಾಮಿ, ಅಮ್ಮ ರಾಮಚಂದ್ರ, ಜಾವಗಲ್ ಶ್ರೀನಾಥ್, ಆನಂದ್‌ಕುಮಾರ್ ಬೋರೇಗೌಡ ಇನ್ನಿತರರ ಸಮ್ಮುಖದಲ್ಲಿ ಚಾಲನೆ ದೊರೆಯಲಿದೆ ಇದರಲ್ಲಿ ಸುಮಾರು 300 ಗ್ರಾಮೀಣ ಆಟಗಾರರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು. ಸಾಂಪ್ರದಾಯಿಕ ಕ್ರೀಡೆಗಳನ್ನು ಪುನರುಜ್ಜೀವನಗೊಳಿಸಲು, ದೈಹಿಕ ಆರೋಗ್ಯ ಉತ್ತೇಜಿಸಲು, ಆಟದ ರೂಪಾಂತರಣೀಯ ಶಕ್ತಿ ಮೂಲಕ ಗ್ರಾಮೀಣ ಭಾರತದ ಸಾಮಾಜಿಕ ಸವಾಲುಗಳನ್ನು ಎದುರಿಸಲೆಂದು ಔಟ್‌ರೀಚ್ ಸಂಸ್ಥೆ ಸ್ಥಾಪನೆಯಾಗಿದ್ದು, ಅದರ ಭಾಗವಾಗಿ ಈ ಈಶ ಗ್ರಾಮೋತ್ಸವ ವಿಭಾಗೀಯ ಪಂದ್ಯಗಳು ನಡೆಯಲಿವೆ ಎಂದು ಮಾಹಿತಿ ನೀಡಿದರು. ಸುಜಾತ, ಚಿತ್ತರಂಜನ್ ಇದ್ದರು.

## ಆ.19ರಂದು ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದ ಗೋಲಕ ಹಣ ಎಣಿಕೆ



ಚಾಮರಾಜನಗರ, ಮಲೆಮಹದೇಶ್ವರ ಬೆಟ್ಟದ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದ ಗೋಲಕಗಳ ಎಣಿಕೆ ಕಾರ್ಯವನ್ನು ಬೆಟ್ಟದ ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಸಂಕೀರ್ಣ ಕಟ್ಟಡದ ಮೊದಲ ಮಹಡಿಯ ವಿಶ್ರಾಂತಿ ಗೃಹದಲ್ಲಿ ಆಗಸ್ಟ್ 19ರಂದು ಬೆಳಿಗ್ಗೆ ಕೊಳ್ಳೇಗಾಲ ಶಾಖೆಯ ಬ್ಯಾಂಕ್ ಆಫ್ ಬರೋಡ ಸಿಬ್ಬಂದಿ ಸಹಯೋಗದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್‌ನೊಂದಿಗೆ ನಡೆಸಲಾಗುವುದು ಎಂದು ಪ್ರಾಧಿಕಾರದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂಬನಿಯೊಂದಿಗೆ ಶ್ರೀಗಳಿಗೆ ಅಂತಿಮ ವಿದಾಯ







ಮೈಸೂರು: ಇಲ್ಲಿನ ಹೊಸಮಠದ ಅಧ್ಯಕ್ಷ ಚಿದಾನಂದ ಸ್ವಾಮೀಜಿಯವರ ಅಂತ್ಯಕ್ರಿಯೆ (ಕ್ರಿಯಾ ಸಮಾಧಿ) ಶುಕ್ರವಾರ ಸಾವಿರಾರು ಜನರ ಅಶ್ರುತರ್ಪಣದೊಂದಿಗೆ ಮಠದ ಆವರಣದಲ್ಲಿ ನೆರವೇರಿತು.

ಸುತ್ತೂರು ವೀರಸಿಂಹಾಸನ ಮಹಾಸಂಸ್ಥಾನದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ತುಮಕೂರಿನ ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿ ನೇತೃತ್ವದಲ್ಲಿ, ವಿವಿಧ ಮಠಗಳ ಸ್ವಾಮೀಜಿಗಳ ಸಮ್ಮುಖದಲ್ಲಿ ಲಿಂಗಾಯತ ಸಂಪ್ರದಾಯದಂತೆ ಧಾರ್ಮಿಕ ವಿಧಿವಿಧಾನಗಳು ನೆರವೇರಿದವು. ಹೊಸಮಠದ ಉತ್ತರಾಧಿಕಾರಿ ಸಿದ್ದಬಸವ ಸ್ವಾಮೀಜಿ ನೆರವೇರಿಸಿದರು.

ಮೈಸೂರು ಜಿಲ್ಲೆಯೊಂದಿಗೆ, ಚಾಮರಾಜನಗರ, ಮಂಡ್ಯ, ಹಾಸನ, ಬೆಂಗಳೂರು ಮೊದಲಾದ ಕಡೆಗಳಿಂದ ಆಗಮಿಸಿದ್ದ ನೂರಕ್ಕೂ ಹೆಚ್ಚು ಸ್ವಾಮೀಜಿಗಳು ಭಾಗವಹಿಸಿದ್ದರು. ವಿಧಾನಪರಿಷತ್ ಮಾಜಿ ಸದಸ್ಯರಾದ ತೋಂಟದಾರ್ಯ, ಸಿದ್ದರಾಜು, ಡಿ.ಮಾದೇಗೌಡ, ಶಾಸಕ ಟಿ.ಎಸ್.ಶ್ರೀವತ್ಸ, ವೀರಶೈವ ಲಿಂಗಾಯತ ಸಮಾಜದ ಮುಖಂಡರು ಪಾಲ್ಗೊಂಡಿದ್ದರು.

ಶ್ರೀಗಳ ಪಾರ್ಥಿವ ಶರೀರವನ್ನು ಬೆಳಿಗ್ಗೆ 9ರವರೆಗೆ ಫೋರ್ಟ್‌ಮೊಹಲ್ಲಾದ ಹೊಸಮಠದ ಆವರಣದಲ್ಲಿ ಸಾರ್ವಜನಿಕರ ದರ್ಶನಕ್ಕಾಗಿ ಇರಿಸಲಾಗಿತ್ತು. ಬಳಿಕ, ಹೊಸಮಠದ ಆವರಣದಿಂದ ಹೊರಟ ಪಾರ್ಥಿವ ಶರೀರದ ಮೆರವಣಿಗೆಯು ರಾಮಾನುಜ ರಸ್ತೆಯ ಮೂಲಕ ಸಾಗಿ, ಚಾಮುಂಡಿಪುರಂ ವೃತ್ತ-ಬಸವೇಶ್ವರ ರಸ್ತೆ, ಕುದೇರುಮಠದ ರಸ್ತೆ, ನೂರೊಂದು ಗಣಪತಿ ದೇವಸ್ಥಾನ ವೃತ್ತ, ಅಗ್ರಹಾರ, ಜೆಎಸ್‌ಎಸ್ ಆಸ್ಪತ್ರೆ ಎದುರಿನ ರಸ್ತೆಯ ಮೂಲಕ ಹೊಸಮಠವನ್ನು ತಲುಪಿತು. ಭಕ್ತರು, ಸ್ವಾಮೀಜಿಗಳು, ನಟರಾಜ ಸಂಸ್ಥೆ ಸಿಬ್ಬಂದಿ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

**ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಯಶಸ್ವಿ**

# ಅಂತರಾಷ್ಟ್ರೀಯ ಯುವ ದಿನಾಚರಣೆ: ಏಡ್ಸ್ ಅರಿವು




ಚಾಮರಾಜನಗರ, ಚಾಮರಾಜನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕದ ಸಹಯೋಗದೊಂದಿಗೆ ಅಂತರಾಷ್ಟ್ರೀಯ ಯುವ ದಿನಾಚರಣೆ ಹಾಗೂ ಎಚ್‌ಐವಿ/ಏಡ್ಸ್ ಅರಿವು ಕಾರ್ಯಕ್ರಮ ಬುಧವಾರ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ. ಡಿ. ಮಧು ಅವರು ಮಾತನಾಡಿ ಇಂಜಿನಿಯರಿಂಗ್ ವಿದ್ಯಾರ್ಥಿ ಗಳು ದೇಶದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುವ ಯುವ ಶಕ್ತಿಯಾಗಿದ್ದು, ದೇಶದ ಪ್ರಗತಿ ಹಾಗೂ ಭವಿಷ್ಯ ರೂಪಿಸುವಲ್ಲಿ ಇವರ ಕೊಡುಗೆ ಅಮೂಲ್ಯವಾಗಿದೆ. ಯುವ ಜನರು ತಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದರ ಜೊತೆಗೆ, ಸಾಮಾಜಿಕ ಜವಾಬ್ದಾರಿ ಮತ್ತು ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದರು.

ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಅಧಿಕಾರಿ ಡಾ. ರವಿಕುಮಾರ್ ಅವರು ಮಾತನಾಡಿ ಯುವಕರಲ್ಲಿ ಮಾನಸಿಕ ಆರೋಗ್ಯ, ವೈಯಕ್ತಿಕ ಆರೋಗ್ಯ ಹಾಗೂ ಎಚ್‌ಐವಿ/ಏಡ್ಸ್ ಕುರಿತು ಸರಿಯಾದ ಅರಿವು ಅತ್ಯಂತ ಮುಖ್ಯವಾಗಿದೆ. ಎಚ್‌ಐವಿ ಮತ್ತು ಏಡ್ಸ್ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವ ತಪ್ಪು ಮಾಹಿತಿ, ಸಂದೇಶಗಳನ್ನು ಪರಾಮರ್ಶಿಸಿ ವಿವೇಚನೆಯಿಂದ ಸ್ವೀಕರಿಸಬೇಕು ಎಂದರು. ಎಚ್‌ಐವಿ ಹರಡುವ ವಿಧಾನಗಳು, ಕೈಗೊಳ್ಳಬೇಕಾದ ಮುನ್ನೆಚ್ಚರಿಕೆಗಳು, ಎಚ್‌ಐವಿ ಪರೀಕ್ಷೆಯ ಉದ್ದೇಶ, ಸಮಯೋಚಿತವಾಗಿ ಆರೋಗ್ಯ ತಪಾಸಣೆ ಒಳಗಾಗುವ ಮಹತ್ವವನ್ನು ಡಾ. ರವಿಕುಮಾರ್ ಅವರು ವಿವರಿಸಿದರು.

ತಾಲೂಕು ಆರೋಗ್ಯಾಧಿಕಾರಿ ಡಾ. ಸಿ. ಹೆಚ್. ಶ್ರೀನಿವಾಸ್ ಅವರು ಮಾತನಾಡಿ ವಿದ್ಯಾರ್ಥಿಗಳು ಮತ್ತು ಯುವಕರು ದೇಶದ ಬೆನ್ನೆಲುಬು ಇದ್ದಂತೆ. ಯುವಶಕ್ತಿಯು ದೇಶದ ಅಭಿವೃದ್ಧಿಗೆ ಅತ್ಯಂತ ಅವಶ್ಯಕವಾಗಿದ್ದು, ಯುಜನರು ಆದರ್ಶಪ್ರಾಯರಾಗಿರುವ ಸ್ವಾಮಿ ವಿವೇಕಾನಂದರ ಜೀವನ, ಚಿಂತನೆಗಳು ಮತ್ತು ನೀಡಿದ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಮೇಲ್ವಿಚಾರಕರಾದ ಮಹದೇವ ಪ್ರಸಾದ್ ಅವರು ಮಾತನಾಡಿ ಎಚ್‌ಐವಿ ಕುರಿತು ಸರಿಯಾದ ಜ್ಞಾನ ಮತ್ತು ಮುನ್ನೆಚ್ಚರಿಕೆಗಳನ್ನು ಪಾಲಿಸುವ ಮೂಲಕ ಸೋಂಕನ್ನು ತಡೆಗಟ್ಟಲು ಸಾಧ್ಯವಿದೆ. ಯುವಕರು ತಮ್ಮ ಆರೋಗ್ಯದ ಬಗ್ಗೆ ಜಾಗೃತರಾಗಬೇಕು. ಎಚ್‌ಐವಿ/ಏಡ್ಸ್ ಕುರಿತು ವೈಜ್ಞಾನಿಕ ಮತ್ತು ಸತ್ಯಾಧಾರಿತ ಮಾಹಿತಿಯನ್ನು ಹಂಚಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಎಚ್‌ಐವಿ/ಏಡ್ಸ್ ಅರಿವು ಮತ್ತು ಸಾಮಾಜಿಕ ಜವಾಬ್ದಾರಿ ಕುರಿತ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು. ರೆಡ್ ರಿಬ್ಬನ್ ಕ್ಲಬ್ ಸಂಯೋಜಕರಾದ ಪ್ರೊ?ರ. ಸೌಜನ್ಯ, ರೆಡ್ ಕ್ರಾಸ್ ಸಂಯೋಜಕರಾದ ನಾಗೇಶ್, ಡಾ. ಮನಿಲ್ ರಾಜ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಹೊನ್ನೂರು ಪ್ರಕಾಶ್ ಮೇಲೆ ಪ್ರಕರಣ ದಾಖಲಿಸಿ



ಚಾಮರಾಜನಗರ. ನೂತನ ಸಚಿವ ಸಿ.ಪುಟ್ಟರಂಗಶೆಟ್ಟಿ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿರುವ ರೈತ ಮುಖಂಡ ಹೊನ್ನೂರು ಪ್ರಕಾಶ್ ಮೇಲೆ ಸುಮೊಟೋ ಪ್ರಕರಣ ದಾಖಲಿಸಿ ಕ್ರಮಕೈಗೊಳ್ಳಬೇಕು ಎಂದು ವಕೀಲ ಅರುಣ್ ಕುಮಾರ್ ಆಗ್ರಹಿಸಿದರು.

ಹೊನ್ನೂರು ಪ್ರಕಾಶ್ ಸಮಾಜದ ಶಾಂತಿಯನ್ನು ಹಾಳು ಮಾಡಿದ್ದಾರೆ. ಶಾಂತವಾಗಿರುವ ರೈತರನ್ನು ಕೆರಳಿಸುವ ಕೆಲಸ ಮಾಡಿದ್ದಾರೆ. ಸರ್ಕಾರ ಮತ್ತು ರೈತರ ನಡುವೆ ಅಶಾಂತಿ ಸೃಷ್ಟಿಸಿ ದಂಗೆ ಎಬ್ಬಿಸುವ ಪ್ರಯತ್ನ ಮಾಡಿದ್ದಾರೆ ಆಗಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಅವರ ಮೇಲೆ ಸುಮೊಟೋ ಪ್ರಕರಣ ದಾಖಲಿಸಿ ಕಾನೂನು ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಹೊನ್ನೂರು ಪ್ರಕಾಶ್ ಅವರು ಹಲವಾರು ಹೋರಾಟಗಳನ್ನು ಮಾಡಿಕೊಂಡು ಬಂದಿದ್ದಾರೆ ಅದನ್ನು ನಾವು ಸ್ವಾಗತಿಸುತ್ತೇವೆ. ನಿಮಗೆ ವಯಸ್ಸಾಗಿದೆ. ನಿಮ್ಮ ಪದ ಬಳಕೆ ಕಾನೂನಾತ್ಮಕವಾಗಿರಲಿ. ನೀವೇನು ಕಾಂಗ್ರೆಸ್ ಪಕ್ಷದ ವಕ್ತಾರರಲ್ಲ. ನೀವು ಸಚಿವ ಸ್ಥಾನದ ವಂಚಿತ ಶಾಸಕರಲ್ಲ. ನೀವು ಪಕ್ಷದ ಆಂತರಿಕ್ಷ ವಿಷಯಗಳ ಬಗ್ಗೆ ದೊಡ್ಡ ಜವಾಬ್ದಾರಿಯನ್ನು ತೆಗೆದುಕೊಂಡಿಲ್ಲ. ಅದಕ್ಕೆ ನಮ್ಮ ಹೈಕಮಾಂಡ್ ಇದೆ ಅದನ್ನು ಮಾಡುತ್ತದೆ. ನಿಮ್ಮ ಪದ ಬಳಕೆ ಏನು ಇದೆ. ನೀವು ಯಾರು ರೈತರನ್ನು ಕೇಳುವುದಕ್ಕೆ ಅಂತಾ ಅಂದ ಮೇಲೆ, ನೀವು ನಮ್ಮ ಸಚಿವರ ಪ್ರಶ್ನೆ ಮಾಡಲು ನೀವು ಯಾರು?. ನೀವು 4 ಬಾರಿ ಗೆದ್ದಿದ್ದೀರಿ ಎಂದು ಸಚಿವರಿಗೆ ಧಮಕಿ ಹಾಕುತ್ತಿರಲ್ಲ. ಹೊನ್ನೂರು ಪ್ರಕಾಶ್ ಅವರೇ ನೀವು ಚಾಮರಾಜನಗರ ಕ್ಷೇತ್ರದ ಮತದಾರರಲ್ಲ. ನಮ್ಮ ಕ್ಷೇತ್ರದವರು ಅವರನ್ನು ಮತಹಾಕಿ ಗೆಲ್ಲಿಸಿದ್ದಾರೆ ಹೊರತು ನೀವು ಗೆಲ್ಲಿಸಿಲ್ಲ. ಆಗಾಗಿ ತಮ್ಮ ಪದ ಬಳಕೆ ಮಿತಿ ಇರಲಿ. ಸಚಿವರಿಗೆ ಗೌರವ ಕೊಡುವ ನಿಟ್ಟಿನಲ್ಲಿ ನೀವು ಮಾತನಾಡಿ ಎಂದು ಮನವಿ ಮಾಡಿದರು.

ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಕರ್ ಮಾತನಾಡಿ, ರೈತ ಮುಖಂಡ ಹೊನ್ನೂರು ಪ್ರಕಾಶ್ ಜಿಲ್ಲೆಯಲ್ಲಿ ಬರ ಅಧ್ಯಯನ ಮಾಡುತ್ತಿರುವ ನೂತನ ಸಚಿವ ಸಿ.ಪುಟ್ಟರಂಗಶೆಟ್ಟಿ ವಿರುದ್ಧ ಅವಹೇಳಕಾರಿಯಾಗಿ ಮಾತನಾಡಿರುವುದು ಸರಿಯಲ್ಲ. ನೂತನ ಸಚಿವರು ನಾಲಾಯಕ್ ಎಂದು ಹೇಳಿಕೆ ನೀಡಿರುವುದು ಮನಸ್ಸಿಗೆ ಬಹಳ ನೋವು ಉಂಟು ಮಾಡಿದೆ. ಪ್ರತಿಭಟನೆ ಮಾಡುವುದು ಎಲ್ಲರ ಹಕ್ಕು ನ್ಯಾಯಯುತವಾಗಿ ಹೋರಾಟ ಮಾಡಲಿ ಅದನ್ನು ಬಿಟ್ಟು ಸಚಿವರನ್ನು ನಾಲಾಯಕ್ ಎಂದು ಹೇಳಲು ನೀವು ಯಾರು ? ಸಚಿವರ ಬಗ್ಗೆ ಗೌರವಯುತವಾಗಿ ಮಾತನಾಡಲಿ. ಅವರ ಬಗ್ಗೆ ಅವಹೇಳನಕಾರಿ ಮಾತನಾಡುವುದನ್ನು ನಿಲ್ಲಿಸಬೇಕು ಎಂದರು. ಹಿಂದುಳಿದವರ್ಗದ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರು ಸಚಿವರಾದ ಮೇಲೆ ಅವಹೇಳನಕಾರಿ ಯಾಗಿ ಮಾತನಾಡಿ ಅಗೌರವ ಉಂಟು ಮಾಡಿದ್ದೀರಿ ಇದು ಸರಿಯಲ್ಲ ಸಚಿವರ ಬಗ್ಗೆ ಗೌರವಯುತವಾಗಿ ಮಾತನಾಡಿ ಜಿಲ್ಲೆಯ ಅಭಿವೃದ್ಧಿ ಸಲಹೆಗಳನ್ನು ನೀಡಿ ಎಂದರು. ಪತ್ರಿಕಾಗೋಷ್ಠಿಯಲ್ಲಿ ಯಳಂದೂರು ಟಿಎಪಿಎಂಎಸ್ ಸದಸ್ಯ ಸಿದ್ಧಪ್ಪಸ್ವಾಮಿ, ರವಿ, ನಗರಸಭಾ ಮಾಜಿ ಸದಸ್ಯ ಕರಿಗಂಜನಪುರ ಸ್ವಾಮಿ. ಚೂಡ ಸದಸ್ಯ ರಾಜೇಂದ್ರ ದ್ವಾರ್ಕಿ ಹಾಜರಿದ್ದರು.

# ಸ್ವಾತಂತ್ರ್ಯೋತ್ಸವ ಮಹತ್ವದ ಜಾಗೃತಿ




ಚಾಮರಾಜನಗರ. ಸ್ವಾತಂತ್ರ್ಯ ದಿನಾಚರಣೆಯ ಪ್ರಯುಕ್ತ ನಗರದ ಬಂಜಾರ ಇಂಡಿಯನ್ ಶಾಲೆಯ ವತಿಯಿಂದ ಸಾರ್ವಜನಿಕರು ಹಾಗೂ ಮಕ್ಕಳಲ್ಲಿ ದೇಶಪ್ರೇಮ, ದೇಶಭಕ್ತಿ, ಸ್ವಚ್ಛ ಭಾರತ ಮತ್ತು ಸ್ವಾತಂತ್ರ್ಯೋತ್ಸವದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು.

ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಜಾಗೃತಿ ಜಾಥಾಕ್ಕೆ ಬಂಜಾರ ಎಜುಕೇಶನ್ ಅಂಡ್ ಸೋಷಿಯಲ್ ಟ್ರಸ್ಟ್ ಅಧ್ಯಕ್ಷ ಶಿವಾಜಿ ಆರ್. ಮೆಘಾವತ್ ಚಾಲನೆ ನೀಡಿದರು. ಶಾಲಾ ಮಕ್ಕಳು ಬೀದಿ ನಾಟಕಗಳ ಮೂಲಕ ಸಾರ್ವಜನಿಕರಲ್ಲಿ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ತ್ಯಾಗ, ದೇಶಪ್ರೇಮ, ದೇಶಭಕ್ತಿ ಹಾಗೂ ಮಹಾತ್ಮ ಗಾಂಧೀಜಿಯವರ ಸ್ವಚ್ಛ ಭಾರತದ ಕನಸು ಕುರಿತು ಜಾಗೃತಿ ಮೂಡಿಸಿದರು. ಜಾಗೃತಿ ಜಾಥಾವು ಭುವನೇಶ್ವರಿ ರಸ್ತೆ ಹಾಗೂ ಬಿ. ರಾಚಯ್ಯ ಜೋಡಿ ರಸ್ತೆಯ ಮೂಲಕ ಸಾಗಿ ಜಿಲ್ಲಾಡಳಿತ ಭವನದ ಮುಂಭಾಗ ತಲುಪಿತು. ಬಳಿಕ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಕಾರ್ಯಕ್ರಮ ಮುಕ್ತಾಯಗೊಂಡಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಲೆಯ ಮುಖ್ಯಶಿಕ್ಷಕ ಸಂತೋಷ್, "ಸ್ವಾತಂತ್ರ್ಯೋತ್ಸವದ ಅಂಗವಾಗಿ ಸಾರ್ವಜನಿಕರು ಹಾಗೂ ಮಕ್ಕಳಲ್ಲಿ ದೇಶಪ್ರೇಮ, ದೇಶಭಕ್ತಿ ಮತ್ತು ಸ್ವಾತಂತ್ರ್ಯೋತ್ಸವದ ಮಹತ್ವದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಬಂಜಾರ ಇಂಡಿಯನ್ ಶಾಲೆಯ ವತಿಯಿಂದ ಈ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ" ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಟ್ರಸ್ಟಿಗಳಾದ ಜಗದೀಶ್ ನಾಯಕ್, ಮುಖ್ಯಶಿಕ್ಷಕ ಸಂತೋಷ್, ಶಿಕ್ಷಕರಾದ ರಾಜೇಂದ್ರ, ಸಾಧನ ಹಾಗೂ ನಯನಾ ಸೇರಿದಂತೆ ಶಾಲಾ ಮಕ್ಕಳು ಭಾಗವಹಿಸಿದ್ದರು.

## ನದಿಗೆ ಶೌಚ ನೀರು: ಏಳು ಮಂದಿ ವಿರುದ್ಧ ದೂರು



ಮೈಸೂರು: ಎಚ್.ಡಿ. ಕೋಟೆ, ಸರಗೂರು ತಾಲ್ಲೂಕಿನ ಶೌಚದ ನೀರು, ಚರಂಡಿ, ಗೃಹಬಳಕೆ ಹಾಗೂ ವಾಣಿಜ್ಯ ತ್ಯಾಜ್ಯ ನೀರು ಕಬಿನಿ ನದಿಗೆ ಸೇರುತ್ತಿರುವುದನ್ನು ತಡೆಯಲು ಕ್ರಮ ಕೈಗೊಳ್ಳದ ಆರೋಪದ ಮೇಲೆ ಸೇವ್ ಕಬಿನಿ ತಂಡದ ವತಿಯಿಂದ ಶಾಸಕ, ತಹಶೀಲ್ದಾರ್ ಸೇರಿ ಏಳು ಮಂದಿ ವಿರುದ್ಧ ಎಚ್.ಡಿ ಕೋಟೆ ಠಾಣೆಗೆ ದೂರು ನೀಡಿ ಎಫ್‌ಐಆರ್ ದಾಖಲಿಸಲು ಕೋರಲಾಗಿದೆ ಎಂದು ತಂಡದ ಸದಸ್ಯ ಮಂಜುಕಿರಣ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈ ವಿಷಯ ಕುರಿತು ಆ. 4 ರಂದು ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಸಮಸ್ಯೆ ವಿವರಿಸಲಾಗಿತ್ತು. ಈ ವೇಳೆ ಪ್ರಯೋಗಾಲಯದಿಂದ ಕಬಿನಿ ನೀರು ಕಲುಷಿತವಾಗಿರುವ ಬಗೆಗಿನ ವರದಿ ಸಹಾ ಬಿಡುಗಡೆಗೊಳಿಸಲಾಗಿತ್ತು. ಅಲ್ಲದೆ, ಈ ಅವ್ಯವಸ್ಥೆ ತಡೆಯಲು ವಿಫಲರಾದ ಅಧಿಕಾರಿಗಳು, ಜನಪ್ರತಿನಿಧಿಗಳ ವಿರುದ್ಧ ದೂರು ದಾಖಲಿಸಲಾಗುವುದಾಗಿ ತಿಳಿಸಲಾಗಿತ್ತು. ಅದರಂತೆ ಈಗ ದೂರು ದಾಖಲಿಸಲಾಗಿದೆ ಎಂದರು. ಸ್ಥಳೀಯ ಶಾಸಕರು, ಎರಡೂ ತಾಲ್ಲೂಕಿನ ತಹಶೀಲ್ದಾರರು, ಜಿಪಂ ಸಿಇಒ, ಕಬಿನಿ ನೀರಾವರಿ ಇಲಾಖೆ ಮುಖ್ಯಸ್ಥರು, ಸ್ಥಳೀಯ ನಗರಸಭೆಯ ಅಧಿಕಾರಿಗಳು ಹಾಗೂ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳ ವಿರುದ್ಧ ದೂರು ದಾಖಲಿಸಲಾಗಿದೆ ಎಮದು ವಿವರಿಸಿ, ಒಂದು ವೇಳೆ ಇವರ ವಿರುದ್ಧದ ಕ್ರಿಮಿನಲ್ ಪ್ರಕರಣವೆಂಬ ದೂರನ್ನು ಆಧರಿಸಿ ಎಫ್‌ಐಆರ್ ದಾಖಲಿಸದಿದ್ದರೆ ನಗರದ ಎಸ್‌ಪಿ ಕಚೇರಿಗೆ ಮುತ್ತಿಗೆ ಹಾಕುವುದಾಗಿ ಎಚ್ಚರಿಸಿದರು. ವಕೀಲ ರವಿಕುಮಾರ್, ಡಿಪಿಕೆ ಪರಮೇಶ್, ಮಹಾಂತೇಶ್, ದೂರುದಾರ ದೊರೆಸ್ವಾಮಿ ಹಾಗೂ ಇನ್ನಿತರರು ಇದ್ದರು.

## ಇಂದು ನಗರದೆಲ್ಲೆಡೆ ಸ್ವಾತಂತ್ರ್ಯೋತ್ಸವ

ಮೈಸೂರು: ಮೈಸೂರಿನಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಹಾಗೂ ಅದ್ದೂರಿಯಾಗಿ ಆಚರಿಸಲು ಜಿಲ್ಲಾಡಳಿತವು ಬನ್ನಿಮಂಟಪ ಮೈದಾನದಲ್ಲಿ ಆ.15 ರಂದು ಬೆಳಗ್ಗೆ 9 ಗಂಟೆಗೆ ಧ್ವಜಾರೋಹಣ ಸೇರಿ ವಿವಿಧ ಸಿದ್ಧತೆಗಳನ್ನು ಕೈಗೊಂಡಿದೆ.

ಇದೇ ವೇಳೆ ಜಿಲ್ಲಾ ಪಂಚಾಯಿತಿಯಿಂದ ಜಿಲ್ಲೆಯ 85 ಅಮೃತ್ ಸರೋವರಗಳ ಮೇಲೂ ರಾಷ್ಟ್ರಧ್ವಜ ಹಾರಿಸಿ ಜಲ ಸಂರಕ್ಷಣೆ ಮತ್ತು ಪರಿಸರ ಜಾಗೃತಿ ಮೂಡಿಸಲು ತೀರ್ಮಾನಿಸಲಾಗಿದೆ. ಮೈಸೂರಿನ ಬನ್ನಿಮಂಟಪ ಮೈದಾನದಲ್ಲಿ ಬೆಳಗ್ಗೆ 9 ಗಂಟೆಗೆ ಅಧಿಕೃತ ಧ್ವಜಾರೋಹಣ ಮತ್ತು ಪಥಸಂಚಲನ ಕಾರ್ಯಕ್ರಮ ಅಯೋಜಿಸಲಾಗಿದೆ. ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಸಚಿವರಾಗಿ ಇದೇ ಮೊದಲ ಬಾರಿಗೆ ಧ್ವಜಾರೋಹಣ ನೇರವೇರಿಸುವರು. ಮುಖ್ಯ ಅತಿಥಿಗಳಾಗಿ ಶಾಸಕ, ಸಂಸದರು ಹಾಗೂ ನಿಗಮ, ಮಂಡಳಿ ಅಧ್ಯಕ್ಷರು ಭಾಗವಹಿಸಿವರು. ಶಾಲಾ ಮಕ್ಕಳು, ಯುವಕ ಸಂಘಗಳು ಮತ್ತು ಸ್ವಸಹಾಯ ಗುಂಪುಗಳಿಂದ ಜಾಗೃತಿ ಜಾಥಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

**ಕಾವೇರಿ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ, ಕಾನೀನಿನಿ.,
ಯಗಚಿ ಯೋಜನಾ ವಿಭಾಗ, ಬೇಲೂರು, ಹಾಸನ ಜಿಲ್ಲೆ

**ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ: 05/2026-27 ದಿನಾಂಕ: 14.08.2026 (ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಮಾತ್ರ)**

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪರವಾಗಿ ಕಾರ್ಯಪಾಲಕ ಇಂಜಿನಿಯರ್, ಯಗಚಿ ಯೋಜನಾ ವಿಭಾಗ, ಬೇಲೂರು ಇವರು ಕರ್ನಾಟಕ ಕಾರ್ಮಿಕ ಇಲಾಖೆಗಳಲ್ಲಿ ಕಾರ್ಮಿಕ ಪರವಾನಗಿಗೆ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಕರ್ನಾಟಕ ಪಾರದರ್ಶಕ ಕಾಯಿದೆ 2000 ರ ಅನ್ವಯ ಅಲ್ಪಾವಧಿ ಟೆಂಡರ್‌ಗಳನ್ನು https://kppp.karnataka.gov.in Plat Form ನಲ್ಲಿ SERVICES ಅಡಿಯಲ್ಲಿ ಟೆಂಡರ್‌ಗಳನ್ನು ಕಾರ್ಯಪಾಲಕ ಇಂಜಿನಿಯರ್, ಯಗಚಿ ಯೋಜನಾ ವಿಭಾಗ, ಬೇಲೂರು ಇವರು ಆಹ್ವಾನಿಸಿದ್ದು, ಟೆಂಡರ್ ಪ್ರಕ್ರಿಯೆ ದಿನಾಂಕಗಳು ಈ ಕೆಳಕಂಡಂತಿವೆ. (1) ಟೆಂಡರ್ ಪ್ರೊಸೆಸಿಂಗ್ ಫೀ: https://kppp.karnataka.gov.in ನಲ್ಲಿ ವೀಕ್ಷಿಸಬಹುದು (2)https://kppp.karnataka.gov.in ನಲ್ಲಿ ದಾಖಲಾತಿಗಳನ್ನು ಪಡೆಯುವ ಹಾಗೂ ಅಪ್‌ಲೋಡ್ ಮಾಡುವ ಅವಧಿ: ದಿನಾಂಕ: 14-08-2026 ರಿಂದ ದಿನಾಂಕ: 21-08-2026 ವರೆಗೆ ಸಂಜೆ 4.00 ಘಂಟೆವರೆಗೆ (3) ಟೆಂಡರ್ ತೆರೆಯುವ ದಿನಾಂಕ: 24-08-2026 ಬೆಳಗ್ಗೆ 11.00 ಘಂಟೆಗೆ (4) ಕಾಮಗಾರಿಗಳ ಸಂಖ್ಯೆ: 11 (ಹನ್ನೊಂದು) (5) ಕೆಲಸದ ಕಾಲಮಿತಿ : 08 ತಿಂಗಳು (ಮಳೆಗಾಲ ಸೇರಿ) (6) ಕಾಮಗಾರಿಯ ಟೆಂಡರಿಗಿಟ್ಟ ಗರಿಷ್ಠ ಮೊತ್ತ:ರೂ.26.56 ಲಕ್ಷಗಳು (7) ಕಾಮಗಾರಿಯ ಟೆಂಡರಿಗಿಟ್ಟ ಕನಿಷ್ಠ ಮೊತ್ತ: ರೂ.4.81 ಲಕ್ಷಗಳು (8) ಇ.ಎಂ.ಡಿ. ಗರಿಷ್ಠ ಮೊತ್ತ ರೂ. 0.53 ಲಕ್ಷಗಳು (9) ಇ.ಎಂ.ಡಿ. ಕನಿಷ್ಠ ಮೊತ್ತ ರೂ. 0.12 ಲಕ್ಷಗಳು (10)ಕರ್ನಾಟಕ ಕಾರ್ಮಿಕ ಇಲಾಖೆಗಳಲ್ಲಿ ಕಾರ್ಮಿಕ ಪರವಾನಗಿಗೆ ನೊಂದಾಯಿತ ಅರ್ಹ ಗುತ್ತಿಗೆದಾರರು. ಸೂಚನೆ: 1. ಯಾವುದೇ ಸಂದರ್ಭದಲ್ಲಾದರೂ ಯಾವುದೇ ಕಾರಣ ನೀಡದೆ ಟೆಂಡರ್‌ಗಳನ್ನು ಅಂಗೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಈ ಕೆಳಗೆ ಸಹಿ ಮಾಡಿರುವವರು ಕಾಯ್ದಿರಿಸಿಕೊಂಡಿರುತ್ತಾರೆ. 2. ಟೆಂಡರ್ ನಿಬಂಧನೆಗಳು ಹಾಗೂ ಸಂಬಂಧಪಟ್ಟ ವಿವರಗಳನ್ನು e-procurement portal https://kppp.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿರುತ್ತದೆ. ಟೆಂಡರಿಗಿಟ್ಟ ಮೊತ್ತವು ಬದಲಾವಣೆಗೆ ಒಳಪಟ್ಟಿರುತ್ತದೆ.

ಸಹಿ/-ಕಾರ್ಯಪಾಲಕ ಇಂಜಿನಿಯರ್, ಕಾನೀನಿನಿ,
ಯಗಚಿ ಯೋಜನಾ ವಿಭಾಗ, ಬೇಲೂರು

ವಾಸಾಸಂಇ/ಹಿಸನಿ/ಹಾಸನ/415/ಕೆಎಸ್‌ಎಂಸಿಎ/2026-27

# ಪಿಎಲ್‌ಡಿ ಬಿಜೆಪಿ ಹಿಡಿತ

## ಅಧ್ಯಕ್ಷ ಮಾಡ್ರಹಳ್ಳಿ ನಾಗೇಂದ್ರ, ಉಪಾಧ್ಯಕ್ಷ ನಿಂಗನಾಯಕ ಆಯ್ಕೆ

ಗುಂಡ್ಲುಪೇಟೆ: ತಾಲೂಕು ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ನ ನೂತನ ಅಧ್ಯಕ್ಷರಾಗಿ ಮಾಡ್ರಹಳ್ಳಿ ನಾಗೇಂದ್ರ ಹಾಗೂ ಉಪಾಧ್ಯಕ್ಷರಾಗಿ ಯಡವನಹಳ್ಳಿ ನಿಂಗನಾಯಕ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪಟ್ಟಣದ ಬ್ಯಾಂಕ್ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಮಾಡ್ರಹಳ್ಳಿ ನಾಗೇಂದ್ರ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಿಂಗನಾಯಕ ಅವರನ್ನು ಹೊರತುಪಡಿಸಿ ಬೇರೆ ಯಾವುದೇ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸದ ಕಾರಣ, ಸಹಕಾರ ಇಲಾಖೆಯ ಚುನಾವಣಾಧಿಕಾರಿ ಪದ್ಮನಾಭ ಅವರು ಇಬ್ಬರೂ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಅಧಿಕೃತವಾಗಿ ಘೋಷಿಸಿದರು.

**ರೈತರ ಹೋರಾಟ ಮತ್ತು ಸರ್ಕಾರದ ವಿರುದ್ಧ ಆಕ್ರೋಶ**

**ಕೆರೆಗಳಿಗೆ ನೀರು ತುಂಬಿಸುವಂತೆ ಆಗ್ರಹಿಸಿ ಶಾಂತಿಯುತವಾಗಿ ಪ್ರತಿಭಟನೆ ನಡೆಸಲು ಮುಂಚಿತವಾಗಿಯೇ ಮನವಿ ಸಲ್ಲಿಸಿದ್ದರೂ ಅಧಿಕಾರಿಗಳು ಸ್ಥಳಕ್ಕೆ ಬಾರದ ಕಾರಣ ಅನಿವಾರ್ಯವಾಗಿ ರಸ್ತೆ ತಡೆ ನಡೆಸಬೇಕಾಯಿತು ಎಂದು ನಿರಂಜನಕುಮಾರ್ ದೂರಿದರು. ವಾಹನ ಸಂಚಾರಕ್ಕೆ ಯಾವುದೇ ಅಡಚಣೆಯಾಗದಿದ್ದರೂ ರೈತರ ಮತ್ತು ಪ್ರತಿಭಟನಾಕಾರರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುವುದು ಖಂಡನೀಯ ಎಂದರು. ಶಿವಪುರ ಗ್ರಾಮದಲ್ಲಿ ಕಾರ್ಯಕರ್ತರನ್ನು ಬೆದರಿಸಲು ಪೊಲೀಸರನ್ನು ಕಳುಹಿಸುವ ಕ್ರಮವನ್ನು ನಿಲ್ಲಿಸಬೇಕು. ಶಾಸಕರು ತಮ್ಮ ಕಲ್ಲು ಗಣಿಗಾರಿಕೆ ಜಾಗಗಳಿಗೆ ತೆರಳಲು ರೈತರ ಜಮೀನುಗಳನ್ನು ತೆರವುಗೊಳಿಸಿ ರಸ್ತೆ ನಿರ್ಮಿಸಿಕೊಂಡಿದ್ದಾರೆ ಹಾಗೂ ಹಾಲಹಳ್ಳಿ ಗ್ರಾಮದ ದಾನದ ಜಮೀನಿನಲ್ಲಿ ಭವನ ನಿರ್ಮಿಸಿ ತಮ್ಮ ಕುಟುಂಬದ ಹೆಸರು ಹಾಕಿಕೊಂಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.**




### ಕಾಂಗ್ರೆಸ್‌ಗೆ ಮುಖಭಂಗ, ಬಿಜೆಪಿಗೆ ಭರ್ಜರಿ ಜಯ

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಮಾಜಿ ಶಾಸಕ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನ ಕುಮಾರ್ ಮಾತನಾಡಿ, ಬ್ಯಾಂಕ್ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಒಟ್ಟು ಹದಿನಾಲ್ಕು ಸ್ಥಾನಗಳ ಪೈಕಿ ಹನ್ನೆರಡು ಸ್ಥಾನಗಳಲ್ಲಿ ಭರ್ಜರಿ ಗೆಲುವು ಸಾಧಿಸಿರುವುದು ಆಡಳಿತ ಪಕ್ಷದ ವಿರುದ್ಧ ಜನರು ನೀಡಿದ ಸ್ಪಷ್ಟ ತೀರ್ಪಾಗಿದೆ ಎಂದರು. ಕಾಂಗ್ರೆಸ್ ಬೆಂಬಲಿತರು ಕೇವಲ ಎರಡು ಸ್ಥಾನಗಳಿಗೆ ತೃಪ್ತಿಪಟ್ಟುಕೊಳ್ಳುವಂತಾಗಿದೆ. ಕೆರೆಗಳಿಗೆ ನೀರು ತುಂಬಿಸುವ ವಿಚಾರದಲ್ಲಿ ರೈತರ ಮೇಲೆ ನಡೆದ ದೌರ್ಜನ್ಯ, ನೆರೆ ರಾಜ್ಯಕ್ಕೆ ಅಕ್ರಮವಾಗಿ ಖನಿಜ ಸಂಪತ್ತು ಸಾಗಾಟಕ್ಕೆ ಅವಕಾಶ ನೀಡಿರುವುದು ಹಾಗೂ ಆಡಳಿತ ವರ್ಗದ ನಿಷ್ಕ್ರಿಯತೆಯಿಂದ ಬೇಸತ್ತಿರುವ ರೈತರು ಕಾಂಗ್ರೆಸ್ ಪಕ್ಷವನ್ನು ಸಂಪೂರ್ಣವಾಗಿ ತಿರಸ್ಕರಿಸಿದ್ದಾರೆ ಎಂದು ಟೀಕಿಸಿದರು.

### ರೈತರ ಏಳಿಗೆಗೆ ಪ್ರಾಮಾಣಿಕ ಸೇವೆ: ಭರವಸೆ

ನೂತನ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಮಾಡ್ರಹಳ್ಳಿ ನಾಗೇಂದ್ರ ಮಾತನಾಡಿ, ತಮ್ಮ ಅಧಿಕಾರಾವಧಿಯಲ್ಲಿ ರೈತರಿಗೆ ಸರ್ಕಾರ ಹಾಗೂ ಬ್ಯಾಂಕ್ನಿಂದ ದೊರೆಯುವ ಎಲ್ಲಾ ರೀತಿಯ ಸಾಲ ಸೌಲಭ್ಯಗಳನ್ನು ಯಾವುದೇ ತಾರತಮ್ಯವಿಲ್ಲದೆ ಸಮರ್ಪಕವಾಗಿ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದರು. ತಮ್ಮ ಆಯ್ಕೆಗೆ ಸಹಕರಿಸಿದ ಮಾಜಿ ಶಾಸಕರು ಹಾಗೂ ಪಕ್ಷದ ಹಿರಿಯ ಮುಖಂಡರಿಗೆ ಕೃತಜ್ಞತೆ ಸಲ್ಲಿಸಿದರು.ಕಾರ್ಯಕ್ರಮದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಸಿ. ಮಹದೇವ ಪ್ರಸಾದ್, ಮುಖಂಡ ರಾದ ಕನ್ನೇಗಾಲ ಸ್ವಾಮಿ, ಡಿ. ಮಾದಪ್ಪ, ಡಾ. ನವೀನ್ ಮೌರ್ಯ, ಅರಕಲವಾಡಿ ನಾಗೇಂದ್ರ ಸೇರಿದಂತೆ ನೂರಾರು ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

## ಕೇರಳದಿಂದ ಪ್ಲಾಸ್ಟಿಕ್ ತ್ಯಾಜ್ಯ ಸಾಗಿಸುತ್ತಿದ್ದ ಲಾರಿ ವಶ

ಗುಂಡ್ಲುಪೇಟೆ, :- ಕೇರಳದಿಂದ ಪ್ಲಾಸ್ಟಿಕ್ ತ್ಯಾಜ್ಯ ಸಾಗಿಸುತ್ತಿದ್ದ ಲಾರಿಯೊಂದನ್ನು ಪಟ್ಟಣದ ಜಾಕೀರ್ ಹುಸೇನ್ ನಗರದ ಬಳಿ ಗುಂಡ್ಲುಪೇಟೆ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಕೇರಳ ಮೂಲದ ವಿನು ಪಿ.ವಿ. ಎಂಬ ಚಾಲಕ ಕೆಎಲ್-65 ಎಸ್-2493 ನೋಂದಣಿ ಸಂಖ್ಯೆಯ ಲಾರಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಸಾಗಿಸುತ್ತಿದ್ದ ಬಗ್ಗೆ ಸಾರ್ವಜನಿಕರಿಂದ ಬಂದ ಖಚಿತ ಮಾಹಿತಿ ಮೇರೆಗೆ ಪೊಲೀಸರು ವಾಹನ ತಪಾಸಣೆ ನಡೆಸಿದರು. ಈ ವೇಳೆ ಲಾರಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಇರುವುದು ಪತ್ತೆಯಾಗಿದೆ.

ಮಾಹಿತಿ ತಿಳಿದು ಚಾಮರಾಜನಗರ ಜಿಲ್ಲಾ ಪರಿಸರ ಅಧಿಕಾರಿ ಉಮಾಶಂಕರ್ ಸ್ಥಳಕ್ಕೆ ಭೇಟಿ ನೀಡಿ ತ್ಯಾಜ್ಯವನ್ನು ಪರಿಶೀಲಿಸಿದರು. ಲಾರಿಯಲ್ಲಿದ್ದ ತ್ಯಾಜ್ಯ ಪರಿಸರ ಮಾಲಿನ್ಯಕ್ಕೆ ಕಾರಣವಾಗುವುದಲ್ಲದೆ, ಮಾನವ ಹಾಗೂ ಪ್ರಾಣಿಗಳ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ವರದಿ ನೀಡಿದ್ದಾರೆ.

ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಲಾರಿಯನ್ನು ಪ್ಲಾಸ್ಟಿಕ್ ತ್ಯಾಜ್ಯ ಸಮೇತ ವಶಕ್ಕೆ ಪಡೆದಿದ್ದು, ಘಟನೆಗೆ ಸಂಬಂಧಿಸಿದಂತೆ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



## ಟೇಕ್ವಾಂಡೋ ಸ್ಪರ್ಧೆಯಲ್ಲಿ ಶಾನ್ವಿಗೆ ಕಂಚು

**ರಾಮನಗರ:** ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೆ.ಸತೀಷ್ ಅವರ ಪುತ್ರಿ ಶಾನ್ವಿ ಸತೀಶ್ ಟೆಕ್ವೇಂಡೋದಲ್ಲಿ ಮತ್ತಮ್ಮೆ ಮಿಂಚಿದ್ದಾರೆ. ಮಂಗೋಲಿಯಾ ರಾಷ್ಟ್ರದ ಉಲಾನ್‌ಬಾಟರ್ ಎಂಬ ಸ್ಥಳದಲ್ಲಿ ದ ಬಯಂಟ್ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ನಡೆದ 11ನೇ ಏಷ್ಯನ್ ಟೇಕ್ವಾಂಡೋ ಚಾಂಪಿಯನ್ಸ್ ಶಿಪ್ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಶಾನ್ವಿ ಸತೀಶ್ ಕಂಚಿನ ಪದಕ ಗಳಿಸಿದ್ದಾರೆ.

8 ರಿಂದ 10 ವರ್ಷದ 25-28 ತೂಕದ ಪ್ಯಾಟರ್ನ್ ವಿಭಾಗದಲ್ಲಿ ಭಾರತ ತಂಡದಲ್ಲಿ ಭಾಗವಹಿಸಿದ ಎಸ್.ಶಾನ್ವಿ ಸತೀಶ್ ಕಂಚಿನ ಪದಕ ಗೆದ್ದು ಭಾರತಕ್ಕೆ ಗೌರವ ತಂದಿದ್ದಾರೆ. ಈ ಹಿಂದೆ ಶಾನ್ವಿ ಅವರು ದುಬೈ, ಮಲೇಷ್ಯಾ ಮತ್ತು ಬೆಂಗಳೂರಿನಲ್ಲಿ ನಡೆದ ಸ್ಪರ್ಧೆಗಳಲ್ಲಿ ಚಿನ್ನದ ಪದಕ ಪಡೆದಿದ್ದರು. ಭಾರತ ತಂಡದಲ್ಲಿ ಶಾನ್ವಿ ಸೇರಿದಂತೆ 18 ಕ್ರೀಡಾಪಟುಗಳು ಭಾಗವಹಿಸಿದ್ದರು. ಭಾರತದ ತಂಡದೊಂದಿಗೆ ಮಂಗೋಲಿಯಾ, ಉಜ್ವೇಕಿಸ್ಥಾನ್, ಚೀನಾ, ಉತ್ತರ ಕೊರಿಯಾ, ಸಿಂಗಪೂರ್, ಮಲೇಷ್ಯಾ, ಹಾಂಕಾಂಗ್, ಫಿಲಿಪೈನ್ಸ್, ಇಂಗ್ಲೆಂಡ್ ಜಪಾನ್, ಕಿರ್ಗಿಸ್ತಾನ್, ಖಜಾಕಿಸ್ತಾನ್, ಬಾಂಗ್ಲಾದೇಶ,




ಆಫ್ಘಾನಿಸ್ತಾನ, ರಷ್ಯಾ, ತುರ್ಕ್ಮೇನಿಸ್ತಾನ್, ನ್ಯೂಜಿಲ್ಯಾಂಡ್, ಆಸ್ಟ್ರೇಲಿಯಾ ಸೇರಿದಂತೆ ಒಟ್ಟು 22 ದೇಶಗಳ ತಂಡಗಳು ಭಾಗವಹಿಸಿದ್ದವು. ಭಾರತ ತಂಡದಲ್ಲಿ ತರಬೇತುದಾರರಾದ ಪ್ರದೀಪ್, ಬಾಲರಾಜನ್, ಪುನೀತ್ ನವೀನ್ ಮತ್ತು ಕುರತ್ ರವರು ಉತ್ತಮ ತರಬೇತಿ ನೀಡಿದ್ದರು. ಈ ಸಾಧನೆಗೆ ಜಿಲ್ಲಾಧಿಕಾರಿ ಯಶವಂತ್ ಗುರುಕರ್, ಜಿ ಪ ಸಿಇಒ ಅನ್ಮೋಲ್ ಜೈನ್ ಮತ್ತು ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

## ಭಾವಯಾನ ಸಂಗೀತ ಕಾರ್ಯಕ್ರಮ



ಗುಂಡ್ಲುಪೇಟೆ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಟ್ರಸ್ಟ್ ವತಿಯಿಂದ ಪಟ್ಟಣದ ಸ್ಮಾರ್ಟ್ ಪಬ್ಲಿಕ್ ಶಾಲೆಯಲ್ಲಿ 'ಭಾವಯಾನ' ಸಂಗೀತ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಪರಿಕಲ್ಪನೆ ಹಾಗೂ ನಿರ್ದೇಶನವನ್ನು 'ಅಭಿನವ ಕಾಳಿಂಗರಾಯ' ಎಂದೇ ಪ್ರಸಿದ್ಧರಾಗಿರುವ, ಕರ್ನಾಟಕ ಸರ್ಕಾರದ ಸಂತ ಶಿಶುನಾಳ ಶರೀಫ ಪ್ರಶಸ್ತಿ ಪುರಸ್ಕೃತ ಪ್ರೊ. ಎಸ್. ಮಲ್ಲಣ್ಣ ವಹಿಸಿದ್ದರು. ಜೀ ಟಿವಿಯ ಸರಿಗಮಪ ಖ್ಯಾತಿಯ ಗಾಯಕಿ ಶ್ರೀಮತಿ ದಿವ್ಯ ಸಚ್ಚಿದಾನಂದ ಹಾಗೂ ಗಾಯಕ ಪೃಥ್ವಿರಾಜ್ ಹಾಲಹಳ್ಳಿ ಅವರು ಗಾಯನಕ್ಕೆ ಸಾಥ್ ನೀಡಿದರು.

ಕಾರ್ಯಕ್ರಮದಲ್ಲಿ ಎಲ್ಲಾದರೂ ಇರು ಎಂತಾದರೂ ಇರು, ಬ್ರಹ್ಮ ನಿಂಗೆ ಜೋಡಿಸ್ತೀನಿ, ಕಾಣದ ಕಡಲಿಗೆ ಹಂಬಲಿಸಿದೆ ಮನ, ಅಪಾರ ಕೀರ್ತಿ ಗಳಿಸಿ ಮೆರೆದ ಭವ್ಯ ನಾಡು, ಬಾನಲ್ಲೂ ನೀನೆ ಬುವಿಯಲ್ಲೂ ನೀನೆ, ಬಾರೆ ಬಾರೆ ಚಂದದ ಚೆಲುವೆ ಸೇರಿದಂತೆ ಹಲವು ಜನಪ್ರಿಯ ಭಾವಗೀತೆಗಳು, ಜನಪದ ಗೀತೆಗಳು ಹಾಗೂ ಹಳೆಯ ಸುಮಧುರ ಚಿತ್ರಗೀತೆಗಳನ್ನು ಪ್ರಸ್ತುತಪಡಿಸಲಾಯಿತು.

ಸುಮಾರು ಎರಡು ಗಂಟೆಗಳ ಕಾಲ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಕಲಾವಿದರು ಪ್ರೇಕ್ಷಕರಿಗೆ ಸಂಗೀತದ ರಸದೌತಣ ಉಣಬಡಿಸಿದರು. ವಿದ್ಯಾರ್ಥಿಗಳು ಹಾಗೂ ಪ್ರೇಕ್ಷಕರು ಗಾಯನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಸ್ಮಾರ್ಟ್ ಪಬ್ಲಿಕ್ ಶಾಲೆಯ ಗೌರವಾಧ್ಯಕ್ಷ ಗೋಪಾಲಸ್ವಾಮಿ, ಅಧ್ಯಕ್ಷ ರಾಜೇಶ್, ಟ್ರಸ್ಟಿಗಳು, ವಿದ್ಯಾರ್ಥಿಗಳು ಹಾಗೂ ಸಂಗೀತಾಸಕ್ತರು ಉಪಸ್ಥಿತರಿದ್ದರು.

### ಮೊಳಗಿದ ವಂದೇಮಾತರಂ, ಭಾರತ್ ಮಾತಾಕೀ ಘೋಷಣೆ

# ಚಾ.ನಗರ: ಬಿಜೆಪಿ ಯುವಮೋರ್ಚಾದಿಂದ ತಿರಂಗಾಯಾತ್ರೆ

ಚಾಮರಾಜನಗರ. ಐಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಜಿಲ್ಲಾ ಬಿಜೆಪಿ ಯುವಮೋರ್ಚಾದ ವತಿಯಿಂದ ತಿರಂಗಾಯಾತ್ರೆ ನಡೆಯಿತು.

ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಕಾಡಾ ಮಾಜಿ ಅಧ್ಯಕ್ಷ ನಿಜಗುಣರಾಜು ತಿರಂಗಾಯಾತ್ರೆಗೆ ಚಾಲನೆ ನೀಡಿದರು. ತಿರಂಗಾಯಾತ್ರೆಯು ದೊಡ್ಡಂಗಡಿ ಬೀದಿ, ಚಿಕ್ಕಂಗಡಿ, ಸಂತೇಮರಹಳ್ಳಿ ವೃತ್ತ, ಭೌವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ ಮೂಲಕ ರಾಮಸಮುದ್ರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಹುಕ್ಕಳಿ ಬಳಿಗೆ ತೆರಳಿ ಮಾಲಾರ್ಪಣೆ ಮಾಡಿ ತಿರಂಗಾಯಾತ್ರೆ ಮುಕ್ತಾಯವಾಯಿತು.

ಬಿಜೆಪಿ ಮುಖಂಡರು, ಕಾರ್ಯಕರ್ತರು ವಂದೇ ಮಾತರಂ ಘೋಷಣೆ ಮೊಳಗಿಸುತ್ತಾ ತಿರಂಗಾಯಾತ್ರೆ ನಡೆಸಿದರು. ಓಬಿಸಿ ರಾಷ್ಟ್ರೀಯ ಕಾರ್ಯಕಾರಣಿ ಸದಸ್ಯ ನೂರೊಂದುಶೆಟ್ಟಿ ಮಾತನಾಡಿ: ಸ್ವಾತಂತ್ರ್ಯ ಸಂಗ್ರಾಮದಲ್ಲಿ ಬಲಿದಾನ ಮಾಡಿದ ರಾಷ್ಟ್ರಭಕ್ತರಿಗೆ ಪ್ರಣಾಮ ಸಲ್ಲಿಸುವುದು



ನಮ್ಮೆಲ್ಲರ ಕರ್ತವ್ಯ. ಮನೆ ಮನೆಯಲ್ಲಿ ತ್ರಿವರ್ಣ ಧ್ವಜವನ್ನು ಹಾರಿಸುವ ಮೂಲಕ ರಾಷ್ಟ್ರಭಕ್ತಿಯನ್ನು ಪ್ರದರ್ಶಿಸೋಣ' ಎಂದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ವೃಷಬೇಂದ್ರಪ್ಪ ಮಾತನಾಡಿ, ಹೆಮ್ಮೆಯ ದೇಶದ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ರಾಜ್ಯಾಧ್ಯಕ್ಷ ವಿಜೇಂದ್ರ ಅವರ ಆದೇಶ ಮೇರೆಗೆ ಜಿಲ್ಲಾ ಯುವ ಮೋರ್ಚಾದ ವತಿಯಿಂದ ತಿರಂಗಾಯಾತ್ರೆ ಹಮ್ಮಿಕೊಳ್ಳಲಾಗಿದೆ. ದೇಶದ ಸ್ವಾತಂತ್ರಕ್ಕಾಗಿ ದುಡಿದವರ ತ್ಯಾಗದ ಫಲವಾಗಿ ಇಂದು ನಾವೆಲ್ಲರೂ ಈ ಸಂಭ್ರಮವನ್ನು ಅನುಭವಿಸುತ್ತಿದ್ದೇವೆ. ಹಿರಿಯರ ಹೋರಾಟವನ್ನು ಸ್ಮರಿಸುವುದು ನಮ್ಮ ಜವಾಬ್ದಾರಿ. ಯುವಜನರಲ್ಲಿ ದೇಶದ ಬಗ್ಗೆ ಪ್ರೀತಿ, ಅಭಿಮಾನ, ಗೌರವವನ್ನು ಇನ್ನಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ತಿರಂಗ ಯಾತ್ರೆಯನ್ನು ಆಯೋಜಿಸಲಾಗಿದೆ' ಎಂದರು.

ತಿರಂಗಾಯಾತ್ರೆಯಲ್ಲಿ ಜಿಲ್ಲಾ ಬಿಜೆಪಿ ವಕ್ತಾರ ಮನೋಜ್‌ಪಟೇಲ್, ಯುವ ಮೋರ್ಚಾದ ಜಿಲ್ಲಾಧ್ಯಕ್ಷ ಸೂರ್ಯ ಬಾಲರಾಜು, ಪ್ರಧಾನ ಕಾರ್ಯದರ್ಶಿ ಆನಂದ್‌ಭಗೀರಥ್, ನಗರ ಮಂಡಲ ಅಧ್ಯಕ್ಷ ಪ್ರವೀಣ್, ಗ್ರಾಮಾಂತರ ಮಂಡಲ ಅಧ್ಯಕ್ಷ ಪ್ರದೀಪ್, ಉತ್ತುವಳ್ಳಿ ಆನಂದ್ ನಗರಮಂಡಲ ಅಧ್ಯಕ್ಷ ಶಿವರಾಜ್, ಎಸ್‌ಟಿ ಮೋರ್ಚಾದ ಅಧ್ಯಕ್ಷ ಚಂದ್ರಶೇಖರ್, ಉಪಾಧ್ಯಕ್ಷ ಬುಲೆಟ್‌ಚಂದ್ರು, ಜಿಲ್ಲಾ ಕಾರ್ಯದರ್ಶಿ ಗಳಾದ ನಟರಾಜು, ಸುಂದರ್ ರಾಜ್, ಕಚೇರಿ ಕಾರ್ಯದರ್ಶಿ ಪಿ. ರಂಗಸ್ವಾಮಿ, ರಾಮಸಮುದ್ರ ವೇಣುಗೋಪಾಲ್, ವೀರೇಂದ್ರ, ರಾಮಸಮುದ್ರ ಶಿವಣ್ಣ, ಮಾರ್ಕೆಟ್ ಕುಮಾರ್, ಕೂಸಣ್ಣ, ಮಂಜುನಾಥ್, ಸುಂದ್ರಪ್ಪ, ಶಿವಣ್ಣ, ಆನಂದ್, ಮಹೇಶ್, ರಾಜಪ್ಪ, ಇತರರು ಭಾಗವಹಿಸಿದ್ದರು.

# ಮಳೆಯ ಕೊರತೆ: ಬೆಳೆ ಕಟಾವು ಸಮೀಕ್ಷೆ ನಿಖರವಾಗಿರಲಿ

## ಅಧಿಕಾರಿಗಳಿಗೆ ಜಿ.ಪಂ. ಸಿಇಓ ನಂದಿನಿ ಸೂಚನೆ



**ಮಂಡ್ಯ:** ಪ್ರಸಕ್ತ ಸಾಲಿನಲ್ಲಿ ಎಲ್‌ನಿನೋ ಪರಿಣಾಮದಿಂದ ಮಳೆಯ ಪ್ರಮಾಣದಲ್ಲಿ ಇಳಿಕೆಯಾಗಿರುವ ಹಿನ್ನೆಲೆಯಲ್ಲಿ, ಬೆಳೆಗಳ ವಾಸ್ತವಿಕ ಇಳುವರಿ ಹಾಗೂ ಬೆಳೆ ನಷ್ಟದ ನಿಖರ ಅಂದಾಜು ಮಾಡಲು ಬೆಳೆ ಕಟಾವು ಸಮೀಕ್ಷೆಯನ್ನು ನಿಯಮಾನುಸಾರ ಮತ್ತು ವೈಜ್ಞಾನಿಕವಾಗಿ ಕೈಗೊಳ್ಳುವಂತೆ ಜಿಲ್ಲಾ ಪಂಚಾಯತ್ ಸಿಇಓ ನಂದಿನಿ ಕೆ.ಆರ್. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಶುಕ್ರವಾರ ಮಳವಳ್ಳಿ ತಾಲ್ಲೂಕಿನಲ್ಲಿ ನಡೆದ ಬೆಳೆ ಕಟಾವು ಸಮೀಕ್ಷೆಯ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬೆಳೆ ಕಟಾವು ಸಮೀಕ್ಷೆಯಿಂದ ಲಭ್ಯವಾಗುವ ನಿಖರವಾದ ದತ್ತಾಂಶವು ಜಿಲ್ಲೆಯ ಬೆಳೆ ಇಳುವರಿ ಅಂದಾಜು, ರೈತರ ಬೆಳೆ ನಷ್ಟದ ಪ್ರಮಾಣ ಹಾಗೂ ಸರ್ಕಾರದ ವಿವಿಧ ಪರಿಹಾರ ಮತ್ತು ವಿಮಾ ಸಂಬಂಧಿತ ಕ್ರಮಗಳಿಗೆ ಪ್ರಮುಖ ಆಧಾರವಾಗಲಿದೆ. ಆದ್ದರಿಂದ ಸಮೀಕ್ಷಾ ಕಾರ್ಯವನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸುವುದರ ಜೊತೆಗೆ, ಯಾವುದೇ ಲೋಪದೋಷಗಳಿಗೆ ಅವಕಾಶವಿಲ್ಲದಂತೆ ನಿಖರವಾಗಿ ಹಾಗೂ ಪಾರದರ್ಶಕವಾಗಿ ಕೈಗೊಳ್ಳಬೇಕು ಎಂದು ಸೂಚಿಸಿದರು.

ಬೆಳೆ ಕಟಾವು ಸಮೀಕ್ಷೆಯ ಸಂದರ್ಭದಲ್ಲಿ ಆಯ್ಕೆಯಾಗಿರುವ ಜಮೀನುಗಳಿಗೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಖುದ್ದಾಗಿ ಭೇಟಿ ನೀಡಿ, ನಿಗದಿತ ವಿಧಾನದಂತೆ ಮಾದರಿ ಪ್ರದೇಶವನ್ನು ಗುರುತಿಸಿ ಬೆಳೆ ಕಟಾವು ನಡೆಸಬೇಕು. ಕಟಾವು ಮಾಡಿದ ಬೆಳೆಯನ್ನು ನಿಖರವಾಗಿ ತೂಕ ಮಾಡಿ, ಅಗತ್ಯವಿರುವ ಎಲ್ಲಾ ವಿವರಗಳನ್ನು ಸಮೀಕ್ಷಾ ಆಪ್‌ನಲ್ಲಿ ಸಮರ್ಪಕವಾಗಿ ದಾಖಲಿಸಬೇಕು ಎಂದು ನಿರ್ದೇಶನ ನೀಡಿದರು.

**ಆಡಿಟ್ ಕಂಡಿಕೆಗಳ ತೀರುವಳಿಗೆ ನಿಯಮಾನುಸಾರ ಕ್ರಮವಹಿಸಲು ಸೂಚನೆ:** ಮಳವಳ್ಳಿ ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳ ಆಡಿಟ್ ವರದಿಗಳಲ್ಲಿನ ಕಂಡಿಕೆಗಳಿಗೆ ಸಂಬಂಧಿಸಿದಂತೆ ನಡೆದ ಅಡಹಾಕ್ ಸಮಿತಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಸಿಇಓ ಅವರು, ಸರ್ಕಾರದ ನಿರ್ದೇಶನದಂತೆ ಬಾಕಿ ಉಳಿದಿರುವ ಕಂಡಿಕೆಗಳನ್ನು ಪರಿಶೀಲಿಸಿ, ಸಂಬಂಧಿಸಿದ ದಾಖಲೆಗಳನ್ನು ಸಮರ್ಪಕವಾಗಿ ಸಿದ್ಧಪಡಿಸಿ, ನಿಯಮಾನುಸಾರ ತ್ವರಿತವಾಗಿ ತೀರುವಳಿಗೊಳಿಸುವಂತೆ ಅಗತ್ಯ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರದ ಮಾರ್ಗಸೂಚಿಗಳು ಹಾಗೂ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಆಡಿಟ್ ಕಂಡಿಕೆಗಳ ವಿಲೇವಾರಿಗೆ ಆದ್ಯತೆ ನೀಡಬೇಕು. ಯಾವುದೇ ಕಂಡಿಕೆಗಳು ಅನಗತ್ಯವಾಗಿ ಬಾಕಿ ಉಳಿಯದಂತೆ ಸಂಬಂಧಿಸಿದ ಅಧಿಕಾರಿಗಳು ವೈಯಕ್ತಿಕವಾಗಿ ಗಮನಹರಿಸಿ ಕ್ರಮವಹಿಸಬೇಕು ಎಂದು ಸಿಇಓ ಅವರು ಸೂಚಿಸಿದರು.

**ಇ–ಆಫೀಸ್ ಸಂಪೂರ್ಣ ಜಾರಿ ಹಾಗೂ ಬಾಕಿ ಪ್ರಕರಣಗಳ ತ್ವರಿತ ವಿಲೇವಾರಿಗೆ ಸೂಚನೆ**

ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಇ–ಆಫೀಸ್ ತಂತ್ರಾಂಶವನ್ನು ಜಾರಿಗೊಳಿಸಿರುವುದನ್ನು ಪರಿಶೀಲಿಸಿದ ಜಿಲ್ಲಾ ಪಂಚಾಯತ್ ಸಿಇಓ ನಂದಿನಿ ಕೆ.ಆರ್. ಅವರು, ಇ–ಆಫೀಸ್ ವ್ಯವಸ್ಥೆಯನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಿ, ಕಚೇರಿಯ ಎಲ್ಲಾ ಕಡತಗಳನ್ನು ಇ–ಆಫೀಸ್ ತಂತ್ರಾಂಶದ ಮೂಲಕವೇ ರವಾನಿಸುವಂತೆ ಇಓ ರವರಿಗೆ ಸೂಚಿಸಿದರು.

ಕಚೇರಿಯ ಎಲ್ಲಾ ಸಿಬ್ಬಂದಿಗಳು ಕರ್ತವ್ಯ ಆಪ್ ಮೂಲಕ ನಿಯಮಿತವಾಗಿ ಹಾಜರಾತಿ ದಾಖಲಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಿದ ಅವರು, ಹಾಜರಾತಿ ವ್ಯವಸ್ಥೆಯನ್ನು ಸಮರ್ಪಕವಾಗಿ ಪಾಲಿಸುವಂತೆ ಹಾಗೂ ಈ ಬಗ್ಗೆ ಇಓ ರವರು ಮೇಲ್ವಿಚಾರಣೆ ನಡೆಸುವಂತೆ ಸೂಚಿಸಿದರು.

ಇದೇ ವೇಳೆ, ಕಾರ್ಯನಿರ್ವಾಹಕ ಅಧಿಕಾರಿಗಳ ಹಂತದಲ್ಲಿ ಬಾಕಿ ಇರುವ ಮೇಲ್ಮನವಿ ಪ್ರಕರಣಗಳ ಕುರಿತು ಮಾಹಿತಿ ಪಡೆದ ಸಿಇಓ ಅವರು, ಪ್ರಕರಣಗಳನ್ನು ನಿಯಮಾನುಸಾರ ಪರಿಶೀಲಿಸಿ ಯಾವುದೇ ವಿಳಂಬವಿಲ್ಲದೆ ತ್ವರಿತವಾಗಿ ತೀರುವಳಿಗೊಳಿಸುವಂತೆ ನಿರ್ದೇಶನ ನೀಡಿದರು. ಸಾರ್ವಜನಿಕರ ಅಹವಾಲುಗಳು ಮತ್ತು ಮೇಲ್ಮನವಿ ಪ್ರಕರಣಗಳ ವಿಲೇವಾರಿಯಲ್ಲಿ ಕಾಲಮಿತಿಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಮಳವಳ್ಳಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಿವಾಸ್, ಜಿಲ್ಲಾ ಸಾಂಖ್ಯಿಕ ಅಧಿಕಾರಿ ಕೇಶವಮೂರ್ತಿ, ತಾಲ್ಲೂಕು ಯೋಜನಾಧಿಕಾರಿ ದೀಪು ಸೇರಿದಂತೆ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತ್‌ಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

# ವಿದ್ಯಾರ್ಥಿಗಳಿಗೆ ಕಲೆ, ಸಾಹಿತ್ಯದ ಬಗ್ಗೆ ಪ್ರೋತ್ಸಾಹ ನೀಡಿ: ವೆಂಕಟರಾಜು



**ಚಾಮರಾಜನಗರ:** ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಕಲೆ, ಸಾಹಿತ್ಯ, ಸಂಗೀತ, ನಾಟಕಗಳ ಬಗ್ಗೆ ತಿಳಿವಳಿಕೆ ನೀಡಬೇಕು. ಆಸಕ್ತಿ ಇದ್ದವರಿಗೆ ಪ್ರೋತ್ಸಾಹ ನೀಡಬೇಕು ಎಂದು ಎಂದು ರಂಗ ಕರ್ಮಿ ಕೆ. ವೆಂಕಟರಾಜು ಹೇಳಿದರು.

ನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನ ಸಭಾಂಗಣದಲ್ಲಿಂದು ಕನ್ನಡ ಮತ್ತು ಸಂಸ್ಕೃತಿಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಸಾಧಕರೊಂದಿಗೆ ಸಂವಾದ ಕಾರ್ಯಕ್ರಮದಡಿ ತಿಂಗಳ ಅತಿಥಿಯಾಗಿ ಅವರು ಭಾಗವಹಿಸಿ ಕಾರ್ಯಕ್ರಮ ಉದ್ಘಾಟಿಸಿ ತಮ್ಮ ಮನದಾಳದ ಮಾತುಗಳನ್ನು ನುಡಿದರು.

ಶಿಕ್ಷಕರು ಜವಾಬ್ದಾರಿಯಿಂದ ಕೆಲಸ ಮಾಡಿದರೆ ಸಮಾಜದಲ್ಲಿ ಹೊಸ ಜನಾಂಗವೇ ಸೃಷ್ಟಿಯಾಗುತ್ತದೆ. ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಕಲೆ, ಸಾಹಿತ್ಯ, ಸಂಗೀತ, ನಾಟಕಗಳ ಬಗ್ಗೆ ತಿಳಿಸುವಂತಾಗಬೇಕು. ಆಸಕ್ತ ವಿದ್ಯರ್ಥಿಗಳಿಗೆ ಉತ್ತೇಜನ ನೀಡಬೇಕು. ಶಾಲಾ ಕಾಲೇಜುಗಳಲ್ಲಿ ಕಲೆ ಸಾಹಿತ್ಯಗಳು ಬೆಳೆಯದಿದ್ದರೆ ರಂಗಭೂಮಿ ಬೆಳೆಯುವುದಿಲ್ಲ ಎಂದು ಅವರು ಅಭಿಪ್ರಾಯಪಟ್ಟರು.

ನಾಟಕಗಳಲ್ಲಿ ನಟಿಸುತ್ತಿದ್ದ ನಮ್ಮ ತಂದೆಯವರ ಪ್ರೇರಣೆಯಿಂದ ನನ್ನ ರಂಗ ಪ್ರವೇಶವಾಯಿತು. ಟಿವಿ, ಮೊಬೈಲ್ ಇರದೆ ಇದ್ದ ಸಂದರ್ಭದಲ್ಲಿ ನಗರದ ರಾಮಮಂದಿರದ ಮುಂಭಾಗ ಪ್ರಹ್ಲಾದ ಚರಿತ್ರೆ, ಕಿಸ ಗೌತಮಿ, ಚೌ ಚೌ ನಂತಹ ನಾಟಕಗಳಲ್ಲಿ ಹಲವು ಪಾತ್ರಗಳಲ್ಲಿ ನಮ್ಮ ತಂದೆಯವರು ನಟಿಸುತ್ತಿದ್ದರು. ಇದರಿಂದ ನಾಟಕಗಳ ಬಗ್ಗೆ ಅಭಿಮಾನ ಮತ್ತು ಆಸಕ್ತಿ ಹುಟ್ಟಿತು. 1974ರಲ್ಲಿ ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ಕ್ಷೇತ್ರ ಶಿಕ್ಷಕರಾಗಿ ಕರ್ತವ್ಯದೊಂದಿಗೆ ನಾಟಕಗಳು, ಸಾಹಿತ್ಯ, ಅನುವಾದ, ಬರವಣಿಗೆಗಳಂತಹ ವಿಷಯಗಳಲ್ಲಿ ತೊಡಗಿಸಿಕೊಂಡಿದ್ದೆ ಎಂದು ತಮ್ಮ ರಂಗಭೂಮಿ ಕುರಿತ ಒಡನಾಟದ ಬಗ್ಗೆ ಹೇಳಿದರು.

ದೇಶ ಸುತ್ತು ಕೋಶ ಓದು ಎನ್ನುವ ಹಾಗೆ ದಕ್ಷಿಣ ಕನ್ನಡ ಮಾತ್ರವಲ್ಲ ಉತ್ತರ ಕರ್ನಾಟಕ ಜಿಲ್ಲೆಗಳು ಕೂಡ ಅದ್ಭುತ. ನಾವು ಅದನ್ನು ನೋಡುವ ದೃಷ್ಟಿ ಬದಲಾಗಬೇಕು. ಆ ಭಾಗದ ಜನರು, ಆಹಾರ, ಜನಗಳ ಒಡನಾಟ, ಸಂಸ್ಕೃತಿ, ಸಾಹಿತ್ಯ ಕೂಡ ಬಹಳ ಸುಂದರವಾಗಿದೆ ಎಂದು ಅವರು ತಿಳಿಸಿದರು.

ನಗರದ ಕಲಾ ರಂಗತಂಡಗಳು ತಮ್ಮ ಇತಿಮಿತಿಯಲ್ಲಿ ಕೆಲಸ ಮಾಡುತ್ತಿವೆ. ಎಲ್ಲಾ ತಂಡಗಳು ವೈವಿಧ್ಯಮಯವಾಗಿ ಹೊಸ ಹೊಸ ಸಂವೇದನೆ ಅಳವಡಿಸಿಕೊಳ್ಳಬೇಕು. ನಾಟಕಗಳು ಸರಳವಾಗಿದ್ದಷ್ಟು ಕೂಡ ಅದರ ಪ್ರಭಾವ ಹೆಚ್ಚಾಗುತ್ತದೆ ಮತ್ತು ನೋಡುವ ಆಸಕ್ತಿಯು ಹೆಚ್ಚಲಿದೆ ಎಂದು ತಮ್ಮ ಅನುಭವದ ಮಾತುಗಳನ್ನಾಡಿದರು.

ಸಂವಾದದಲ್ಲಿ ಮೈಸೂರು ವಿಭಾಗದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ನಿರ್ಮಲಾ ಮಠಪತಿ ಅವರು ಮಾತನಾಡಿ ಇಲಾಖೆಯ ಬೆಂಗಳೂರಿನ ಕೇಂದ್ರ ಕಚೇರಿಯಿಂದ ನಯನ ಸಭಾಂಗಣದಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರ ವಿವಿಧ ಭಾಗಗಳಿಂದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಮಹನೀಯರನ್ನು ಕರೆದು ಅವರ ಜೀವನ ಸಾಧನೆಗಳ ಬಗ್ಗೆ ಪರಿಚಯ ಮಾಡಿಕೊಡಲಾಗುತ್ತಿತ್ತು. ಮೊದಲ ಬಾರಿಗೆ ಚಾಮರಾಜನಗರದಲ್ಲಿ ಈ ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು.

ರಂಗಕರ್ಮಿ ಕೆ. ವೆಂಕಟರಾಜು ಅವರು ಒಂದು ವಿಶ್ವಕೋಶ ಇದ್ದ ಹಾಗೆ. ಕಲೆ, ಸಾಹಿತ್ಯ, ಪರಂಪರೆ, ಸಂಘಟನೆ, ಬರವಣಿಗೆ, ಅನುವಾದ, ಮುಂತಾದವುಗಳಲ್ಲಿ ಅವರು ಎತ್ತಿದ ಕೈ. ಸ್ವಾತಂತ್ರ್ಯ ಹೋರಾಟಗಾರರ ಮನೆಯಲ್ಲಿ ಹುಟ್ಟಿ ಹೋರಾಟದ ಕಿಚ್ಚು, ಗಾಂಭೀರ್ಯ, ಚಿಂತನೆ ಮತ್ತು ಸರಳತೆಯನ್ನು ಮೈಗೂಡಿಸಿಕೊಂಡು ಬೆಳೆದು ಬಂದಿದ್ದಾರೆ. ಇಂತಹ ಮಹನೀಯರನ್ನು ಗೌರವಿಸುವುದು ನಮ್ಮ ಕರ್ತವ್ಯ ಎಂದು ಅವರು ತಿಳಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಬಿ.ಎಸ್. ರಾಜು, ಜೆಎಸ್‌ಎಸ್ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಪ್ರಭು, ಜಾನಪದ ಗಾಯಕರಾದ ಸಿ.ಎಂ. ನರಸಿಂಹಮೂರ್ತಿ, ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# PLDಬ್ಯಾಂಕ್ ಅಧ್ಯಕ್ಷರಾಗಿ ಮಾದ್ರಹಳ್ಳಿ ನಾಗೇಂದ್ರ ಆಯ್ಕೆ

## ಉಪಾಧ್ಯಕ್ಷರಾಗಿ ನಿಂಗನಾಯಕ ಅವಿರೋಧ ಆಯ್ಕೆ



**ಗುಂಡ್ಲುಪೇಟೆ:** ತಾಲೂಕು ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ (ಪಿಎಲ್ಡಿ) ಬ್ಯಾಂಕ್ನ ಅಧ್ಯಕ್ಷರಾಗಿ ಮಾದ್ರಹಳ್ಳಿ ನಾಗೇಂದ್ರ ಯಡವನಹಳ್ಳಿ ನಿಂಗನಾಯಕ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪಟ್ಟಣದ ಪಿಎಲ್ಡಿ ಬ್ಯಾಂಕ್ ಕಚೇರಿಯಲ್ಲಿ ಶುಕ್ರವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಮಾದ್ರಹಳ್ಳಿ ನಾಗೇಂದ್ರ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಿಂಗನಾಯಕ ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಸಹಕಾರ ಇಲಾಖೆಯ ಚುನಾವಣಾಧಿಕಾರಿ ಪದ್ಮನಾಭ ಅವರು ಇಬ್ಬರ ಅವಿರೋಧ ಆಯ್ಕೆಯನ್ನು ಘೋಷಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್, ಪಿಎಲ್ಡಿ ಬ್ಯಾಂಕ್ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು 14 ಸ್ಥಾನಗಳ ಪೈಕಿ 12 ಸ್ಥಾನಗಳಲ್ಲಿ ಗೆಲುವು ಸಾಧಿಸಿರುವುದು ಜನರು ನೀಡಿದ ಸ್ಪಷ್ಟ ತೀರ್ಪಾಗಿದೆ. ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ಕೇವಲ ಎರಡು ಸ್ಥಾನಗಳಿಗೆ ಸೀಮಿತರಾಗಿದ್ದಾರೆ. ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು ರೈತರ ಪರವಾಗಿ ಉತ್ತಮವಾಗಿ ಕಾರ್ಯನಿರ್ವಹಿಸಲಿ ಎಂದು ಶುಭ ಹಾರೈಸಿದರು.

**ರೈತರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಿಲ್ಲ**

ಕೆರೆಗಳಿಗೆ ನೀರು ತುಂಬಿಸುವ ವಿಚಾರದಲ್ಲಿ ರೈತರ ಮೇಲೆ ದೌರ್ಜನ್ಯ, ಕೇರಳಕ್ಕೆ ಖನಿಜ ಸಂಪತ್ತು ಸಾಗಾಟಕ್ಕೆ ಅವಕಾಶ ಹಾಗೂ ಆಡಳಿತ ವರ್ಗದ ನಿಷ್ಕ್ರಿಯತೆ ಸೇರಿದಂತೆ ಹಲವು ಕಾರಣಗಳಿಂದ ರೈತರು ಕಾಂಗ್ರೆಸ್ ಪಕ್ಷವನ್ನು ತಿರಸ್ಕರಿಸಿದ್ದಾರೆ ಎಂದು ನಿರಂಜನಕುಮಾರ್ ಆರೋಪಿಸಿದರು.

ಕೆರೆಗಳಿಗೆ ನೀರು ತುಂಬಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸುವುದಾಗಿ ತಹಶೀಲ್ದಾರ್ಗೆ ಮನವಿ ಸಲ್ಲಿಸಲಾಗಿತ್ತು. ಆದರೆ ಪ್ರತಿಭಟನಾ ಸ್ಥಳಕ್ಕೆ ತಹಶೀಲ್ದಾರ್ ಆಗಮಿಸದ ಹಿನ್ನೆಲೆಯಲ್ಲಿ ರಸ್ತೆ ತಡೆ ನಡೆಸುವ ಪರಿಸ್ಥಿತಿ ನಿರ್ಮಾಣವಾಯಿತು. ಸುಮಾರು ಒಂದು ಗಂಟೆಯ ಬಳಿಕ ತಹಶೀಲ್ದಾರ್ ಸ್ಥಳಕ್ಕೆ ಆಗಮಿಸಿದರು. ವಾಹನ ಸಂಚಾರಕ್ಕೆ ಯಾವುದೇ ಅಡಚಣೆ ಉಂಟಾಗದಿದ್ದರೂ ಪ್ರತಿಭಟನಾಕಾರರ ವಿರುದ್ಧ ಪ್ರಕರಣ ದಾಖಲಿಸಿರುವುದು ಎಷ್ಟು ಸರಿ ಎಂದು ಪೊಲೀಸ್ ಅಧಿಕಾರಿಗಳನ್ನು ಪ್ರಶ್ನಿಸಿದರು.

ಶಿವಪುರ ಗ್ರಾಮದಲ್ಲಿ ಬಿಜೆಪಿ ಕಾರ್ಯಕರ್ತರನ್ನು ತೆರವುಗೊಳಿಸಲು ವಿನಾಕಾರಣ ಪೊಲೀಸರನ್ನು ಕಳುಹಿಸುವ ಕ್ರಮ ಕೈಬಿಡಬೇಕು ಎಂದು ಒತ್ತಾಯಿಸಿದರು. ಶಾಸಕರು ತಮ್ಮ ಕ್ವಾರಿಗಳಿಗೆ ತೆರಳಲು ರೈತರ ಜಮೀನುಗಳನ್ನು ತೆರವುಗೊಳಿಸಿ ರಸ್ತೆ ನಿರ್ಮಿಸಿದ್ದಾರೆ. ಹಾಲಹಳ್ಳಿ ಗ್ರಾಮದಲ್ಲಿ ಕೊಡುಗೆ ಜಮೀನಿನಲ್ಲಿ ಭವನ ನಿರ್ಮಿಸಿ ಶ್ರೀಕಂಠಶೆಟ್ಟಿ ಹಾಗೂ ಅವರ ತಂದೆ ಮಹದೇವಪ್ರಸಾದ್ ಅವರ ಹೆಸರನ್ನು ಹಾಕಲಾಗಿದೆ ಎಂದು ದೂರಿದರು.

**ರೈತರಿಗೆ ಸಾಲ ಸೌಲಭ್ಯ ಕಲ್ಪಿಸುವೆ: ನಾಗೇಂದ್ರ:** ನೂತನ ಅಧ್ಯಕ್ಷ ಮಾದ್ರಹಳ್ಳಿ ನಾಗೇಂದ್ರ ಮಾತನಾಡಿ, ತಮ್ಮ ಅವಧಿಯಲ್ಲಿ ರೈತರಿಗೆ ಸರ್ಕಾರ ಹಾಗೂ ಬ್ಯಾಂಕ್ನಿಂದ ದೊರೆಯುವ ಸಾಲ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುವುದಾಗಿ ಭರವಸೆ ನೀಡಿದರು. ಅಧ್ಯಕ್ಷನಾಗಿ ಆಯ್ಕೆಯಾಗಲು ಸಹಕರಿಸಿದ ಮಾಜಿ ಶಾಸಕ ಸಿ.ಎಸ್.ನಿರಂಜನಕುಮಾರ್ ಹಾಗೂ ಹಿರಿಯ ಮುಖಂಡರು ಎಲ್ಲಾರಿಗೂ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು .

ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ಸಿ.ಮಹದೇವಪ್ರಸಾದ್, ಕನ್ನೇಗಾಲ ಸ್ವಾಮಿ, ಡಿ.ಮಾದಪ್ಪ, ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಡಾ.ನವೀನ್ ಮೌರ್ಯ, ಅರಕಲವಾಡಿ ನಾಗೇಂದ್ರ, ಅಗತಗೌಡನಹಳ್ಳಿ ಬಸವರಾಜು, ಕುರುಬರಹುಂಡಿ ಲೋಕೇಶ್, ಜಗದೀಶ್, ಮಲ್ಲೇಶ್, ಚೆನ್ನಮಲ್ಲಿಪುರ ಬಸವಣ್ಣ, ಸುನೀಲ್ ಮೂಡ್ಲು, ಮಹೇಂದ್ರ, ನಮೋ ಮಂಜು, ಮಲ್ಲೇಶ್ ಇದ್ದರು.

# ಮನೆ ಬಾಗಿಲಿಗೆ ಈ–ಸ್ವತ್ತು ವಿತರಣೆ ಅಭಿಯಾನಕ್ಕೆ ಚಾಲನೆ



**ಗುಂಡ್ಲುಪೇಟೆ:** ಸಾರ್ವಜನಿಕರಿಗೆ ಅಗತ್ಯ ಮೂಲಭೂತ ಸೇವೆಗಳನ್ನು ಮನೆ ಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಪುರಸಭೆ ವ್ಯಾಪ್ತಿಯಲ್ಲಿ ಮನೆ ಬಾಗಿಲಿಗೆ ಈ–ಸ್ವತ್ತು ವಿತರಣೆ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ. ಆ.11ರಂದು ನಡೆದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಸಾರ್ವಜನಿಕ ಸೇವೆಗಳನ್ನು ನೇರವಾಗಿ ಮನೆ ಬಾಗಿಲಿಗೆ ತಲುಪಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೀಡಿದ ನಿರ್ದೇಶನದಂತೆ, ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಹಾಗೂ ಜಿಲ್ಲಾಧಿಕಾರಿ ಶ್ರೀರೂಪಾ ಅವರ ಮಾರ್ಗದರ್ಶನದಲ್ಲಿ ಈ ಅಭಿಯಾನ ಆರಂಭಿಸಲಾಗಿದೆ.

ಪುರಸಭೆ ಮುಖ್ಯಾಧಿಕಾರಿ ಸರವಣ ಎಸ್. ಅವರ ನೇತೃತ್ವದಲ್ಲಿ ನಡೆದ ಮೊದಲ ಹಂತದ ಅಭಿಯಾನದಲ್ಲಿ ಒಟ್ಟು 50 ಮನೆಗಳಿಗೆ ಪುರಸಭೆ ಸಿಬ್ಬಂದಿ ನೇರವಾಗಿ ತೆರಳಿ ಈ–ಸ್ವತ್ತು ದೃಢೀಕರಣ ಪತ್ರಗಳನ್ನು ಹಸ್ತಾಂತರಿಸಿದರು.

ಸಾರ್ವಜನಿಕರು ಅಗತ್ಯ ದಾಖಲೆಗಳನ್ನು ಸಲ್ಲಿಸಿದ ಬಳಿಕ ಪುರಸಭೆಯ ಬಿಲ್ ಕಲೆಕ್ಟರ್ಗಳು ಮನೆಗಳಿಗೆ ತೆರಳಿ ಈ–ಸ್ವತ್ತು ವಿತರಿಸಲಿದ್ದಾರೆ. ಈ ಪ್ರಕ್ರಿಯೆ ಪ್ರತಿ 15 ದಿನಗಳಿಗೊಮ್ಮೆ ನಿರಂತರವಾಗಿ ನಡೆಯಲಿದೆ ಎಂದು ಪುರಸಭೆ ತಿಳಿಸಿದೆ.

ಸಾರ್ವಜನಿಕರ ಕುಂದುಕೊರತೆಗಳಿಗೆ ತ್ವರಿತವಾಗಿ ಸ್ಪಂದಿಸುವ ಉದ್ದೇಶದಿಂದ ಪುರಸಭೆ ವತಿಯಿಂದ 24ಥ7 ಸಹಾಯವಾಣಿ ಆರಂಭಿಸಲಾಗಿದೆ. 94802 29054 ಸಂಖ್ಯೆಗೆ ಕರೆ ಮಾಡಿ ಕುಡಿಯುವ ನೀರಿನ ಸಮಸ್ಯೆ, ಪೈಪ್ಲೈನ್ ಸೋರಿಕೆ, ಕಸ ವಿಲೇವಾರಿ, ಚರಂಡಿ ಸ್ವಚ್ಛತೆ, ಬೀದಿ ದೀಪಗಳ ದುರಸ್ತಿ, ಯುಜಿಡಿ ಸಮಸ್ಯೆ ಹಾಗೂ ಮೃತಪಟ್ಟ ಪ್ರಾಣಿಗಳ ವಿಲೇವಾರಿ ಕುರಿತು ದೂರು ದಾಖಲಿಸಬಹುದು. ದಾಖಲಾದ ದೂರುಗಳನ್ನು 24ರಿಂದ 72 ಗಂಟೆಗಳೊಳಗೆ ಪರಿಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಾಧಿಕಾರಿ ಸರವಣ ಎಸ್. ತಿಳಿಸಿದ್ದಾರೆ. ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

ಕಾರ್ಯಕ್ರಮದಲ್ಲಿ ಕಂದಾಯ ಅಧಿಕಾರಿ ಸವಿತಾ, ಕಿರಿಯ ಎಂಜಿನಿಯರ್ ಅನುಪಮಾ, ಆರೋಗ್ಯ ಪರಿವೀಕ್ಷಕರಾದ ಪರಮೇಶ್ ಹಾಗೂ ಸುಷ್ಮಾ, ಸಿಎಓ ಮೂರ್ತಿ, ಐಟಿ ಸಿಬ್ಬಂದಿ ತ್ರಿವೇಣಿ, ಬಿಲ್ ಕಲೆಕ್ಟರ್ಗಳಾದ ರವಿ, ಪುಟ್ಟಸ್ವಾಮಿ, ರಮೇಶ್ ಹಾಗೂ ಡೇಟಾ ಎಂಟ್ರಿ ಆಪರೇಟರ್ ಪುನೀತಾ ಉಪಸ್ಥಿತರಿದ್ದರು.

# ಆ. 15ರಂದು ನಗರದಲ್ಲಿ 80ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ

**ಚಾಮರಾಜನಗರ:** ಜಿಲ್ಲಾಡಳಿತದ ವತಿಯಿಂದ 80ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಆಗಸ್ಟ್ 15ರಂದು ಬೆಳಿಗ್ಗೆ 9 ಗಂಟೆಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸಂಪುಟ ದರ್ಜೆ ಸಚಿವ ಸಿ. ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸಿ, ಧ್ವಜಾರೋಹಣ ನೆರವೇರಿಸಿ, ಸ್ವಾತಂತ್ರ್ಯೋತ್ಸವದ ಸಂದೇಶ ನೀಡುವರು.

ಲೋಕಸಭಾ ಸದಸ್ಯ ಸುನೀಲ್ ಬೋಸ್ ಮುಖ್ಯ ಅತಿಥಿಗಳಾಗಿ, ಶಾಸಕ ಎ.ಆರ್. ಕೃಷ್ಣಮೂರ್ತಿ, ಎಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮದ್ ಅಸ್ಗರ್ (ಮುನ್ನ) ಅವರು ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

# ಕಾಮನ್‌ವೆಲ್ತ್ ಕ್ರೀಡಾಕೂಟ: ಕಂಚು ಗೆದ್ದ ಪ್ಯಾರಾ ಅಥ್ಲೀಟ್ ಶಿಲ್ಪಾಗೆ ಅಭಿನಂದನೆ



**ಮಂಡ್ಯ:** ಕಾಮನ್‌ವೆಲ್ತ್ ಕ್ರೀಡಾಕೂಟದ ಶಾಟ್‌ಪುಟ್ ವಿಭಾಗದಲ್ಲಿ ಕಂಚಿನ ಪದಕ ಗೆದ್ದು ದೇಶಕ್ಕೆ ಹಾಗೂ ರಾಜ್ಯಕ್ಕೆ ಹೆಮ್ಮೆ ತಂದಿರುವ ಭಾರತದ ಪ್ಯಾರಾ ಅಥ್ಲೀಟ್ ಕುಮಾರಿ ಶಿಲ್ಪಾ ಕೆ.ಎಸ್. ಅವರನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪ್ಯಾರಾ ಒಲಿಂಪಿಕ್ಸ್ ಅಸೋಸಿಯೇಷನ್, ಮಂಡ್ಯ ಹಾಗೂ ಗ್ರಾಮೀಣ ಪುನರ್ವಸತಿ ಯೋಜನೆಯ ಕಾರ್ಯಕರ್ತರ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು.

ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನಂದಿನಿ ಕೆ.ಆರ್., ಶಿಲ್ಪಾ ಅವರು ತಮ್ಮ ಜೀವನದಲ್ಲಿ ಎದುರಾದ ಸವಾಲುಗಳನ್ನು ಅವಕಾಶಗಳಾಗಿ ಪರಿವರ್ತಿಸಿಕೊಂಡು, ಅದಮ್ಯ ಚೇತನ, ಪರಿಶ್ರಮ ಮತ್ತು ಧನಾತ್ಮಕ ಮನೋಭಾವದ ಮೂಲಕ ಸಾಧನೆ ಮಾಡಿರುವುದು ಎಲ್ಲರಿಗೂ ಪ್ರೇರಣೆಯಾಗಿದೆ ಎಂದು ಹೇಳಿದರು.

ಜೀವನದಲ್ಲಿ ಪ್ರತಿಯೊಬ್ಬರಿಗೂ ಏಳು–ಬೀಳು ಹಾಗೂ ಸವಾಲುಗಳು ಎದುರಾಗುತ್ತವೆ. ಆದರೆ ಆ ಸವಾಲುಗಳಿಗೆ ನಾವು ಯಾವ ರೀತಿಯಲ್ಲಿ ಪ್ರತಿಕ್ರಿಯಿಸಬೇಕು ಎಂಬ ಆಯ್ಕೆ ನಮ್ಮ ಕೈಯಲ್ಲಿರುತ್ತದೆ. ಸವಾಲುಗಳನ್ನೇ ಅವಕಾಶಗಳಾಗಿ ಪರಿವರ್ತಿಸಿಕೊಂಡು ಮುನ್ನಡೆದರೆ ಯಾವುದೇ ಸಾಧನೆಯನ್ನು ಮಾಡಬಹುದು ಎಂಬುದನ್ನು ಶಿಲ್ಪಾ ಅವರು ತಮ್ಮ ಸಾಧನೆಯ ಮೂಲಕ ತೋರಿಸಿಕೊಟ್ಟಿದ್ದಾರೆ ಎಂದು ಅವರು ತಿಳಿಸಿದರು.

ವಿಶೇಷ ಚೇತನರನ್ನು ಕೇವಲ ಅಂಗವೈಕಲ್ಯದ ದೃಷ್ಟಿಯಿಂದ ನೋಡದೆ, ಅವರಲ್ಲಿರುವ ವಿಶೇಷ ಪ್ರತಿಭೆ, ಸಾಮರ್ಥ್ಯ ಮತ್ತು ಚೇತನವನ್ನು ಗುರುತಿಸಿ ಪ್ರೋತ್ಸಾಹಿಸುವುದು ಸಮಾಜದ ಜವಾಬ್ದಾರಿ. ದೇಹಕ್ಕೆ ಎದುರಾಗಿರುವ ಅಡೆತಡೆಗಳು ಮನಸ್ಸಿನ ಶಕ್ತಿ ಮತ್ತು ಆತ್ಮವಿಶ್ವಾಸಕ್ಕೆ ಅಡ್ಡಿಯಾಗಬಾರದು. ಈ ನಿಟ್ಟಿನಲ್ಲಿ ಶಿಲ್ಪಾ ಅವರ ಸಾಧನೆ ಅತ್ಯಂತ ಮಹತ್ವದ್ದಾಗಿದೆ ಎಂದು ಸಿಇಓ ಹೇಳಿದರು.

ಕ್ರೀಡೆ ಕೇವಲ ಸ್ಪರ್ಧೆ ಅಥವಾ ಪದಕ ಗೆಲ್ಲುವ ಸಾಧನವಲ್ಲ; ಅದು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಸದೃಢಗೊಳಿಸುವ ಪ್ರಮುಖ ಸಾಧನವಾಗಿದೆ. ಮಕ್ಕಳು ಮೊಬೈಲ್, ವಿಡಿಯೋ ಗೇಮ್‌ಗಳು ಹಾಗೂ ತಂತ್ರಜ್ಞಾನಕ್ಕೆ ಅತಿಯಾಗಿ ಅವಲಂಬಿತರಾಗುತ್ತಿರುವ ಇಂದಿನ ಸಂದರ್ಭದಲ್ಲಿ, ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳ ಜೀವನದಲ್ಲಿ ಕ್ರೀಡೆಯನ್ನು ಅವಿಭಾಜ್ಯ ಅಂಗವನ್ನಾಗಿ ಮಾಡಬೇಕು ಎಂದು ಅವರು ಕರೆ ನೀಡಿದರು.

ಕ್ರೀಡೆ ಮಕ್ಕಳಿಗೆ ಗೆಲುವನ್ನು ಮಾತ್ರವಲ್ಲದೆ ಸೋಲನ್ನು ಸ್ವೀಕರಿಸುವುದು, ಸೋಲಿನಿಂದ ಮತ್ತೆ ಎದ್ದು ನಿಲ್ಲುವುದು, ಶಿಸ್ತು, ಪರಿಶ್ರಮ, ಬದ್ಧತೆ ಮತ್ತು ಆತ್ಮವಿಶ್ವಾಸವನ್ನು ಕಲಿಸುತ್ತದೆ. ಆದ್ದರಿಂದ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಶಿಕ್ಷಣದ ಜೊತೆಗೆ ಕ್ರೀಡೆಗೂ ಸಮಾನ ಆದ್ಯತೆ ನೀಡಬೇಕು ಎಂದು ನಂದಿನಿ ಕೆ.ಆರ್. ತಿಳಿಸಿದರು.

ಶಿಲ್ಪಾ ಅವರ ಸಾಧನೆ ಒಂದೇ ದಿನದಲ್ಲಿ ರೂಪುಗೊಂಡದ್ದಲ್ಲ. ಅದರ ಹಿಂದೆ ನಿರಂತರ ಪರಿಶ್ರಮ, ಸಮರ್ಪಣೆ, ಬದ್ಧತೆ ಮತ್ತು ಸವಾಲುಗಳನ್ನು ಎದುರಿಸುವ ಧೈರ್ಯವಿದೆ. ಇಂತಹ ಸಾಧಕರ ಜೀವನಗಾಥೆಯನ್ನು ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಗೆ ಪರಿಚಯಿಸುವ ಮೂಲಕ ಸ್ಥಳೀಯ ಪ್ರತಿಭೆಗಳನ್ನು ರೋಲ್ ಮಾಡೆಲ್‌ಗಳಾಗಿ ಬೆಳೆಸಬೇಕು. ನಮ್ಮ ಜಿಲ್ಲೆಯಲ್ಲಿಯೇ ಇಂತಹ ಸಾಧಕರು ಇದ್ದಾರೆ ಎಂಬ ಅರಿವು ಮಕ್ಕಳಲ್ಲಿ ಆತ್ಮವಿಶ್ವಾಸ ಮತ್ತು ಸಾಧನೆಯ ಮನೋಭಾವವನ್ನು ಬೆಳೆಸಲಿದೆ ಎಂದು ಅವರು ಹೇಳಿದರು.

ವಿಶೇಷವಾಗಿ ಗ್ರಾಮೀಣ ಹಿನ್ನೆಲೆಯಿಂದ ಬಂದು, ಯಾವುದೇ ದೊಡ್ಡ ಕ್ರೀಡಾ ಹಿನ್ನೆಲೆ ಅಥವಾ ವಿಶೇಷ ಬೆಂಬಲವಿಲ್ಲದೆ ತಮ್ಮ ಪ್ರತಿಭೆ ಮತ್ತು ಪರಿಶ್ರಮದ ಮೂಲಕ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿರುವ ಶಿಲ್ಪಾ ಅವರು ಯುವಜನತೆಗೆ ಪ್ರೇರಣೆಯಾಗಿದ್ದಾರೆ. ವಿಶೇಷ ಚೇತನರಾಗಿ ಸಾಧನೆ ಮಾಡಿರುವುದು, ಮಹಿಳೆಯಾಗಿ ಕ್ರೀಡಾ ಕ್ಷೇತ್ರದಲ್ಲಿ ಮುನ್ನಡೆದಿರುವುದು ಹಾಗೂ ಗ್ರಾಮೀಣ ಪ್ರತಿಭೆಯಾಗಿ ದೇಶದ ಮಟ್ಟದಲ್ಲಿ ಗುರುತಿಸಿಕೊಂಡಿರುವುದು ಅವರ ಸಾಧನೆಯ ಹಲವು ಆಯಾಮಗಳಾಗಿವೆ ಎಂದು ಸಿಇಓ ನಂದಿನಿ ಕೆ.ಆರ್. ಮೆಚ್ಚುಗೆ ವ್ಯಕ್ತಪಡಿಸಿದರು.

ಮಹಿಳೆಯರು ಹಾಗೂ ವಿಶೇಷ ಚೇತನರಿಗೆ ಸಮಾನ ಅವಕಾಶ, ಪ್ರೋತ್ಸಾಹ ಮತ್ತು ತಾರತಮ್ಯರಹಿತ ವಾತಾವರಣ ದೊರೆತರೆ ಅವರು ಯಾವುದೇ ಕ್ಷೇತ್ರದಲ್ಲಿಯೂ ಉನ್ನತ ಸಾಧನೆ ಮಾಡಬಹುದು? ಎಂಬುದನ್ನು ಶಿಲ್ಪಾ ಅವರ ಸಾಧನೆ ಸಾಬೀತುಪಡಿಸಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಗೀತಾಲಕ್ಷ್ಮಿ, ಡಿಎಸ್–1 ಶಿವಲಿಂಗಯ್ಯ, ಮುಖ್ಯ ಲೆಕ್ಕಾಧಿಕಾರಿ ಶ್ರೀನಿವಾಸ್ ನಾಯಕ್, ಮುಖ್ಯ ಯೋಜನಾಧಿಕಾರಿ ಧನುಷ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಮಣಿಜಶ್ರೀ, ಕ್ರೀಡಾ ತರಬೇತುದಾರ ರಾಘವೇಂದ್ರ, ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಕೋಮಲ್ ಕುಮಾರ್, ಗ್ರಾಮೀಣ ಪುನರ್ವಸತಿ ಯೋಜನೆಯ ಕಾರ್ಯಕರ್ತರು ಹಾಗೂ ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾಡಳಿತದ ಸಿಬ್ಬಂದಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕುಮಾರಿ ಶಿಲ್ಪಾ ಕೆ.ಎಸ್. ಅವರನ್ನು ಜಿಲ್ಲಾ ಪಂಚಾಯತ್, ಜಿಲ್ಲಾಡಳಿತ ಹಾಗೂ ಮಂಡ್ಯ ಜಿಲ್ಲೆಯ ಎಲ್ಲಾ ಸಿಬ್ಬಂದಿ ಮತ್ತು ವಿಶೇಷ ಚೇತನ ಬಂಧುಗಳ ಪರವಾಗಿ ಆತ್ಮೀಯವಾಗಿ ಅಭಿನಂದಿಸಿ, ಅವರ ಮುಂದಿನ ಕ್ರೀಡಾ ಬದುಕಿಗೆ ಶುಭ ಹಾರೈಸಲಾಯಿತು.



**ಶ್ರೀ ಡಿ ಕೆ ಶಿವಕುಮಾರ್**
ಸನ್ಮಾನ್ಯ ಮುಖ್ಯಮಂತ್ರಿಗಳು







**ಡಾ. ಜಿ. ಪರಮೇಶ್ವರ**
ಮಾನ್ಯ ಉಪಮುಖ್ಯಮಂತ್ರಿಗಳು

**ನಾಡಿನ ಸಮಸ್ತ ಜನತೆಗೆ**

# 80ನೇ

## ಸ್ವಾತಂತ್ರ್ಯ ದಿನಾಚರಣೆಯ

**ಶುಭಾಶಯಗಳು**



# ಯುವ ಕರ್ನಾಟಕ ನವ ಭಾರತ

ಇಂದು ನಮಗೆ ನಿಜವಾದ '**ಸ್ವಾತಂತ್ರ್ಯ**' ಎಂದರೆ ಯುವಜನತೆ ಹೊಸ ಕನಸುಗಳನ್ನು ಕಾಣುವ ಅವಕಾಶ, ಹಸಿವಿನಿಂದ ಮುಕ್ತಿ, ಆರ್ಥಿಕ ಆತಂಕವಿಲ್ಲದ ನೆಮ್ಮದಿ, ಮಹಿಳೆಯರ ಬದುಕಿನಲ್ಲಿ ಆತ್ಮವಿಶ್ವಾಸ, ಹಾಗೂ ಪ್ರತಿಯೊಬ್ಬರಿಗೂ ಸಿಗುವ ಗೌರವಯುತ ಬದುಕು. ಇದನ್ನು ಸಾಕಾರಗೊಳಿಸುತ್ತಿರುವ **ಐದು ಗ್ಯಾರಂಟಿ ಯೋಜನೆಗಳು** ಪ್ರತಿಯೊಬ್ಬರ ಜೀವನಕ್ಕೂ ಹೊಸ ಆಶಾಕಿರಣವಾಗಿವೆ.

**ಮಹಾತ್ಮ ಗಾಂಧೀಜಿ**ಯವರ '**ಅಂತ್ಯೋದಯ**' ಹಾಗೂ '**ಸರ್ವೋದಯ**' ತತ್ವಗಳು ಮತ್ತು **ಡಾ. ಬಿ. ಆರ್. ಅಂಬೇಡ್ಕರ್** ಅವರ **ಸಾಂವಿಧಾನಿಕ ಮೌಲ್ಯ**ಗಳ ದಾರಿಯಲ್ಲಿ ಹೆಜ್ಜೆಯಿಡುತ್ತಿರುವ ನಾವು, ಯುವಜನತೆಯ ಶಕ್ತಿಯೊಂದಿಗೆ '**ಯುವ ಕರ್ನಾಟಕ, ನವ ಭಾರತ**'ಕ್ಕಾಗಿ **ಕರ್ನಾಟಕ ಅಭಿವೃದ್ಧಿ ಮಾದರಿ**ಯನ್ನು ನಿರ್ಮಿಸುತ್ತಿದ್ದೇವೆ.

**ಕನ್ನಡಿಗರ ಸಬಲೀಕರಣವೇ ನಮ್ಮ ದೃಢ ಸಂಕಲ್ಪ, ಅದುವೇ ನಮಗೆ ನಿಜ ಸ್ವಾತಂತ್ರ್ಯ.**

ಗ್ಯಾರಂಟಿ ಸರ್ಕಾರ

ಶಕ್ತಿ ಅನ್ನಭಾಗ್ಯ ಗೃಹ ಜ್ಯೋತಿ ಗೃಹಲಕ್ಷ್ಮಿ ಯುವನಿಧಿ

ಸ್ಕ್ಯಾನ್ ಮಾಡಿ,
ಸ್ವಾತಂತ್ರ್ಯದ ಸಂದೇಶ ಕೇಳಿ

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

CMofKarnataka https://dipr.karnataka.gov.in/ Karnatakavarthe ಕರ್ನಾಟಕ ವಾರ್ತೆ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,